RNI .KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 93 ಪುಟ: 06 ಶುಕ್ರವಾರ 07-03-2025


Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB)

Executive Editor: L P Babu






Honourary Editor: Venkatesh

# ನಾಲ್ಕು ಲಕ್ಷ ಕೋಟಿ ಬಜೆಟ್




## 16ನೇ ಬಜೆಟ್ ಮಂಡಿಸಿದ ಸಿದ್ದರಾಮಯ್ಯ: ಸರ್ವರಿಗೂ ಸಮಪಾಲು ಮತ್ತು ಸಮಬಾಳು

**ಬೆಂಗಳೂರು:** ಮುಖ್ಯಮಂತ್ರಿ ಹಾಗೂ ವಿತ್ತ ಸಚಿವರಾದ ಸಿದ್ದರಾಮಯ್ಯ ಅವರು ಶುಕ್ರವಾರ 2025-26ನೇ ಸಾಲಿನ ಬಜೆಟ್ ಅನ್ನು ಮಂಡನೆ ಮಾಡಿದರು.

4 ಲಕ್ಷ ಕೋಟಿ ರೂ.ಗೂ ಅಧಿಕ ಗಾತ್ರದ ದಾಖಲೆಯ ಬಜೆಟ್‌ಅನ್ನು ಮಂಡಿಸಿದ್ದಾರೆ.

ಕಳೆದ ಬಾರಿ ಅಂದರೆ 2024-25ನೇ ಸಾಲಿನಲ್ಲಿ 3.17,383 ಲಕ್ಷ ಕೋಟಿ ರೂ. ಗಾತ್ರದ ಬಜೆಟ್ ಮಂಡನೆ ಮಾಡಿದ್ದ ಸಿಎಂ ಈ ಬಾರಿ ಒಟ್ಟು 4 ಲಕ್ಷ ಕೋಟಿ 9,549.24 ಮೊತ್ತದ ಬಜೆಟ್‌ಅನ್ನು ಮಂಡಿಸಿದ್ದಾರೆ.

ತಮ್ಮ ಮೊಣಕಾಲಿನ ನೋವಿನ ನಡುವೆಯೂ ಶುಕ್ರವಾರ ಆರಂಭದಲ್ಲಿ ನಿಂತೇ ಬಜೆಟ್ ಭಾಷಣ ಆರಂಭಿಸಿದರು. ಆ ನಂತರ ಸಭಾಧ್ಯಕ್ಷರಾದ ಯು. ಟಿ.ಖಾದರ್ ಅವರ ಅನುಮತಿ ಮೇರೆಗೆ ಕುಳಿತು ಬಜೆಟ್ ಪ್ರತಿಯನ್ನು ಓದಲು ಆರಂಭಿಸಿದರು.

ಈ ಬಾರಿಯ ಬಜೆಟ್‌ನಲ್ಲಿ ಸಂಪನ್ಮೂಲ ಕ್ರೂಢೀಕರಣಕ್ಕೆ ಒತ್ತು ನೀಡಲಾಗಿದ್ದು, ಜನ ಸಾಮಾನ್ಯರಿಗೆ ಯಾವುದೇ ರೀತಿಯ ಹೆಚ್ಚಿನ ಹೊರೆಯಾಗದ ರೀತಿಯಲ್ಲಿ ಬಜೆಟ್ ಮಂಡಿಸುವ ಪ್ರಯತ್ನ ಮಾಡಿದ್ದಾರೆ.

ಈ ವೇಳೆ ಮಾತನಾಡುತ್ತಾ, ನಮ್ಮ ಸಂಕಲ್ಪಗಳನ್ನು ಜನರ ಮುಂದಿಡುವ ದೊಡ್ಡ ಹೊಣೆಗಾರಿಕೆ ಮುಂದೆ ನಿಂತಿದ್ದೇನೆ. ನಾಳೆಗಳ ಬಗ್ಗೆ ಭರವಸೆ ಮೂಡಿಸುವ, ನಮ್ಮ ವಾಗ್ದಾನಗಳಲ್ಲಿ ಬಜೆಟ್ ಮಂಡಿಸುತ್ತಿದ್ದೇನೆ. ಬುದ್ಧ, ಬಸವ, ನಾರಾಯಣಗುರು ಅವರ ಆಶಯಗಳಿವೆ ಎಂದು ಕುವೆಂಪು ಅವರ ಕವನ ಹೇಳುವ ಮೂಲಕ ಬಜೆಟ್ ಮಂಡಿಸಿದರು.

ಶಿಕ್ಷಣ, ಆರೋಗ್ಯ ವಲಯಕ್ಕೆ ಹೆಚ್ಚಿನ ಆದ್ಯತೆ ನೀಡುವ ಮೂಲಕ ಸ್ವಾಸ್ಥ್ಯ ಕರ್ನಾಟಕ ನಿರ್ಮಾಣದ ಭರವಸೆಯನ್ನು ವ್ಯಕ್ತಪಡಿಸಿದ್ದಾರೆ.

ರೈತ ಕಲ್ಯಾಣ ಉದ್ದೇಶಿತ ಯೋಜನೆಗಳಿಗೆ ಕಳೆದ ವರ್ಷ 44 ಸಾವಿರ ಕೋಟಿ ರೂ. ಒದಗಿಸಿದ್ದರೆ ಪ್ರಸಕ್ತ ಸಾಲಿನ 51,339 ಕೋಟಿ ರೂ. ನೀಡಲಾಗಿದೆ. ಬಂಡವಾಳ ಹೂಡಿಕೆಯನ್ನು ಆಕರ್ಷಿಸುವ ಯೋಜನೆಗಳಿಗಾಗಿ 13,692 ಕೋಟಿ ರೂ.ಗಳನ್ನು ವೆಚ್ಚ ಮಾಡಲಾಗುತ್ತಿದೆ ಎಂದು ಹೇಳಿದ್ದಾರೆ.

ಹೀಗೆ ಸರ್ವರಿಗೂ ಸಮಪಾಲು ಮತ್ತು ಸಮಬಾಳು ಎನ್ನುವ ಪ್ರಯತ್ನವನ್ನು ಸಿದ್ದರಾಮಯ್ಯ ಅವರು ಮಾಡಿದ್ದಾರೆ.



## ಬೆಂಗಳೂರಿಗೆ ಬಂಪರ್

### ಪೆರಿಫೆರಲ್ ರಿಂಗ್ ರಸ್ತೆ ಯೋಜನೆಗೆ ಮರುಜೀವ

**ಬೆಂಗಳೂರು:** ರಾಜ್ಯದ ಆರ್ಥಿಕತೆಗೆ ಬಹುಮುಖ್ಯ ಕೊಡುಗೆ ನೀಡುವ ಬೆಂಗಳೂರು ನಗರದ ಮೂಲಸೌಲಭ್ಯಗಳ ಅಭಿವೃದ್ಧಿಗೆ ಈ ಬಾರಿಯ ಬಜೆಟ್‌ನಲ್ಲಿ ಆದ್ಯತೆ ನೀಡಲಾಗಿದ್ದು, ಬೆಂಗಳೂರಿನ ಅಭಿವೃದ್ಧಿಗೆ ಪ್ರತಿವರ್ಷ ನೀಡಲಾಗುತ್ತಿದ್ದ 3000 ಕೋಟಿ ರೂ. ಅನುದಾನವನ್ನು ಈ ಬಾರಿ 7000 ಕೋಟಿ ರೂ.ಗಳಿಗೆ ಹೆಚ್ಚಿಸಲಾಗಿದೆ. ಈ ಅನುದಾನವನ್ನು ಬಳಸಿ ಬೃಹತ್ ಅಭಿವೃದ್ಧಿ ಕಾಮಗಾರಿಗಳನ್ನು ಆದ್ಯತೆಯ ಮೇರೆಗೆ ಅನುಷ್ಠಾನಗೊಳಿಸಲು ಹೊಸದಾಗಿ ವಿಶೇಷ ಉದ್ದೇಶಿತ ಸಂಸ್ಥೆ ಸ್ಥಾಪಿಸಲಾಗುವುದು ಎಂದು ತಮ್ಮ ಬಜೆಟ್‌ನಲ್ಲಿ ತಿಳಿಸಿದ್ದಾರೆ ಸುರಂಗ ಮಾರ್ಗದ ಬಗ್ಗೆ ಪ್ರಸ್ತಾಪ: ಬಿಬಿಎಂಪಿಗೆ ಅಂದಾಜು ಮೊತ್ತ 40,000 ಕೋಟಿ ರೂ. ವೆಚ್ಚದಲ್ಲಿ ಉತ್ತರ-ದಕ್ಷಿಣ ಮತ್ತು ಪೂರ್ವ-ಪಶ್ಚಿಮ ಸುರಂಗ ಮಾರ್ಗದ ಕಾರಿಡಾರ್‌ಗಳ ನಿರ್ಮಾಣಕ್ಕೆ ಅನುಕೂಲವಾಗುವಂತೆ ಸರ್ಕಾರ 19,000 ಕೋಟಿ ರೂ.ಗಳ ಗ್ಯಾರಂಟಿಯನ್ನು ನೀಡಿದೆ ಎಂದು ಸಿಎಂ ಸಿದ್ದರಾಮಯ್ಯ ಬಜೆಟ್ ಭಾಷಣದಲ್ಲಿ ಹೇಳಿದರು.

## ರಾಜಸ್ವದಲ್ಲಿ 14500 ಕೋಟಿ ಸಂಗ್ರಹ ನಿರೀಕ್ಷೆ

**ಬೆಂಗಳೂರು:** 2024-25ನೇ ಸಾಲಿಗೆ ತೆರಿಗೆಯೇತರ ರಾಜಸ್ವದಲ್ಲಿ 14,500 ಕೋಟಿ ರೂ.ಗಳು ಸಂಗ್ರಹವಾಗುವ ನಿರೀಕ್ಷೆಯಿದ್ದು, ಆಯವ್ಯಯ ಗುರಿಗಿಂತ ಹೆಚ್ಚು ಸಂಗ್ರಹವಾಗಲಿದೆ. ತೆರಿಗೆಯೇತರ ರಾಜಸ್ವವು ವರ್ಷವಾರು ಶೇ.10.5ರಷ್ಟು ಬೆಳವಣಿಗೆ ಸಾಧಿಸುವ ನಿರೀಕ್ಷೆಯಿದೆ. ಆದರೂ ಜಿ.ಎಸ್.ಡಿ.ಪಿ.ಯ ಶೇಕಡಾವಾರು ಪರಿಗಣಿಸಿದಾಗ ತೆರಿಗೆಯೇತರ ಸಂಪನ್ಮೂಲ ಹೆಚ್ಚಳಕ್ಕೆ ವಿಪುಲ ಅವಕಾಶಗಳಿವೆ. ಸಂಪನ್ಮೂಲ ಕ್ರೋಢೀಕರಣಕ್ಕಾಗಿ ರಾಜ್ಯ ಸರ್ಕಾರವು 'ಸಂಪನ್ಮೂಲ ಕ್ರೋಢೀಕರಣ ಸಮಿತಿ'ಯನ್ನು ರಚನೆ ಮಾಡಿರುತ್ತದೆ. ಈ ಸಮಿತಿಯು ಮಧ್ಯಂತರ ವರದಿಯನ್ನು ನೀಡಿದ್ದು, ಸಮಿತಿಯ ಶಿಫಾರಸ್ಸಿನ ಅನ್ವಯ ಸರ್ಕಾರವು ಸಮಯಾನುಸಾರ ಅಗತ್ಯ ಕ್ರಮಗಳನ್ನು ಕೈಗೊಳ್ಳಲಿದೆ.ಪ್ರಸಕ್ತ ಹಣಕಾಸು ವರ್ಷದಲ್ಲಿ ಗ್ಯಾರಂಟಿ ಯೋಜನೆಗಳಿಗಾಗಿ 51,034 ಕೋಟಿ ರೂ. ಒದಗಿಸಲಾಗಿದೆ. ಕಳೆದ ಎರಡು ಆಯವ್ಯಯಗಳಲ್ಲಿ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನ ಮಾಡುವುದರ ಜೊತೆಗೆ ವಿತ್ತೀಯ ಕೊರತೆಯನ್ನು ಜಿ.ಎಸ್.ಡಿ.ಪಿ. ಯ ಶೇ.3ರ ಮಿತಿಯೊಳಗೆ ಮತ್ತು ಒಟ್ಟು ಹೊಣೆಗಾರಿಕೆಯನ್ನು ಜಿ.ಎಸ್.ಡಿ.ಪಿ. ಯ ಶೇ.25ರ ಮಿತಿಯೊಳಗೆ ನಿಯಂತ್ರಿಸುವ ಮೂಲಕ ವಿತ್ತೀಯ ಶಿಸ್ತನ್ನು ಪಾಲಿಸಲಾಗಿರುತ್ತದೆ ಎಂಬುದು ಗಮನಾರ್ಹ.



## ನಗರೋತ್ಥಾನಕ್ಕೆ 500 ಕೋಟಿ ರೂ.;

### ಪಾಲಿಕೆಗಳಲ್ಲಿ ಇ-Office ವ್ಯವಸ್ಥೆ ಕಡ್ಡಾಯ

**ಬೆಂಗಳೂರು:** ರಾಜ್ಯದ ಮಹಾನಗರ ಪಾಲಿಕೆಗಳಲ್ಲಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ಮಹಾತ್ಮಾ ಗಾಂಧಿ ನಗರ ವಿಕಾಸ್ 2.0 ಯೋಜನೆಗೆ 2,000 ಕೋಟಿ ರೂ. ಅನುದಾನ ಘೋಷಿಸಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಬಜೆಟ್ ಭಾಷಣದಲ್ಲಿ ಹೇಳಿದ್ದಾರೆ. ಪ್ರಸಕ್ತ ಸಾಲಿನಲ್ಲಿ ಯುಐಡಿಎಫ್ ಅಡಿಯಲ್ಲಿ 600 ಕೋಟಿ ರೂ. ಅನುದಾನ ಒದಗಿಸಲಾಗಿದೆ.

**ನಗರೋತ್ಥಾನಕ್ಕೆ 500 ಕೋಟಿ ರೂ.:** ನಗರೋತ್ಥಾನ 4ನೇ ಹಂತದ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು 2024-26ನೇ ಸಾಲಿಗೆ 500 ಕೋಟಿ ರೂ.ಗಳನ್ನು ಒದಗಿಸಲಾಗುವುದು ಎಂದು ಬಜೆಟ್‌ನಲ್ಲಿ ತಿಳಿಸಲಾಗಿದೆ.

**ಇ-ಔಜಿಜುಛಿಜ ವ್ಯವಸ್ಥೆ ಕಡ್ಡಾಯ:** ರಾಜ್ಯದ ಎಲ್ಲ ಮಹಾನಗರ ಪಾಲಿಕೆಗಳು, ಜಿಲ್ಲಾ ನಗರಾಭಿವೃದ್ಧಿ ಕೋಶಗಳು ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಸೆಂಟರ್ ಫಾರ್ ಇ-ಗವರ್ನೆನ್ಸ್ ಇಲಾಖೆಯ ಸಹಯೋಗದೊಂದಿಗೆ ಕಚೇರಿಯ ಸುಗಮ ಆಡಳಿತಕ್ಕೆ ಇ-Office ವ್ಯವಸ್ಥೆ ಕಡ್ಡಾಯಗೊಳಿಸಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ನೀರು, ಒಳಚರಂಡಿ ಕಾಮಗಾರಿಗಳಿಗೆ ಅನುದಾನ: ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ವತಿಯಿಂದ ರಾಮನಗರ ಮತ್ತು ಉಲ್ಲಾಳಕ್ಕೆ 705 ಕೋಟಿ ರೂ. ವೆಚ್ಚದಲ್ಲಿ ಕುಡಿಯುವ ನೀರಿನ ಯೋಜನೆಯನ್ನು ಅನುಷ್ಠಾನಗೊಳಿಸಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ಬಜೆಟ್‌ನಲ್ಲಿ ಘೋಷಿಸಿದ್ದಾರೆ. ಅಮೃತ್-2 ಯೋಜನೆಯಡಿಯಲ್ಲಿ 233 ಕುಡಿಯುವ ನೀರು ಯೋಜನೆಯನ್ನು ಕೈಗೆತ್ತಿಕೊಳ್ಳಲು ಉದ್ದೇಶಿಸಿದೆ ಎಂದು ತಿಳಿಸಲಾಗಿದೆ.

## ಇಲಾಖಾವಾರು ಮಾಹಿತಿ

**ಶಿಕ್ಷಣ ಇಲಾಖೆ: 45,286 ಸಾವಿರ ಕೋಟಿ ರೂ.**

**ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ: 34,955 ಕೋಟಿ ರೂ.**

**ಇಂಧನ ಇಲಾಖೆ: 26, 896 ಕೋಟಿ ರೂ.**

**ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಇಲಾಖೆ: 26,735 ಕೋಟಿ ರೂ.**

**ನೀರಾವರಿ ಇಲಾಖೆ: 22, 181ಕೋಟಿ ರೂ.**

**ನಗರಾಭಿವೃದ್ಧಿ ಮತ್ತು ವಸತಿ ಇಲಾಖೆ: 21,405 ಕೋಟಿ ರೂ.**

**ಒಳಾಡಳಿತ ಸಾರಿಗೆ ಇಲಾಖೆ: 20, 625 ಕೋಟಿ ರೂ.**

**ಆರೋಗ್ಯ ಕುಟುಂಬ ಕಲ್ಯಾಣ: 17,473 ಕೋಟಿ ರೂ.**

**ಕಂದಾಯ ಇಲಾಖೆ 17,201 ಕೋಟಿ ರೂ.**

# 20 ಲಕ್ಷ ಉದ್ಯೋಗ ಸೃಷ್ಟಿಸುವ ಗುರಿ: ಸಿಎಂ



**ಬೆಂಗಳೂರು:** ಕೈಗಾರಿಕಾ ವಲಯದಲ್ಲಿ ಹೂಡಿಕೆ ಸ್ನೇಹಿ ವಾತಾವರಣವನ್ನು ನಿರ್ಮಿಸುವಲ್ಲಿ ಕರ್ನಾಟಕವು ನೆಚ್ಚಿನ ರಾಜ್ಯವಾಗಿದೆ. ಹೂಡಿಕೆದಾರರನ್ನು ಆಕರ್ಷಿಸಲು 13,692 ಕೋಟಿ ರೂ. ಆರ್ಥಿಕ ನೆರವು ನೀಡಲು ಸರ್ಕಾರ ಸಮ್ಮತಿಸಿದೆ ಎಂದು ಸಿಎಂ ಸಿದ್ದರಾಮಯ್ಯ ಬಜೆಟ್ ನಲ್ಲಿ ಘೋಷಣೆ ಮಾಡಿದ್ದಾರೆ.

ವಿಧಾನಸಭೆಯಲ್ಲಿ 2025–26ನೇ ಸಾಲಿನ ಬಜೆಟ್ ಮಂಡನೆ ಮಾಡುತ್ತಿರುವ ಸಿಎಂ ಸಿದ್ದರಾಮಯ್ಯ, ನಮ್ಮ ಸರ್ಕಾರವು ಹೆಚ್ಚಿನ ಉದ್ಯೋಗವನ್ನು ಸೃಜಿಸುವುದರೊಂದಿಗೆ, ಕೈಗಾರಿಕಾ ಮತ್ತು ಉತ್ಪಾದನಾ ವಲಯದ ಸಮಗ್ರ ಅಭಿವೃದ್ಧಿಗೆ ಬದ್ಧವಾಗಿದೆ. ರಾಜ್ಯ ಸರ್ಕಾರವು ಕೈಗಾರಿಕಾ ನೀತಿ 2025–30ಕ್ಕೆ ಚಾಲನೆ ನೀಡಿದ್ದು, ಇದು 2030 ರ ವೇಳೆಗೆ ಉತ್ಪಾದನಾ ವಲಯದಲ್ಲಿ ಶೇ.12ರಷ್ಟು ವಾರ್ಷಿಕ ಬೆಳವಣಿಗೆಯನ್ನು ಸಾಧಿಸುವುದರೊಂದಿಗೆ 20 ಲಕ್ಷ ಉದ್ಯೋಗಗಳನ್ನು ಸೃಜಿಸುವ ಗುರಿ ಹೊಂದಿದೆ. 2024–25ನೇ ಸಾಲಿನಲ್ಲಿ ಕೈಗಾರಿಕಾ ವಲಯವು ಶೇ.5.8ರಷ್ಟು ಬೆಳವಣಿಗೆ ಸಾಧಿಸಿದೆ. ರಾಜ್ಯಕ್ಕೆ ಹೆಚ್ಚಿನ ಹೂಡಿಕೆಗಳನ್ನು ಆಕರ್ಷಿಸುವ ಉದ್ದೇಶದಿಂದ ಒಟ್ಟು 13,692 ಕೋಟಿ ರೂ. ಆರ್ಥಿಕ ನೆರವು ಮತ್ತು ಸಹಾಯಧನವನ್ನು ಒದಗಿಸಲು ಸರ್ಕಾರವು ಸಮ್ಮತಿಸಿದೆ ಎಂದು ತಿಳಿಸಿದ್ದಾರೆ.

ಕರ್ನಾಟಕದ ಆರ್ಥಿಕತೆಯಲ್ಲಿ ಸೇವಾ ವಲಯದ ಕೊಡುಗೆಯೂ ಪ್ರಮುಖವಾಗಿದ್ದು, ಒಟ್ಟು ಮೌಲ್ಯವರ್ಧನೆಯಲ್ಲಿ ಸೇವಾ ವಲಯಗಳ ಪಾಲು ಶೇ.66 ರಷ್ಟಿದೆ. 2024–25ನೇ ಸಾಲಿಗೆ ರಾಜ್ಯದಲ್ಲಿ ಸೇವಾ ವಲಯವು ಗಣನೀಯವಾಗಿ ಬೆಳವಣಿಗೆಯಾಗಿದ್ದು, ಶೇ.8.9 ರಷ್ಟು ಬೆಳವಣಿಗೆ ದಾಖಲಿಸುವ ಮೂಲಕ ದೇಶದ ಆರ್ಥಿಕತೆಯಲ್ಲಿನ ಸೇವಾ ವಲಯದ ಬೆಳವಣಿಗೆ ಶೇ.7.2 ಕ್ಕಿಂತ ಹೆಚ್ಚಾಗಿದೆ ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದ್ದಾರೆ.

ಆರ್ಥಿಕ ಬೆಳವಣಿಗೆ ಮತ್ತು ಹೆಚ್ಚಿನ ಉದ್ಯೋಗಾವಕಾಶಗಳನ್ನು ಸೃಜಿಸಲು ಸರ್ಕಾರವು ಮಾಹಿತಿ ತಂತ್ರಜ್ಞಾನ, ಪ್ರವಾಸೋದ್ಯಮ, ಜೈವಿಕ ತಂತ್ರಜ್ಞಾನ ಸೇರಿದಂತೆ ಕೈಗಾರಿಕೆ ಮತ್ತು ಸೇವಾ ವಲಯದಲ್ಲಿ ಹಲವು ನೀತಿಗಳನ್ನು ಜಾರಿಗೆ ತಂದಿದೆ. ಈ ನೀತಿಗಳು ಮಾನವ ಸಂಪನ್ಮೂಲವನ್ನು ಸಮರ್ಥವಾಗಿ ಬಳಸುವುದರ ಜೊತೆಗೆ ರಾಜ್ಯದ ವಿವಿಧ ಕ್ಷೇತ್ರಗಳಲ್ಲಿ ಹೆಚ್ಚಿನ ಹೂಡಿಕೆಗಳನ್ನು ಉತ್ತೇಜಿಸಲಿವೆ. ಸರ್ಕಾರವು ಜಾರಿಗೆ ತಂದಿರುವ ಈ ನೀತಿಗಳಿಂದ ರಾಜ್ಯದಲ್ಲಿ ಅಂದಾಜು ಒಂದು ಲಕ್ಷ ಕೋಟಿ ರೂ. ಹೂಡಿಕೆಯನ್ನು ನಿರೀಕ್ಷಿಸಲಾಗಿದೆ. ಈ ಉದ್ದೇಶಕ್ಕೆ ಸರ್ಕಾರವು 13,500 ಕೋಟಿ ರೂ. ಸಹಾಯಧನ ಮತ್ತು ಆರ್ಥಿಕ ನೆರವು ನೀಡಲು ಸಹಮತಿಸಿದೆ ಎಂದು ನುಡಿದಿದ್ದಾರೆನಮ್ಮ ಸರ್ಕಾರವು ಆರ್ಥಿಕತೆಯ ಬೆಳವಣಿಗೆಗೆ ಹೆಚ್ಚಿನ ಪ್ರಾಶಸ್ತ್ಯ ನೀಡಿದ್ದು, 2024–25ರ ಡಿಸೆಂಬರ್ ಅಂತ್ಯದವರೆಗೆ 4.4 ಬಿಲಿಯನ್ ಡಾಲರ್ ಮೌಲ್ಯದ ವಿದೇಶಿ ಹೂಡಿಕೆಗಳನ್ನು ಆಕರ್ಷಿಸುವ ಮೂಲಕ ದೇಶದಲ್ಲಿಯೇ ಮೂರನೇ ಸ್ಥಾನದಲ್ಲಿದೆ ಎಂದು ಸಿಎಂ ಸಿದ್ದರಾಮಯ್ಯ ಸಂತಸ ವ್ಯಕ್ತಪಡಿಸಿದರು.

## ವಕ್ಫ್ ಆಸ್ತಿ, ಮುಸ್ಲಿಂ ಸ್ಮಾಶನಗಳ ರಕ್ಷಣೆಗೆ 150 ಕೋಟಿ

**ಬೆಂಗಳೂರು:** ವಕ್ಫ್ ಆಸ್ತಿಗಳ ದುರಸ್ತಿ ಮತ್ತು ನವೀಕರಣ, ಮುಸ್ಲಿಂ ಸ್ಮಶಾನಗಳ ರಕ್ಷಣೆಗಾಗಿ ಮೂಲಸೌಕರ್ಯ ಒದಗಿಸಲು 150 ಕೋಟಿ ರೂ.ಗಳನ್ನು ಒದಗಿಸಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಬಜೆಟ್‌ನಲ್ಲಿ ಘೋಷಣೆ ಮಾಡಿದರು.

ದೇಶದಾದ್ಯಂತ ವಕ್ಫ್ ಆಸ್ತಿ ವಿಚಾರ ಚರ್ಚೆಯಲ್ಲಿರುವ ಮತ್ತು ರಾಜ್ಯದಲ್ಲಿ ಅನೇಕ ರೈತರ ಜಮೀನಿಗೆ ಸಂಬಂಧಿಸಿ ವಕ್ಫ್ ಆಸ್ತಿ ಎಂಬ ನೋಟಿಸ್ ಬಂದಿರುವ ವಿಚಾರ ತೀವ್ರ ಚರ್ಚೆಗೆ ಗ್ರಾಸವಾಗಿರುವ ಸಂದರ್ಭದಲ್ಲೇ ಸಿದ್ದರಾಮಯ್ಯ ಬಜೆಟ್‌ನಲ್ಲಿ ಮಹತ್ವದ ಘೋಷಣೆ ಮಾಡಿದ್ದಾರೆ.

ಮೌಲಾನಾ ಆಜಾದ್ ಪಬ್ಲಿಕ್ ಶಾಲೆ ಅಭಿವೃದ್ಧಿ ಅಡಿ ಆಯ್ದ 100 ಉನ್ನತ ಶಾಲೆಗಳಿಗೆ ಮೂಲಸೌಕರ್ಯ ಒದಗಿಸಲು 400 ಕೋಟಿ ರೂ. ಅನುದಾನ ನೀಡಲಾಗುತ್ತಿದ್ದು, ಈ ವರ್ಷ 100 ಕೋಟಿ ರೂ. ಬಿಡುಗಡೆ ಮಾಡಲಾಗುವುದು.ಮದರಸ ಶಿಕ್ಷಣ ಬಲಪಡಿಸುವ ಯೋಜನೆಯಡಿ ಕಂಪ್ಯೂಟರ್, ಸ್ಮಾರ್ಟ್ ಬೋರ್ಡ್ ಮತ್ತಿತರ ಸೌಲಭ್ಯಗಳೊಂದಿಗೆ ಓಖಔಖ ಮುಖಾಂತರ ಖಖಐಅ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಲಾಗುವುದು ಎಂದು ಬಜೆಟ್‌ನಲ್ಲಿ ಸಿದ್ದರಾಮಯ್ಯ ಘೋಷಣೆ ಮಾಡಿದ್ದಾರೆ.

ಕರ್ನಾಟಕ ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮದ ಮೂಲಕ ಉದ್ಯೋಗ ಹಾಗೂ ತರಬೇತಿ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ. ಉಳ್ಳಾಲದಲ್ಲಿ ಅಲ್ಪಸಂಖ್ಯಾತ ವಿದ್ಯಾರ್ಥಿನಿಯರಿಗೆ ವಸತಿ ಸಹಿತ ಕಾಲೇಜು ನಿರ್ಮಾಣ ಘೋಷಣೆ ಮಾಡಲಾಗಿದೆ.

## 40 ಸಾವಿರ ಕೋಟಿ ಆದಾಯ ಗುರಿ




**ಬೆಂಗಳೂರು:** ಮದ್ಯದ ಬೆಲೆಯನ್ನು ಮತ್ತೆ ಏರಿಸುವ ಬಗ್ಗೆ ರಾಜ್ಯ ಸರ್ಕಾರ ಬಜೆಟ್‌ನಲ್ಲಿ ಸುಳಿವು ನೀಡಿದೆ. ಪ್ರೀಮಿಯಂ ಮದ್ಯದ ಬೆಲೆಗಳನ್ನು ನೆರೆಯ ರಾಜ್ಯಗಳಲ್ಲಿ ವಿಧಿಸುತ್ತಿರುವ ಬೆಲೆಗಳಿಗೆ ಅನುಸಾರವಾಗಿ ರಾಜ್ಯದಲ್ಲೂ ಬೆಲೆ ಏರಿಕೆ ಮಾಡಲು ಸರ್ಕಾರ ಅಬಕಾರಿ ಸ್ಲ್ಯಾಬ್‌ಗಳನ್ನು ಪರಿಷ್ಕರಣೆ ಮಾಡುವುದಾಗಿ ಹೇಳಿದೆ.

ಜೊತೆಗೆ, ಮದ್ಯ ಮಾರಾಟವನ್ನು ಹೆಚ್ಚಿಸಲು ಖಾಲಿ ಇರುವ ಅಥವಾ ಲಭ್ಯವಿರುವ ಪರವಾನಗಿಗಳನ್ನು ಪಾರದರ್ಶಕ ಎಲೆಕ್ಟ್ರಾನಿಕ್ ಹರಾಜಿನ ಮೂಲಕ ಹಂಚಿಕೆ ಮಾಡಲು ಬಜೆಟ್‌ನಲ್ಲಿ ಪ್ರಸ್ತಾಪಿಸಲಾಗಿದೆ. ಇದರಿಂದ ಹೆಚ್ಚುವರಿ ಆದಾಯವನ್ನು ಸಂಗ್ರಹಣೆ ಗುರಿ ಹೊಂದಲಾಗಿದೆ.

ಆನ್‌ಲೈನ್ ಮೂಲಕ ಅಬಕಾರಿ ಸೇವೆ: ಅಬಕಾರಿ ಇಲಾಖೆಯ ಎಲ್ಲಾ ಸೇವೆಗಳನ್ನು ಡಿಜಿಟಲೀಕರಣ ಮಾಡಲು ಸರ್ಕಾರ ಮುಂದಾಗಿದೆ. ಇದಕ್ಕಾಗಿ ತಂತ್ರಾಂಶವನ್ನು ರೂಪಿಸಲಾಗುವುದು. ಇದರಿಂದ ಆಡಳಿತದಲ್ಲಿ ದಕ್ಷತೆ ಹೆಚ್ಚಲಿದೆ. ಸಾರ್ವಜನಿಕ ಸೇವೆ ಸುಧಾರಿಸಲಿದೆ ಎಂದು ಬಜೆಟ್‌ನಲ್ಲಿ ಉಲ್ಲೇಖಿಸಲಾಗಿದೆ. 2024–25ನೇ ಸಾಲಿನಲ್ಲಿ ಅಬಕಾರಿ ತೆರಿಗೆಯಿಂದ 36,500 ಕೋಟಿ ರೂಪಾಯಿ ಆದಾಯ ನಿರೀಕ್ಷಿಸಲಾಗಿತ್ತು. ಇದೀಗ, 2025–26 ನೇ ಆರ್ಥಿಕ ವರ್ಷದಲ್ಲಿ 40 ಸಾವಿರ ಕೋಟಿ ರೂಪಾಯಿ ಸಂಗ್ರಹಣೆ ಗುರಿ ಹಾಕಿಕೊಳ್ಳಲಾಗಿದೆ.

## ಕೃಷಿಗೆ 51,339 ಕೋಟಿ ರೂ.



ಸಿಎಂ ಸಿದ್ದರಾಮಯ್ಯ 2025–26ನೇ ಸಾಲಿನ ಬಜೆಟ್ ಮಂಡನೆ ಮಾಡುತ್ತಿದ್ದು ಬಜೆಟ್ ನಲ್ಲಿ ಕೃಷಿಗೆ ಹೆಚ್ಚು ನೀಡಿರುವುದಾಗಿ ತಿಳಿಸಿದ್ದಾರೆ.

ಸಿದ್ದರಾಮಯ್ಯ ಅವರು, ಕೃಷಿವಲಯಕ್ಕೆ ಈ ಬಾರಿ 51,339 ಕೋಟಿ ರೂ. ಅನುದಾನವನ್ನು ಘೋಷಣೆ ಮಾಡಿದ್ದಾರೆ.

ಕಳೆದ ವರ್ಷದಲ್ಲಿ ಶೇ.–4.9 ರಷ್ಟು ಬೆಳವಣಿಗೆ ದಾಖಲಾಗಿದ್ದ ಕೃಷಿ ವಲಯವು, 2024–25ರಲ್ಲಿ ಶೇ. 4ರಷ್ಟು ಬೆಳವಣಿಗೆ ಸಾಧಿಸುವ ಮೂಲಕ ಚೇತರಿಕೆ ಕಂಡಿದ್ದು, ದೇಶದ ಕೃಷಿ ವಲಯದ ಬೆಳವಣಿಗೆ ಶೇ.3.8ಕ್ಕಿಂತ ಹೆಚ್ಚಾಗಿದೆ. ಮುಂಗಾರು ಬಿತ್ತನೆಗೆ ಸರ್ಕಾರದ ಸಕಾರಾತ್ಮಕ ಕ್ರಮಗಳೊಂದಿಗೆ ಉತ್ತಮ ಮುಂಗಾರು ಮತ್ತು ಜಲಾಶಯಗಳು ಭರ್ತಿಯಾಗಿದ್ದರಿಂದ 2024–25ನೇ ಸಾಲಿನಲ್ಲಿ ಕೃಷಿ ವಲಯದಲ್ಲಿ ಒಳ್ಳೆಯ ಬೆಳವಣಿಗೆ ಸಾಧಿಸಲು ಕಾರಣವಾಗಿದೆ. ರಾಜ್ಯ ಸರ್ಕಾರವು ರೈತರ ಕಲ್ಯಾಣ ಉದ್ದೇಶಿತ ಯೋಜನೆಗಳಿಗೆ ವಿವಿಧ ಇಲಾಖೆಗಳಿಗೆ ಕಳೆದ ವರ್ಷ 44,000 ಕೋಟಿ ರೂ. ನೀಡಲಾಗಿತ್ತು. ಪ್ರಸಕ್ತ ವರ್ಷದಲ್ಲಿ ಒಟ್ಟು 51,339 ಕೋಟಿ ರೂ. ಅನುದಾನವನ್ನು ನೀಡಲಾಗಿದೆ ಎಂದು ತಿಳಿಸಿದ್ದಾರೆ.



## ಎಸ್‌ಸಿಪಿ, ಟಿಎಸ್‌ಪಿ ಯೋಜನೆಗೆ 42,018 ಕೋಟಿ

ಬೆಂಗಳೂರು: ಎಸ್‌ಸಿಪಿ/ಟಿಎಸ್ ಪಿ ಯೋಜನೆಗೆ 42, 018 ಕೋಟಿ ರೂ. ಮೀಸಲು ಇಡಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ಘೋಷಣೆ ಮಾಡಿದ್ದಾರೆ. ಬಜೆಟ್ ನಲ್ಲಿ ಈ ಕುರಿತು ಉಲ್ಲೇಖಿಸಿರುವ ಸಿಎಂ ಸಿದ್ದರಾಮಯ್ಯ, ಎಸ್‌ಸಿ, ಎಸ್‌ಟಿ ಸಮುದಾಯಕ್ಕೆ 2 ಕೋಟಿ ರೂಪಾಯಿಯವರೆಗಿನ ಕಾಮಗಾರಿಗಳಲ್ಲಿ ಮೀಸಲಾತಿ ನೀಡಲಾಗುವುದು. ಎಸ್ ಸಿಪಿ ಟಿಎಸ್‌ಪಿ ಯೋಜನೆಗೆ 42018 ಕೋಟಿ ರೂ. ಮೀಸಲು ಇಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬಜೆಟ್‌ನಲ್ಲಿ ಘೋಷಿಸಿದ್ದಾರೆ.

ಸರ್ಕಾರದ ಗುತ್ತಿಗೆಯಲ್ಲಿ ಮುಸ್ಲೀಮರಿಗೆ ಮೀಸಲಾತಿ 2 ಕೋಟಿವರೆಗಿನ ಗುತ್ತಿಗೆಯಲ್ಲಿ ಮೀಸಲಾತಿ ನೀಡಲಾಗುವುದು. 2ಎ, 2ಬಿ ಪ್ರವರ್ಗದ ಗುತ್ತಿಗೆದಾರರಿಗೂ ಮೀಸಲಾತಿ ನೀಡಲಾಗುತ್ತದೆ ಎಂದು ತಿಳಿಸಿದ್ದಾರೆ.

## ಬೆಂಗಳೂರು ಮೆಜೆಸ್ಟಿಕ್ ಬಸ್ ನಿಲ್ದಾಣಕ್ಕೆ ಕಾಯಕಲ್ಪ, ಬಜೆಟ್‌ನಲ್ಲಿ ಮಹತ್ವದ ಘೋಷಣೆ

**ಬೆಂಗಳೂರು:** ಬೆಂಗಳೂರು ಮೆಜೆಸ್ಟಿಕ್ ಬಸ್ ನಿಲ್ದಾಣದ ಜಾಗವನ್ನು ಪ್ರೊಜೆಕ್ಟ್ ಮೆಜೆಸ್ಟಿಕ್ ಯೋಜನೆಯ ಅಡಿ ಸರ್ಕಾರಿ ಖಾಸಗಿ ಸಹ ಭಾಗಿತ್ವದ ಆಧಾರದ ಮೇಲೆ ಪುನರ್ ಅಭಿವೃದ್ಧಿಪಡಿಸಿ ವಾಣಿಜ್ಯ ಸಂಕೀರ್ಣದೊಂದಿಗೆ ಸಾರಿಗೆ ಹಬ್ ನಿರ್ಮಿಸಲು ಉದ್ದೇಶಿಸಲಾಗಿದೆ ಎಂದು ಸಿಎಂ ಸಿದ್ದರಾಮಯ್ಯ ಬಜೆಟ್‌ನಲ್ಲಿ ಘೋಷಣೆ ಮಾಡಿದರು.

ಇದರೊಂದಿಗೆ, ಮೆಜೆಸ್ಟಿಕ್ ಬಸ್ ನಿಲ್ದಾಣಕ್ಕೆ ಕಾಯಕಲ್ಪ ನೀಡಿ ಆಧುನೀಕರಣಗೊಳಿಸಲು ಸರ್ಕಾರ ಮುಂದಾದಂತಾಗಿದೆ.

ಬೆಂಗಳೂರು ಮಾತ್ರವಲ್ಲದೆ, ರಾಜ್ಯದ ಇತರ ಪ್ರಮುಖ ನಗರಗಳ ಬಸ್ ನಿಲ್ದಾಣಗಳನ್ನು ಮೇಲ್ದರ್ಜೆಗೆ ಏರಿಸಲೂ ಬಜೆಟ್‌ನಲ್ಲಿ ಕ್ರಮ ಕೈಗೊಳ್ಳಲಾಗಿದೆ. ಮೈಸೂರಿನ ಬನ್ನಿಮಂಟಪದಲ್ಲಿ ಅತ್ಯಾಧುನಿಕ ಬಸ್ ನಿಲ್ದಾಣವನ್ನು ಒಟ್ಟಾರೆ 120 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುವುದು ಎಂದು ಸಿದ್ದರಾಮಯ್ಯ ಘೋಷಣೆ ಮಾಡಿದರು.



ರಾಜ್ಯದ ವಿವಿಧ ಸಾರಿಗೆ ನಿಗಮಗಳಲ್ಲಿ 1000 ಹೊಸ ಡೀಸೆಲ್ ಬಸ್ಸುಗಳನ್ನು ಜಿಸಿಸಿ ಆಧಾರದಲ್ಲಿ ಸೇರ್ಪಡೆಗೊಳಿಸಲಾಗುವುದು ಎಂದು ಬಜೆಟ್‌ನಲ್ಲಿ ತಿಳಿಸಲಾಗಿದೆ.

## ವಿವಿಗೆ ಮನಮೋಹನ್ ಸಿಂಗ್ ಯೂನಿವರ್ಸಿಟಿ ಎಂದು ಮರುನಾಮಕರಣ



ಜ್ಞಾನಭಾರತಿ ಕ್ಯಾಂಪಸ್‌ನಲ್ಲಿರುವ ಬೆಂಗಳೂರು ವಿಶ್ವವಿದ್ಯಾಲಯದ ಹೆಸರನ್ನು ಬದಲಾಯಿಸಲಾಗುತ್ತಿದೆ. ಮಾಜಿ ಪ್ರಧಾನಿ, ದಿವಂಗತ ಡಾ। ಮನಮೋಹನ್ ಸಿಂಗ್ ಅವರ ಹೆಸರನ್ನು ಬೆಂಗಳೂರು ವಿವಿಗೆ ಇಡಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಬಜೆಟ್‌ನಲ್ಲಿ ತಿಳಿಸಿದ್ದಾರೆ.

ಬೆಂಗಳೂರು ವಿವಿ ಹೆಸರು ಬದಲಾವಣೆ, ಬಜೆಟ್‌ನ ಅನಿರೀಕ್ಷಿತ ಘೋಷಣೆಗಳಲ್ಲಿ ಒಂದು. ಎರಡು ಅವಧಿಗೆ ಒಟ್ಟು ಹತ್ತು ವರ್ಷ ಕಾಲ ಭಾರತದ ಪ್ರಧಾನಿಯಾಗಿದ್ದ ಮನಮೋಹನ್ ಸಿಂಗ್ 2024ರ ಡಿಸೆಂಬರ್ ತಿಂಗಳಲ್ಲಿ ಇಹಲೋಕ ತ್ಯಜಿಸಿದ್ದಾರೆ. ಭಾರತದ ಆಧುನಿಕ ಆರ್ಥಿಕತೆಯ ರೂವಾರಿಗಳಲ್ಲಿ ಒಬ್ಬರೆಂದು ಪರಿಗಣಿಸಲಾಗಿರುವ ಮನಮೋಹನ್ ಸಿಂಗ್ ಅವರ ಗೌರವ ಸೂಚಕವಾಗಿ ಬೆಂಗಳೂರು ವಿಶ್ವವಿದ್ಯಾಲಯಕ್ಕೆ ಅವರ ಹೆಸರನ್ನು ಇಡಲಾಗಿದೆ.

## ವಿಶ್ವೇಶ್ವರಯ್ಯ ತಾಂತ್ರಿಕ ವಿವಿ ಘಟಕ ಸ್ಥಾಪನೆಗೆ 150 ಕೋಟಿ

**ಬೆಂಗಳೂರು:** ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲ್ಲೂಕಿನಲ್ಲಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಘಟಕ ಕಾಲೇಜನ್ನು 150 ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲಾಗುವುದು.

ಅಜೀಂ ಪ್ರೇಮ್‌ಜೀ ಫೌಂಡೇಶನ್‌ರವರ ಸಹಯೋಗದೊಂದಿಗೆ ಕಾಲೇಜು ಶಿಕ್ಷಣ ಇಲಾಖೆಯ ಎಲ್ಲಾ ಬೋಧಕರಿಗೆ ಬೋಧನೆ ಮತ್ತು ಕಲಿಕೆಯನ್ನು ಉತ್ತಮಪಡಿಸಲು ಮುಂದಿನ ಮೂರು ವರ್ಷದೊಳಗೆ ಪುನರ್ ಮನನ ತರಬೇತಿ ನೀಡಲಾಗುವುದು.

ಸರ್ಕಾರಿ ಶಿಕ್ಷಣ ಸಂಸ್ಥೆಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಮಾರುಕಟ್ಟೆ ಆಧಾರಿತ ಕೌಶಲ್ಯ ತರಬೇತಿಗಳನ್ನು ಒದಗಿಸಿ ಉದ್ಯೋಗಕ್ಕೆ ಸಜ್ಜುಗೊಳಿಸಲು ಕೈಗಾರಿಕೆಗಳ ಸಹಭಾಗಿತ್ವದಲ್ಲಿ Internship Program ಹಾಗೂ ವಿಶೇಷ ಕಾರ್ಪೋರೇಟ್ ತರಬೇತಿ ಯೋಜನೆಗಳನ್ನು ರೂಪಿಸಲಾಗುವುದು ಎಂದಿದ್ದಾರೆ

ಏಏಖಅಃ ವತಿಯಿಂದ 23,000 ವಿದ್ಯಾರ್ಥಿಗಳಿಗೆ ವಿಶೇಷ ಕೌಶಲ್ಯ ಅಭಿವೃದ್ಧಿ ಕಾರ್ಯಕ್ರಮಗಳನ್ನು 10 ಕೋಟಿ ರೂ. ವೆಚ್ಚದಲ್ಲಿ ಹಮ್ಮಿಕೊಳ್ಳಲಾಗುವುದು. ಪ್ರೊ. ನಂಜುಂಡ ಸ್ವಾಮಿ ಸಂಶೋಧನಾ ಪೀಠವನ್ನು ಮೈಸೂರು ವಿಶ್ವವಿದ್ಯಾಲಯದಲ್ಲಿ ಪ್ರಾರಂಭಿಸಲಾಗುವುದು.

## ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ 5 ಸಾವಿರ ಕೋಟಿ

**ಬೆಂಗಳೂರು:** ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ವಿಶೇಷ ಕಾರ್ಯಕ್ರಮದಡಿ 5 ಸಾವಿರ ಕೋಟಿ ರೂ. ಅನುದಾನ ನೀಡಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ಘೋಷಣೆ ಮಾಡಿದ್ದಾರೆ.

ಕಲ್ಯಾಣ ಕರ್ನಾಟಕ ಅಭಿವೃದ್ಧಿಗೆ ವಿಶೇಷ ಕಾರ್ಯಕ್ರಮದಡಿ 5 ಸಾವಿರ ಕೋಟಿ ರೂ. ಅನುದಾನ ನೀಡಲಾಗುವುದು ಕಲ್ಯಾಣ ಕರ್ನಾಟಕ ಭಾಗದಲ್ಲಿ 5,267 ಶಿಕ್ಷಕರ ಹುದ್ದೆಗಳ ಭರ್ತಿಗೆ ಕ್ರಮ ಕೈಗೊಳ್ಳಲಾಗುವುದು. ತರ್ಕಬದ್ಧಗೊಳಿಸಿ 5000 ಹುದ್ದೆಗಳನ್ನ ಭರ್ತಿ ಮಾಡಲಾಗುವುದು ಎಂದು ಘೋಷಿಸಿದ್ದಾರೆ.

## 3 ಕೋಟಿ ರೂ. ವೆಚ್ಚದಲ್ಲಿ ಹೊಸ ಅಗ್ನಿಶಾಮಕ ಠಾಣಾ ಕಟ್ಟಡ ನಿರ್ಮಾಣ



**ಬೆಂಗಳೂರು:** ಮೈಸೂರು ನಗರ ವ್ಯಾಪ್ತಿಯಲ್ಲಿ 3 ಕೋಟಿ ರೂ. ವೆಚ್ಚದಲ್ಲಿ ಹೊಸ ಅಗ್ನಿಶಾಮಕ ಠಾಣಾ ಕಟ್ಟಡವನ್ನು ನಿರ್ಮಿಸಲು ಕ್ರಮ ವಹಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಅಗ್ನಿಶಾಮಕ ಮತ್ತು ತುರ್ತುಸೇವೆಗಳ ಇಲಾಖೆಯ ವಿಸ್ತರಣೆ ಮತ್ತು ಆಧುನಿಕರಣ ಕಾರ್ಯವನ್ನು 15 ನೇ ಹಣಕಾಸು ಆಯೋಗದ ಅನುದಾನದಡಿ 330 ಕೋಟಿ ರೂ. ವೆಚ್ಚದಲ್ಲಿ ಕೈಗೊಳ್ಳಲಾಗುವುದು ಎಂದರು.

ಅಗ್ನಿಶಾಮಕ ಮತ್ತು ತುರ್ತುಸೇವೆಗಳ ಇಲಾಖೆಯಿಂದ 2024–25ನೇ ಸಾಲಿನಲ್ಲಿ 4300 ಜನರನ್ನು ಅಗ್ನಿ ಅನಾಹುತದಿಂದ ರಕ್ಷಿಸಿ ಸುಮಾರು 1,501 ಕೋಟಿ ರೂ. ಮೊತ್ತದ ಖಾಸಗಿ ಮತ್ತು ಸಾರ್ವಜನಿಕ ಆಸ್ತಿ–ಪಾಸ್ತಿಗಳನ್ನು ರಕ್ಷಿಸಲಾಗಿದೆ ಎಂದರು. ಕೆ–ಸಿಫ್–2 ಯೋಜನೆಯಡಿ ಉಪಕರಣಗಳ ಖರೀದಿ ಮತ್ತು ಕಟ್ಟಡ ನಿರ್ಮಾಣಕ್ಕಾಗಿ 50ಕೋಟಿ ರೂ. ಅನುದಾನವನ್ನು ಒದಗಿಸಲಾಗುವುದು ಎಂದು ಅವರು ಹೇಳಿದರು. ಬಹು ಮಹಡಿ ಕಟ್ಟಡಗಳಲ್ಲಿ ಸಂಭವಿಸಬಹುದಾದ ಅಗ್ನಿ ಅನಾಹುತ ತಡೆಗಟ್ಟುವ ಸಲುವಾಗಿ 52–54 ಮೀ. ಎತ್ತರಕ್ಕೆ ತಲುಪುವ ಏರಿಯಲ್ ಲ್ಯಾಡರ್ ಪ್ಲಾಟ್‌ಫಾರಂ ವಾಹನ ಒದಗಿಸಲಾಗುವುದು ಎಂದು ಅವರು ಹೇಳಿದರು.

# ಮಹಿಳಾ ಸಬಲೀಕರಣಕ್ಕೆ ಬಂಪರ್ ಕೊಡುಗೆ



**ಬೆಂಗಳೂರು:** 2025-26ರ ರಾಜ್ಯ ಬಜೆಟ್‌ನಲ್ಲಿ ಮಹಿಳಾ ಸಬಲೀಕರಣ ಸೇರಿದಂತೆ ಮಹಿಳೆಯರಿಗೆ ಬಂಪರ್ ಕೊಡುಗೆಗಳನ್ನು ನೀಡಲಾಗಿದೆ. ಮಹಿಳಾ ಸಬಲೀಕರಣಕ್ಕಾಗಿ ಗ್ರಾಮ ಪಂಚಾಯತಿ ಸ್ವ-ಸಹಾಯ ಸಂಘಗಳ ಸಹಭಾಗಿತ್ವದಲ್ಲಿ ಜಿಲ್ಲಾ ಮತ್ತು ತಾಲೂಕು ಪಂಚಾಯತಿ ಕಛೇರಿ ಆವರಣಗಳಲ್ಲಿ ಅಕ್ಕ ಕೆಫೆ ಮತ್ತು ಕ್ಯಾಂಟೀನ್ ಸ್ಥಾಪಿಸಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ಬಜೆಟ್‌ನಲ್ಲಿ ಘೋಷಿಸಿದ್ದಾರೆ.

ಇನ್ನು ಮಹಿಳಾ ಸಬಲೀಕರಣಕ್ಕೆ ಪ್ರತಿ ತಾಲೂಕಿನಲ್ಲಿ ಒಂದು 'ಸಮಗ್ರ ಕೃಷಿ ಕ್ಲಸ್ಟರ್ ಅಭಿವೃದ್ಧಿಪಡಿಸಲಾಗುವುದು, ಶಾಲೆ, ಅಂಗನವಾಡಿ ಮತ್ತು ವಸತಿ ನಿಲಯಗಳಿಗೆ ಮೊಟ್ಟೆ ಮತ್ತು ತರಕಾರಿ ಪೂರೈಸಲು ಸ್ವ-ಸಹಾಯ ಸಂಘಗಳ 'ಕಿರು ಉದ್ಯಮಗಳನ್ನು ಪ್ರೋತ್ಸಾಹಿಸಲಾಗುವುದು ಸ್ವ-ಸಹಾಯ ಸಂಘಗಳ ಮೂಲಕ ಪ್ರತಿ ಜಿಲ್ಲೆಯಲ್ಲಿ ಒಂದು ಸಮುದಾಯ ಪ್ರವಾಸಿ ಯೋಜನೆಯನ್ನು ಅನುಷ್ಠಾನ ಮಾಡಲಾಗುವುದು ಎಂದು ತಿಳಿಸಿದ್ದಾರೆ.

ಕೌಶಲ್ಯಾಭಿವೃದ್ಧಿ ಅಡಿ ಸರ್ಕಾರವು 'ಯುವನಿಧಿ' ಯೋಜನೆಯನ್ನು ಅನುಷ್ಠಾನಗೊಳಿಸಿದ್ದು, ಈಗಾಗಲೇ ಸುಮಾರು 2.58 ಲಕ್ಷ ಯುವಕರು ನೋಂದಾಯಿಸಿಕೊಂಡಿದ್ದಾರೆ. ಅವರಿಗೆ 286 ಕೋಟಿ ರೂ. ನೇರ ನಗದು ವರ್ಗಾವಣೆ ಮಾಡಲಾಗಿದೆ ಎಂದು ತಿಳಿಸಿದರು.

ಇನ್ನು ರಾಜ್ಯದ ನರ್ಸಿಂಗ್ ವಿದ್ಯಾರ್ಥಿಗಳಿಗೆ ಜರ್ಮನ್, ಇಟಾಲಿಯನ್, ಸ್ಪ್ಯಾನಿಷ್ ಮತ್ತು ಇತರ ವಿದೇಶೀ ಭಾಷಾ ಕೌಶಲ್ಯ ತರಬೇತಿ ನೀಡಲಾಗುವುದು. ವಿದೇಶದಲ್ಲಿ ಉದ್ಯೋಗಾವಕಾಶ ಕಲ್ಪಿಸಲು ಅಂತಾರಾಷ್ಟ್ರೀಯ ವಲಸೆ ಕೇಂದ್ರದ ಮೂಲಕ ಬೆಂಗಳೂರಿನಲ್ಲಿ ಅಂತಾರಾಷ್ಟ್ರೀಯ ಉದ್ಯೋಗ ಮೇಳವನ್ನು ಆಯೋಜಿಸಲಾಗುವುದು ವಿದ್ಯಾರ್ಥಿಗಳು ಭವಿಷ್ಯದಲ್ಲಿ ಸೂಕ್ತ ವೃತ್ತಿಯನ್ನು ಆಯ್ಕೆ ಮಾಡಿಕೊಳ್ಳಲು ಮಾರ್ಗದರ್ಶನವನ್ನು ಒದಗಿಸಲು ನನ್ನ ವೃತ್ತಿ ನನ್ನ ಆಯ್ಕೆ ಕಾರ್ಯಕ್ರಮದಡಿ ಸರ್ಕಾರಿ ಶಾಲಾ/ಕಾಲೇಜುಗಳಲ್ಲಿನ 2.30 ಲಕ್ಷ ವಿದ್ಯಾರ್ಥಿಗಳಿಗೆ ವೃತ್ತಿ ಮಾರ್ಗದರ್ಶನ ನೀಡಲಾಗುವುದು ಎಂದಿದ್ದಾರೆ.

ಇಪ್ಪತ್ತು ಸಾವಿರ ವಿದ್ಯಾರ್ಥಿಗಳಿಗೆ ಭಾಷಾ ತರಬೇತಿ ನೀಡಲು 20 ಕೋಟಿ ರೂ. ವೆಚ್ಚದಲ್ಲಿ 36 ಜರ್ಮನ್ ಭಾಷಾ ಪ್ರಯೋಗಾಲಯಗಳನ್ನು ನಿರ್ಮಿಸಲಾಗುವುದು. ಜರ್ಮನ್ ಛೇಂಬರ್ ಆಫ್ ಕಾಮರ್ಸ್ ಸಹಯೋಗದಲ್ಲಿ 5,000 ವಿದ್ಯಾರ್ಥಿಗಳಿಗೆ ಜಾಗತಿಕ ಉದ್ಯೋಗಾವಕಾಶವನ್ನು ಹೆಚ್ಚಿಸಲು ಡಿಪ್ಲೋಮ ಕೋರ್ಸ್‌ನ ಭಾಗವಾಗಿ ಒಂದು ವರ್ಷದ ತರಬೇತಿಯನ್ನು ಜರ್ಮನಿಯಲ್ಲಿ ಪಡೆಯಲು ಅವಕಾಶ ಕಲ್ಪಿಸಲಾಗುವುದು. ಜಿಟಿಟಿಸಿ, ಜರ್ಮನ್ ವಿಶ್ವವಿದ್ಯಾಲಯಗಳು ಮತ್ತು ಉದ್ಯಮಗಳ ಸಹಯೋಗದೊಂದಿಗೆ ಜರ್ಮನಿಯ ಡ್ಯುಯಲ್ ಎಜುಕೇಷನ್ ಮಾದರಿಯಲ್ಲಿ ಬಿ.ಇ ಕಾರ್ಯಕ್ರಮಗಳನ್ನು ಪ್ರಾರಂಭಿಸಲಾಗುವುದು ಎಂದು ಹೇಳಿದರು.



ಕೇಂದ್ರ ಸಚಿವರಾದ ಶ್ರೀ ಅಮಿತ್ ಶಾ ಅವರಿಗೆ ಸ್ವಾಗತ ಕೋರಿದ ಬಿಜೆಪಿ ರಾಜ್ಯಾಧ್ಯಕ್ಷರಾದ ಬಿ ವೈ ವಿಜಯೇಂದ್ರ ಅವರು ಬೆಂಗಳೂರು

## ಜನರ ಮೇಲೆ ಆರ್ಥಿಕ ಹೊರೆ ಹೇರುವ ಜನ ವಿರೋಧಿ ಬಜೆಟ್

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ 25-26 ರ ಬಜೆಟ್ ನಲ್ಲಿ ಆರ್ಥಿಕ ಸುಧಾರಣೆ, ಆರ್ಥಿಕ ಸಬಲೀಕರದತ್ತ ರಾಜ್ಯವನ್ನು ತೆಗೆದುಕೊಂಡು ಹೋಗುವ ಯಾವುದೇ ಕ್ರಮ ಇಲ್ಲ. ಇದೊಂದು ಮತ್ತೊಂದು ಜನರ ಮೇಲೆ ಆರ್ಥಿಕ ಹೊರೆಯನ್ನು ಹೇರಿರುವ ಜನ ವಿರೋಧಿ ನಿರಾಶಾದಾಯಕ ಬಜೆಟ್ ಎಂದು ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ.



ರಾಜ್ಯ ಬಜೆಟ್ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಕಳೆದ ವರ್ಷ ಬಜೆಟ್ ನಲ್ಲಿ ಹೇಳಿರುವುದಕ್ಕೂ ಮಾಡಿರುವುದಕ್ಕೂ ಬಹಳ ವ್ಯತ್ಯಾಸ ಇದೆ. ಕಳೆದ ವರ್ಷ ಒಟ್ಟು ಆದಾಯ 3,68,674 ಕೋಟಿ ಬಜೆಟ್ ನಲ್ಲಿ ಹೇಳಿದ್ದು ಈಗ ಅದು 3,58,657 ಕೋಟಿ ಹತ್ತು ಸಾವಿರ ಕೋಟಿ ಕಡಿಮೆ ಆದಾಯವನ್ನು ರಾಜ್ಯ ಸಾಧಿಸಿದೆ. ಎರಡನೇಯದಾಗಿ ಕಳೆದ ವರ್ಷ ಬಜೆಟ್ ನಲ್ಲಿ ಒಟ್ಟು ವೆಚ್ಚ 3,71,383 ಕೋಟಿ ಎಂದು ಬಜೆಟ್ ನಲ್ಲಿ ಹೇಳಿದ್ದು ಅದು ಬಜೆಟ್ 3,65,865 ಕೋಟಿಗೆ ಇಳಿಸಲಾಗಿದೆ ಅದರಲ್ಲಿಯೂ ಬಂಡವಾಳ ವೆಚ್ಚ ಕುಸಿದಿದೆ. ಅಂದರೆ 2024-25 ಅಭಿವೃದ್ಧಿಯ ದರದಲ್ಲಿ ಕುಂಠಿತವಾಗಿದೆ. ಈ ವರ್ಷದ ಬಜೆಟ್ ನಲ್ಲಿ ವಿತ್ತೀಯ ಕೊರತೆ 2.95 ಅಂತ ಬಜೆಟ್ ನಲ್ಲಿ ತೋರಿಸಿದ್ದು ವಾಸ್ತವಿಕವಾಗಿ ನಮ್ಮ ಜಿಎಸ್ ಡಿಪಿಯ ಶೇ 3% ಕ್ಕಿಂತ ಹೆಚ್ಚಿಗೆ ಆಗುವುದು ನಿಶ್ಚಿತ. ಇದು ಕೇವಲ ಅಂಕಿ ಅಂಶಗಳ ಹೊಂದಾಣಿಕೆ. ಮತ್ತು ಒಟ್ಟು ಸಾಲ 7,64,655 ಕೋಟಿ ಆಗಿರುವುದು ನಮ್ಮ ಜಿಎಸ್ ಡಿಪಿಯ ಸುಮಾರು 25% ರಷ್ಟು ಇರುವುದು ಆರ್ಥಿಕ ದಿವಾಳಿಗೆ ಸಾಕ್ಷಿಯಾಗಿದೆ ಎಂದು ದೂರಿದ್ದಾರೆ. ಬಜೆಟ್ ನಲ್ಲಿ ಶಿಕ್ಷಣಕ್ಕೆ ಶೆ.2%ರಷ್ಟು ಮಹಿಳಾ ಮಕ್ಕಳ ಇಲಾಖೆಗೆ ಶೇ.1%ರಷ್ಟು ಕಡಿಮೆ ಅನುದಾನ ನೀಡಲಾಗಿದೆ. ನೀರಾವರಿ, ಗ್ರಾಮೀಣ ಅಭಿವೃದ್ಧಿ, ಕೃಷಿಗೆ ವಿಶೇಷವಾಗಿರುವ ಯಾವುದೇ ಅನುದಾನ ನೀಡದಿರುವುದು ರೈತಾಪಿ ವರ್ಗಕ್ಕೆ ನಿರಾಶಾದಾಯಕವಾಗಿದೆ. ಇದೊಂದು ರೈತ ವಿರೋಧಿ ಬಜೆಟ್ ಆಗಿದೆ. ಪ್ರಾದೇಶಿಕ ಅಸಮತೋಲನ ನಿವಾರಣೆ ಮಾಡಲು ಯಾವುದೇ ದಿಟ್ಟ ಕ್ರಮ ತೆಗೆದುಕೊಳ್ಳುವ ವಿಚಾರ ಈ ಬಜೆಟ್ ನಲ್ಲಿ ಪ್ರಕಟವಾಗಿಲ್ಲ. ಕೆಕೆಆರ್ ಡಿಬಿಗೆ ಕೊಟ್ಟಿರುವ 5000 ಕೋಟಿ ರೂ. ಮೂಗಿಗೆ ತುಪ್ಪ ಸವರಿದಂತೆ. ಏಕೆಂದರೆ ಕಳೆದ ವರ್ಷ ಮೀಸಲಿಟ್ಟ ಹಣ ಖರ್ಚಾಗಿಲ್ಲ. ಕಿತ್ತೂರು ಕರ್ನಾಟಕದ ಅಭಿವೃದ್ಧಿಗೆ ಯಾವುದೇ ವಿಶೇಷ ಆರ್ಥಿಕ ನೆರವು ಘೋಷಣೆ ಮಾಡದಿರುವುದು ಆ ಭಾಗದ ಜನರಿಗೆ ನಿರಾಶಾದಾಯಕವಾಗಿದೆ ಎಂದು ಹೇಳಿದ್ದಾರೆ.

## ಬಿಜೆಪಿಯವರು ಹೊಟ್ಟೆ ಉರಿದುಕೊಂಡು ಸಾಯುತ್ತಿದ್ದಾರೆ: ಡಿಸಿಎಂ ಡಿ.ಕೆ.ಶಿವಕುಮಾರ್



**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 16 ನೇ ಬಾರಿ ಬಜೆಟ್ ಮಂಡಿಸುತ್ತಿದ್ದಾರೆ ಎಂದು ಬಿಜೆಪಿಯವರು ಹೊಟ್ಟೆ ಉರಿದುಕೊಂಡು ಸಾಯುತ್ತಿದ್ದಾರೆ" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಪ್ರತಿಪಕ್ಷಗಳ ಟೀಕೆಗಳಿಗೆ ಖಡಕ್ ಉತ್ತರ ನೀಡಿದರು.

ವಿಧಾನಸೌಧದ ಆವರಣದಲ್ಲಿ ಮಾಧ್ಯಮಗಳಿಗೆ ಶುಕ್ರವಾರ ಪ್ರತಿಕ್ರಿಯೆ ನೀಡಿದರು.

ಬಜೆಟ್ ಬಗ್ಗೆ ಬಿಜೆಪಿಯವರ ಟೀಕೆಯ ಬಗ್ಗೆ ಕೇಳಿದಾಗ, "ಕಾಂಗ್ರೆಸ್ ಸರ್ಕಾರ ಕೊಟ್ಟ ಮಾತನ್ನುಉಳಿಸಿಕೊಂಡಿದೆ, ಉತ್ತಮವಾದ ಬಜೆಟ್ ನೀಡುತ್ತಿದ್ದಾರಲ್ಲ ಎನ್ನುವ ಹೊಟ್ಟೆಯುರಿ. ನೆನ್ನೆ ವಿರೋಧ ಪಕ್ಷಗಳ ಶಾಸಕರು ಕೇವಲ ಫೋಟೋಗಾಗಿ ಮಾತ್ರ ಬಂದಿದ್ದರು. ಏನನ್ನೂ ಕೇಳಲು ಬಂದಿರಲಿಲ್ಲ. ಮುಖ್ಯಮಂತ್ರಿಗಳು ಇಲಾಖೆಗೆ ಏನು ಕೊಡಬೇಕು ಎಂದು ಸಚಿವರ ಬಳಿ ಚರ್ಚೆ ಮಾಡುತ್ತಾರೆ" ಎಂದು ತಿರುಗೇಟು ನೀಡಿದರು.

ಕಳೆದ ಎರಡು ದಿನಗಳಿಂದ ನೀಲಿ ಶಾಲು ಹಾಕಿಕೊಂಡು ಪ್ರತಿಪಕ್ಷಗಳು ಪ್ರತಿಭಟನೆ ಮಾಡುತ್ತಿರುವ ಬಗ್ಗೆ ಕೇಳಿದಾಗ, "ಏನು ಬೇಕಾದರೂ ಮಾಡಲಿ. ಪ್ರತಿದಿನ ಬೇಕಾದರೂ ಪ್ರತಿಭಟನೆ ಮಾಡಲಿ, ಕೂಗಲಿ, ಕಿರುಚಲಿ. ನಾವು ರಾಜ್ಯದ ಜನತೆಗೆ ಏನು ಒಳ್ಳೆಯದು ಮಾಡಬೇಕೋ ಅದನ್ನು ಮಾಡುತ್ತೇವೆ" ಎಂದರು.

ಕರ್ನಾಟಕ ಉಳಿಸಿ ಎಂದು ಹೇಳುವುದಕ್ಕೆ ನೈತಿಕತೆಯಿಲ್ಲ ಬಿಜೆಪಿಗೆ ನಾಚಿಕೆಯಾಗಬೇಕು. ನಾವು ಕೊಟ್ಟ ಮಾತುಗಳನ್ನು ಉಳಿಸಿಕೊಂಡಿದ್ದೇವೆ. ಅವರ ಕಾಲದ ಬಜೆಟ್ ರೀತಿ ನಮ್ಮದು ಇರುವುದಿಲ್ಲ. ಕೇಂದ್ರ ಬಜೆಟ್ ಅಲ್ಲಿ ಕರ್ನಾಟಕಕ್ಕೆ ಏನೂ ಕೊಡುಗೆ ನೀಡಿಲ್ಲ. ಕರ್ನಾಟಕ ಉಳಿಸಿ ಎಂದು ಹೇಳುವುದಕ್ಕೆ ಅವರಿಗೆ ನೈತಿಕತೆಯಿಲ್ಲ. ನಾವು ನಮ್ಮ ಜನರನ್ನು ಕಾಪಾಡುತ್ತೇವೆ, ಕಾಪಾಡಿದ್ದೇವೆ" ಎಂದು ಹೇಳಿದರು.

## ಶಾಲಾ ಮಕ್ಕಳಿಗೆ ಸಿಹಿ ಸುದ್ದಿ



**ಬೆಂಗಳೂರು:** 2025-26ನೇ ಸಾಲಿ ಸಿಎಂ ಸಿದ್ದರಾಮಯ್ಯ ಅವರ ದಾಖಲೆಯ 16ನೇ ಬಜೆಟ್ ಇದೀಗ ಮಂಡಿಸುತ್ತಿದ್ದಾರೆ. ಸಿಎಂ ಬಜೆಟ್‌ನಲ್ಲಿ ಶಾಲಾ ಮಕ್ಕಳಿಗೆ ಸಿಹಿ ಸುದ್ದಿಯನ್ನು ನೀಡಿದ್ದಾರೆ.

ಶಾಲಾ ಮಕ್ಕಳಿಗೆ ವಾರದ 6 ದಿನ ಮೊಟ್ಟೆ ಬಾಳೆಹಣ್ಣು ವಿತರಣೆ ಮಾಡಲು ಘೋಷಣೆ ಮಾಡಲಾಗಿದೆ. ಇದಕ್ಕಾಗಿ 1,500 ಕೋಟಿ ರೂ. ಮೀಸಲಿಡಲಾಗುತ್ತದೆ ಎಂದು ಬಜೆಟ್‌ನಲ್ಲಿ ಸಿದ್ದರಾಮಯ್ಯ ಘೋಷಣೆ ಮಾಡಿದ್ದಾರೆ.

ಇನ್ನು ಬಜೆಟ್ 2025-26ರಲ್ಲಿ ಶಾಲಾ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ತಯಾರು ಮಾಡುವ ಕಾರ್ಯಕರ್ತೆಯರಿಗೆ ಗೌರವ ಧವನ್ನು 1 ಸಾವಿರ ರೂ. ಏರಿಕೆ ಮಾಡಲಾಗಿದೆ. ಅತಿಥಿ ಶಿಕ್ಷಕರ ಮಾಸಿಕ ಗೌರವ ಧನ 2 ಸಾವಿರ ರೂ ಹೆಚ್ಚಳ ಮಾಡಲಾಗುತ್ತಿದೆ. 500 ಹೊಸ ಕರ್ನಾಟಕ ಪಬ್ಲಿಕ್ ಶಾಲೆಗಳು ಆರಂಭದ ಬಗ್ಗೆ ಬಜೆಟ್ ನಲ್ಲಿ ಘೋಷಣೆ ಮಾಡಲಾಗಿದೆ.

## ಕೇಂದ್ರದ ಅಸಹಕಾರ: ಬಜೆಟ್ ಮಂಡನೆ ವೇಳೆ ಎಳೆಎಳೆಯಾಗಿ ಬಿಚ್ಚಿಟ್ಟ ಸಿಎಂ



**ಬೆಂಗಳೂರು:** ಕರ್ನಾಟಕ ರಾಜ್ಯವು, ಸುಸ್ಥಿರ ಋಣ ನಿರ್ವಹಣೆ ಮತ್ತು ವಿತ್ತೀಯ ಶಿಸ್ತು ಪಾಲಿಸುವ ಮೂಲಕ ವಿತ್ತೀಯ ಹೊಣೆಗಾರಿಕೆಯನ್ನು ಉತ್ತಮವಾಗಿ ನಿಭಾಯಿಸಿದೆ. ನಮ್ಮ ರಾಜ್ಯದಲ್ಲಿ ವಿತ್ತೀಯ ಹೊಣೆಗಾರಿಕೆ ಅಧಿನಿಯಮವನ್ನು ಕೇಂದ್ರ ಸರ್ಕಾರವು ಅನುಷ್ಠಾನಕ್ಕೆ ತರುವ ಮುನ್ನವೇ ಜಾರಿಗೆ ತರಲಾಯಿತು ಎಂದು ಸಿದ್ದರಾಮಯ್ಯ ಬಜೆಟ್ ಭಾಷಣದಲ್ಲಿ ತಿಳಿಸಿದರು.

ಅಲ್ಲದೆ, ರಾಜ್ಯದ ಒಟ್ಟು ಹೊಣೆಗಾರಿಕೆಗಳಲ್ಲಿ ಆಯವ್ಯಯದ ಹೊರಗಿನ ಸಾಲಗಳನ್ನು ಪರಿಗಣಿಸಿದ ಮೊದಲ ರಾಜ್ಯ ಕರ್ನಾಟಕ. ಆದಾಗ್ಯೂ, ಜಿ.ಎಸ್.ಟಿ ಜಾರಿಯಿಂದ ರಾಜ್ಯಕ್ಕೆ ಆದ ರಾಜಸ್ವ ನಷ್ಟವನ್ನು ಸಂಪೂರ್ಣವಾಗಿ ಸರಿದೂಗಿಸಲು ಕೇಂದ್ರ ಸರ್ಕಾರ ವಿಫಲವಾದ ಕಾರಣ ಮತ್ತು ಕೇಂದ್ರ ಸರ್ಕಾರ ವಿಧಿಸುವ ಸೆಸ್ಗಳು ಮತ್ತು ಸರ್‌ಚಾರ್ಜ್‌ಗಳನ್ನು ರಾಜ್ಯಗಳಿಗೆ ಹಂಚಿಕೆಯಾಗುವ ತೆರಿಗೆ ಪಾಲಿನಲ್ಲಿ ಪರಿಗಣಿಸದಿರುವುದರಿಂದ ಹಾಗೂ 15ನೇ ಹಣಕಾಸು ಆಯೋಗದ ಶಿಫಾರಸ್ಸಿನನ್ವಯ ರಾಜ್ಯದ ತೆರಿಗೆ ಪಾಲು ಕಡಿಮೆಯಾದ ಕಾರಣ ರಾಜ್ಯವು ವಿತ್ತೀಯ ಸವಾಲುಗಳನ್ನು ಎದುರಿಸುವಂತಾಯಿತು.

15ನೇ ಹಣಕಾಸು ಆಯೋಗದ ಶಿಫಾರಸ್ಸಿನ ಅನ್ವಯ ತೆರಿಗೆ ಹಂಚಿಕೆಯಲ್ಲಿ ಅತಿ ಹೆಚ್ಚು ನಷ್ಟವನ್ನು ಅನುಭವಿಸಿದ ರಾಜ್ಯ ಕರ್ನಾಟಕ. 14ನೇ ಹಣಕಾಸು ಆಯೋಗವು ಕರ್ನಾಟಕಕ್ಕೆ ಶಿಫಾರಸ್ಸು ಮಾಡಿದ್ದ ತೆರಿಗೆ ಪಾಲು ಶೇ. 4.713 ರಿಂದ, 15ನೇ ಹಣಕಾಸು ಆಯೋಗದ ಅವಧಿಯಲ್ಲಿ ಶೇ.3.647ಕ್ಕೆ ಇಳಿಕೆಯಾಯಿತು. ಇದರಿಂದಾಗಿ ರಾಜ್ಯದ ತೆರಿಗೆ ಹಂಚಿಕೆಯು ಶೇ.23ರಷ್ಟು ಕುಸಿತವಾಗಿ, ರಾಜ್ಯವು ವಾರ್ಷಿಕ ಅಂದಾಜು 12 ಸಾವಿರ ಕೋಟಿ ರೂ. ನಷ್ಟ ಅನುಭವಿಸಬೇಕಾಯಿತು. ಅಲ್ಲದೆ, 15ನೇ ಹಣಕಾಸು ಆಯೋಗವು ರಾಜ್ಯದ ತೆರಿಗೆ ಪಾಲು ಕಡಿಮೆಯಾದ ಕಾರಣ 5,495 ಕೋಟಿ ರೂ.ಗಳ ವಿಶೇಷ ಅನುದಾನ, ಬೆಂಗಳೂರಿನಲ್ಲಿ ಕೆರೆಗಳ ಸಂರಕ್ಷಣೆಗಾಗಿ 3,000 ಕೋಟಿ ರೂ. ಮತ್ತು ಪೆರಿಫೆರಲ್ ರಿಂಗ್ ರಸ್ತೆ ಅಭಿವೃದ್ಧಿಗೆ 3,000 ಕೋಟಿ ರೂ. ಸೇರಿ ಒಟ್ಟು 11,495 ಕೋಟಿ ರೂ.ಗಳನ್ನು ತನ್ನ ವರದಿಯಲ್ಲಿ ಶಿಫಾರಸ್ಸು ಮಾಡಿತು. ಆದರೆ, ಕೇಂದ್ರ ಸರ್ಕಾರ ಈ ಅನುದಾನವನ್ನು ಬಿಡುಗಡೆ ಮಾಡಿರುವುದಿಲ್ಲ. 2023-24ನೇ ಸಾಲಿನ ಕೇಂದ್ರ ಸರ್ಕಾರದ ಆಯವ್ಯಯ ಭಾಷಣದಲ್ಲಿ ಭದ್ರಾ ಮೇಲ್ದಂಡೆ ಯೋಜನೆಗೆ 5,300 ಕೋಟಿ ರೂ.ಗಳನ್ನು ಘೋಷಿಸಿತ್ತು. ಆದರೆ, ಕೇಂದ್ರ ಸರ್ಕಾರವು ಈವರೆಗೂ ಯಾವುದೇ ಅನುದಾನ ಬಿಡುಗಡೆ ಮಾಡಿರುವುದಿಲ್ಲ.

ರಾಜ್ಯಗಳಿಗೆ ತೆರಿಗೆ ಹಂಚಿಕೆಯನ್ನು ಹೆಚ್ಚಿಸುವ ಬಗ್ಗೆ 16ನೇ ಹಣಕಾಸು ಆಯೋಗದ ಮುಂದೆ ರಾಜ್ಯವು ಪ್ರಬಲವಾಗಿ ತನ್ನ ವಾದವನ್ನು ಪ್ರತಿಪಾದಿಸಿದೆ. ಆರೋಗ್ಯಕರ ಮತ್ತು ಸಾಮರಸ್ಯದ ಆರ್ಥಿಕ ಒಕ್ಕೂಟ ರೂಪಿಸಲು ರಾಜ್ಯಗಳಿಗೆ ನೀಡುವ ತೆರಿಗೆ ಪಾಲನ್ನು ಸಮಾನತೆ ಮತ್ತು ದಕ್ಷತೆಯನ್ನು ಆಧರಿಸಿ ಹಂಚಿಕೆ ಮಾಡುವಂತೆ ಹಣಕಾಸು ಆಯೋಗಕ್ಕೆ ಮನವರಿಕೆ ಮಾಡಿದೆ. ಬಲಿಷ್ಠ ಆರ್ಥಿಕತೆ ಹೊಂದಿರುವ ರಾಜ್ಯಗಳು ಬಡ ರಾಜ್ಯಗಳಿಗೆ ನೆರವಾಗಲು ಬದ್ಧರಾಗಿದ್ದರೂ, ಅದು ತನ್ನ ನಾಗರೀಕರ

ಹಿತ ಕಾಯುವಲ್ಲಿ ಅಥವಾ ಆರ್ಥಿಕ ಪ್ರಗತಿಗೆ ಕುಂದುಂಟು ಮಾಡುವಂತಿರಬಾರದು. ಆದಾಯ-ಅಂತರ ಮತ್ತು ತಲಾ ಆದಾಯ ನಿರ್ಧರಿಸುವ ಮಾನದಂಡಗಳಲ್ಲಿಯೂ ಲೋಪಗಳಿರುವ ಹಿನ್ನೆಲೆಯಲ್ಲಿ, ಈ ಮಾನದಂಡಗಳಿಗೆ ಕಡಿಮೆ ಅಂಕ ನೀಡುವಂತೆ ಮನವಿ ಮಾಡಿದ್ದೇವೆ.

ಕೇಂದ್ರ ಹಾಗೂ ರಾಜ್ಯಗಳ ನಡುವಿನ ತೆರಿಗೆ ಹಂಚಿಕೆಯಲ್ಲಿ ಕನಿಷ್ಠ ಶೇ.50ರಷ್ಟು ಪಾಲನ್ನು ರಾಜ್ಯಗಳಿಗೆ ನೀಡಬೇಕು ಎಂದು ನಾವು ಪ್ರಸ್ತಾವನೆ ಸಲ್ಲಿಸಿದ್ದೇವೆ. ಇದು ಕೇಂದ್ರ ಮತ್ತು ರಾಜ್ಯಗಳ ನಡುವೆ ಸಂಪನ್ಮೂಲಗಳ ನ್ಯಾಯಯುತ ಹಂಚಿಕೆಯನ್ನು ಖಚಿತಪಡಿಸುತ್ತದೆ. ಕೇಂದ್ರ ಸರ್ಕಾರ ವಿಧಿಸುವ ಸೆಸ್ ಮತ್ತು ಸರ್‌ಚಾರ್ಜ್‌ಗಳನ್ನು ಒಟ್ಟು ತೆರಿಗೆ ರಾಜಸ್ವದ ಶೇ.5 ಕ್ಕೆ ಮಿತಿಗೊಳಿಸಬೇಕು. ಇದಕ್ಕಿಂತ ಹೆಚ್ಚಿನ ಸೆಸ್ ಮತ್ತು ಸರ್‌ಚಾರ್ಜ್‌ಗಳನ್ನು ವಿಧಿಸಿದರೆ, ಹೆಚ್ಚಿನ ಮೊತ್ತವನ್ನು ರಾಜ್ಯಗಳಿಗೆ ಹಂಚಿಕೆಯಾಗುವ ತೆರಿಗೆ ಪಾಲಿನಲ್ಲಿ ಪರಿಗಣಿಸಬೇಕು. ರಾಜ್ಯಗಳ ನಡುವಿನ ತೆರಿಗೆ ಹಂಚಿಕೆಗೆ ಸಂಬಂಧಿಸಿದಂತೆ, ಒಟ್ಟು ತೆರಿಗೆ ಹಂಚಿಕೆಯಲ್ಲಿ ತೆರಿಗೆ ಸಂಗ್ರಹಿಸುವ ರಾಜ್ಯಕ್ಕೆ ಶೇ.60ರಷ್ಟು ಪಾಲನ್ನು ಮರಳಿಸಬೇಕು. ಆದ್ದರಿಂದ, ಹಂಚಿಕೆಯಾಗುವ ತೆರಿಗೆಯಲ್ಲಿ ಇತರೆ ರಾಜ್ಯಗಳ ಪಾಲನ್ನು ಶೇ.40ಕ್ಕೆ ಮಿತಿಗೊಳಿಸಬೇಕು ಎಂದು ನಾವು 16ನೇ ಹಣಕಾಸು ಆಯೋಗಕ್ಕೆ ಒತ್ತಾಯ ಮಾಡಿದ್ದೇವೆ.

ಈ ಸವಾಲುಗಳ ನಡುವೆಯೂ, ರಾಜ್ಯ ಸರ್ಕಾರದ ಸಂಪನ್ಮೂಲ ಕ್ರೋಢೀಕರಣ ಕ್ರಮಗಳಿಂದ ರಾಜಸ್ವ ಸ್ವೀಕೃತಿಗಳು ಉತ್ತಮ ಬೆಳವಣಿಗೆ ಸಾಧಿಸಿದ್ದು, ರಾಜ್ಯದ ಅಭಿವೃದ್ಧಿ ಕುರಿತ ನಮ್ಮ ದೂರದೃಷ್ಟಿಯ ಯೋಜನೆಗಳನ್ನು ಸಾಕಾರಗೊಳಿಸಲು ಸಾಧ್ಯವಾಗಿದೆ. 2024-25ನೇ ಸಾಲಿಗೆ ರಾಜಸ್ವ ಸ್ವೀಕೃತಿಗಳು ವಾರ್ಷಿಕ ಶೇ. 10.3 ರಷ್ಟು ಬೆಳವಣಿಗೆಯನ್ನು ದಾಖಲಿಸುವ ನಿರೀಕ್ಷೆಯಿದೆ.

## ಕರ್ತವ್ಯನಿರತ ಕಟ್ಟಡ ಕಾರ್ಮಿಕ ಮೃತಪಟ್ಟರೆ 8 ಲಕ್ಷ ಪರಿಹಾರ

**ಬೆಂಗಳೂರು:** 2025-26 ನೇ ಸಾಲಿನ ಬಜೆಟ್ ನಲ್ಲಿ ಕಾರ್ಮಿಕ ಇಲಾಖೆಗೆ ಸಿಎಂ ಸಿದ್ದರಾಮಯ್ಯ ವಿಶೇಷ ಪ್ರಮುಖ್ಯತೆ ನೀಡಲಾಗಿದೆ.

ಕಟ್ಟಡ ಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹ ನೀಡುವ ಸಲುವಾಗಿ 31 ಜಿಲ್ಲೆಗಳಲ್ಲಿ 6ನೇ ತರಗತಿಯಿಂದ 12ನೇ ತರಗತಿವರೆಗಿನ ವಸತಿ ಶಾಲೆಗಳನ್ನು ನಿರ್ಮಿಸಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮುಖಾಂತರ ನಿರ್ವಹಿಸಲಾಗುವುದು. ಇದಕ್ಕೆ ಒಟ್ಟಾರೆ 750 ಕೋಟಿ ರೂ. ವೆಚ್ಚ ಮಾಡಲಾಗುವುದು ಎಂದು ಸಿಎಂ ಘೋಷಿಸಿದ್ದಾರೆ.

ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯ ನೋಂದಾಯಿತ ಕಾರ್ಮಿಕರಿಗೆ ಮತ್ತು ಅವರ ಅವಲಂಬಿತರಿಗೆ ನೀಡುತ್ತಿರುವ ಶೈಕ್ಷಣಿಕ, ವೈದ್ಯಕೀಯ ಮತ್ತು ಇತರೆ ಸೌಲಭ್ಯಗಳನ್ನು ವಿಸ್ತರಿಸಲಾಗುವುದು ಎಂದು ಸಿಎಂ ಹೇಳಿದ್ದಾರೆ. ಇದಕ್ಕಾಗಿ ಸರ್ಕಾರದ ವತಿಯಿಂದ ನೀಡುತ್ತಿರುವ ಧನಸಹಾಯವನ್ನು ದ್ವಿಗುಣಗೊಳಿಸಲಾಗಿದೆ.

ನೋಂದಾಯಿತ ಕಟ್ಟಡ ಕಾರ್ಮಿಕರು ಸಹಜ ಮರಣ ಹೊಂದಿದಲ್ಲಿ ಎಕ್ಸ್ ಗ್ರೇಶಿಯಾ ಮೊತ್ತವನ್ನು 75.000 ರೂ.ನಿಂದ 15 ಲಕ್ಷ ರೂಗೆ ಮತ್ತು ಕೆಲಸದ ಸ್ಥಳದಲ್ಲಿ ಮರಣ ಹೊಂದುವ ಕಾರ್ಮಿಕರ ಅವಲಂಬಿತರಿಗೆ ಪರಿಹಾರದ ಮೊತ್ತವನ್ನು 5 ಲಕ್ಷ ರೂ.ನಿಂದ 8 ಲಕ್ಷ ರೂಗೆ ಹೆಚ್ಚಿಸಲಾಗುವುದು ಎಂದು ಸಿದ್ದರಾಮಯ್ಯ ಬಜೆಟ್ ವೇಳೆ ತಿಳಿಸಿದ್ದಾರೆ. ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಡಿ ನೋಂದಾಯಿತ ಮಂಡಳಿಯ ಫಲಾನುಭವಿಗಳು 5 ಲಕ್ಷ ರೂ. ಚಿಕಿತ್ಸೆ ಮಿತಿಯನ್ನು ಪೂರ್ಣಗೊಳಿಸಿದಲ್ಲಿ ಮಂಡಳಿಯಿಂದ ಹೆಚ್ಚುವರಿಯಾಗಿ ಹೃದ್ರೋಗ ಮತ್ತು ಕ್ಯಾನ್ಸರ್ ಖಾಯಿಲೆಗಳಿಗೆ 5 ಲಕ್ಷ ರೂ.ವರೆಗೆ ಮತ್ತು ಇತರೆ ಖಾಯಿಲೆಗಳಿಗೆ 2 ಲಕ್ಷ ರೂವರೆಗೆ ವೈದ್ಯಕೀಯ ವೆಚ್ಚವನ್ನು ಮರುಪಾವತಿ ಮಾಡಲಾಗುವುದು ಎಂದು ಸಿದ್ದರಾಮಯ್ಯ ಹೇಳಿದ್ದಾರೆ.

## ಪ್ರತಿಭಾನ್ವಿತ ಕ್ರೀಡಾಪಟುಗಳಿಗೆ 10 ಲಕ್ಷ ಪ್ರೋತ್ಸಾಹ ಧನ



**ಬೆಂಗಳೂರು:** ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ 2025 26ನೇ ಸಾಲಿನ ಬಜೆಟ್ ನಲ್ಲಿ ಈ ಬಾರಿ ಯುವಸಬಲೀಕರಣ ಹಾಗೂ ಕ್ರೀಡೆಗೆ ಹೆಚ್ಚಿನ ಒತ್ತನ್ನು ನೀಡಿದ್ದು ಪ್ರತಿಭಾನ್ವಿತ 50 ಕ್ರೀಡಾಪಟುಗಳನ್ನು ಗುರುತಿಸಿ ವಾರ್ಷಿಕ 10 ಲಕ್ಷದಂತೆ ಪ್ರೋತ್ಸಾಹ ಧನ ಮೂರು ವರ್ಷ ನೀಡಲಾಗುವುದು ಎಂದು ತಿಳಿಸಿದರು.

ಗುರಿ ಒಲಂಪಿಕ್ ಪದಕ ಯೋಜನೆಯಡಿ ರಾಜ್ಯದ ಅತ್ಯಂತ ಪ್ರತಿಭಾನ್ವಿತ 60 ಕ್ರೀಡಾಪಟುಗಳನ್ನು ಗುರುತಿಸಿ ಒಲಂಪಿಕ್ಸ್ – 2028ಕ್ಕೆ ತಯಾರಿ. ಕೈಗೊಳ್ಳಲು ವಾರ್ಷಿಕ 10 ಲಕ್ಷದಂತೆ ಪ್ರೋತ್ಸಾಹ ಧನ ಮೂರು ವರ್ಷ ನೀಡಲಾಗುವುದು, ಈ ವರ್ಷಕ್ಕೆ 6 ಕೋಟಿ ರೂ. ಒದಗಿಸಲಾಗುವುದು ಎಂದು ಘೋಷಿಸಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಆದಿನಾರಾಯಣ ಹೊಸಹಳ್ಳಿಯಲ್ಲಿರುವ 20 ಎಕರೆ ನಿವೇಶನದಲ್ಲಿ ಜಿಲ್ಲಾ ಕ್ರೀಡಾಂಗಣ, ಸೈಕ್ಲಿಂಗ್ ಕ್ರೀಡೆಗೆ ಉತ್ತೇಜನ ನೀಡಲು 5 ಕೋಟಿ ರೂ. ವೆಚ್ಚದಲ್ಲಿ ಆಧುನಿಕ ಸೈಕ್ಲಿಂಗ್ ವೆಲೋಡ್ರೋಮ್ ನಿರ್ಮಿಸಲಾಗುವುದು. ಉಡುಪಿ, ದ.ಕನ್ನಡ ಜಿಲ್ಲೆಗಳ ಜಿಲ್ಲಾ ಕ್ರೀಡಾಂಗಣ ಅಭಿವೃದ್ಧಿಗೆ ತಲಾ 3 ಕೋಟಿ ನೀಡಲಾಗುವುದು.

ನಿವೇಶನ ಲಭ್ಯವಿರುವ 12 ತಾಲ್ಲೂಕು ಕೇಂದ್ರಗಳಿಗೆ ತಲಾ 2 ಕೋಟಿ ರೂ. ವೆಚ್ಚದಲ್ಲಿ ತಾಲ್ಲೂಕು ಕ್ರೀಡಾಂಗಣಗಳನ್ನು ನಿರ್ಮಿಸಲಾಗುವುದು. ಪ್ರಸಕ್ತ ಸಾಲಿನಲ್ಲಿ ಒಟ್ಟು 12 ಕೋಟಿ ರೂ ಒದಗಿಸಲಾಗುವುದು ರಾಜ್ಯದ ನಾಲ್ಕು ವಿಭಾಗಗಳಲ್ಲಿ ತಲಾ ಒಂದರಂತೆ ಜಿಲ್ಲಾ ಕ್ರೀಡಾಂಗಣಗಳಲ್ಲಿ ಶೂಟಿಂಗ್ ರೇಂಜ್ ಗಳನ್ನು ಮುಂದಿನ ಮೂರು 3 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುವುದು.

ಗ್ರಾಮೀಣ ಕ್ರೀಡೆಗಳಾದ ಕಂಬಳ, ಎತ್ತಿನಬಂಡಿ ಓಟ ಮತ್ತು ಮಲ್ಲಕಂಭ ಕ್ರೀಡೆಗಳಿಗೆ ಉತ್ತೇಜನ ನೀಡಲಾಗುವುದು. ಅತೀ ಹಿಂದುಳಿದ ಅರಣ್ಯಾಧಾರಿತ ಬುಡಕಟ್ಟು ವರ್ಗದವರಿಗೆ ಪ್ರತಿ ವರ್ಷ ಕ್ರೀಡಾಕೂಟ ಆಯೋಜಿಸಲಾಗುವುದು 2025-26 ನೇ ಸಾಲಿನಲ್ಲಿ ಈ ಉದ್ದೇಶಕ್ಕೆ 2 ಕೋಟಿ ರೂ. ಒದಗಿಸಲಾಗುವುದು ಎಂದು ಸಿಎಂ ಘೋಷಣೆ ಮಾಡಿದ್ದಾರೆ. ಯಾದಗಿರಿಯ ಶಹಾಪುರದಲ್ಲಿ ಸುಸಜ್ಜಿತವಾದ ಕ್ರೀಡಾ ವಸತಿ ಶಾಲೆಯನ್ನು 10 ಕೋಟಿ ರೂ ವೆಚ್ಚದಲ್ಲಿ ಆರಂಭಿಸಲಾಗುವುದು. ಹಾಗೂ ಮೈಸೂರು ಮತ್ತು ಬೆಳಗಾವಿಯಲ್ಲಿ ಹೊಸದಾಗಿ ಕ್ರೀಡಾ ವಿಜ್ಞಾನ ಕೇಂದ್ರಗಳನ್ನು 7 ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲಾಗುವುದು ಎಂದು ತಿಳಿಸಿದರು. ಬೆಂಗಳೂರಿನ ವಿದ್ಯಾನಗರದಲ್ಲಿರುವ ಈಜುಕೊಳವನ್ನು ಹೀಟಿಂಗ್ ಮತ್ತು ಡೈವಿಂಗ್ ಪೂಲ್ ವ್ಯವಸ್ಥೆಗಳನ್ನೊಳಗೊಂಡು ಅಂತಾರಾಷ್ಟ್ರೀಯ ಮಟ್ಟಕ್ಕೆ ಮೇಲ್ದರ್ಜೆಗೇರಿಸಲಾಗುವುದು. ಚಾಮರಾಜನಗರದಲ್ಲಿ ಒಲಂಪಿಕ್ಸ್ ಮಾದರಿಯ (50 ಮೀಟರ್) ಈಜುಕೊಳ್ಳವನ್ನು 2 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುವುದು.

ಮೈಸೂರಿನಲ್ಲಿ ಕುಸ್ತಿ ವಾಲಿಬಾಲ್, ಖೋಖೋ ಅಕಾಡೆಮಿಗಳನ್ನು ಸ್ಥಾಪಿಸಲು 2 ಕೋಟಿ ರೂ. ಒದಗಿಸಲಾಗುವುದು ಕ್ರೀಡಾಪಟುಗಳು ತರಬೇತಿ ಪಡೆಯಲು ಹಾಗೂ ಕ್ರೀಡಾಕೂಂಡಗಳಲ್ಲಿ ಭಾಗವಹಿಸಲು ಸಹಕಾರಿಯಾಗುವಂತೆ ಶಾಲಾ ಕಾಲೇಜುಗಳ ವತಿಪರ ಕಾಲೇಜುಗಳು ಸೇರಿದಂತೆ ವಾರ್ಷಿಕ ಹಾಜರಾತಿಯಲ್ಲಿ ರಾಜ್ಯ ಮತ್ತು ರಾಷ್ಟ್ರ ಮಟ್ಟದವರೆಗಿನ ಕ್ರೀಡಾಪಟುಗಳಿಗೆ ಶೇ.15 ರಷ್ಟು ಹಾಗೂ ಅಂತಾರಾಷ್ಟ್ರೀಯ ಕ್ರೀಡಾಪಟುಗಳಿಗೆ ಶೇ.25ರಷ್ಟು ಹಾಜರಾತಿ ವಿನಾಯತಿ ನೀಡಲಾಗುವುದು.

ನಿವೃತಿ ಹೊಂದಿದ ಕುಸ್ತಿಪಟುಗಳಿಗೆ ನೀಡಲಾಗುತ್ತಿರುವ ಮಾಸಾಶನವನ್ನು ಅಂತಾರಾಷ್ಟ್ರೀಯ ಮಟ್ಟದ ಕುಸ್ತಿಪಟುಗಳಿಗೆ 6,000 ರೂ.ಗಳಿಗೆ, ರಾಷ್ಟ್ರ ಮಟ್ಟದ ಕುಸ್ತಿಪಟುಗಳಿಗೆ 5,000 ರೂ.ಗಳಿಗೆ ಹಾಗೂ ರಾಜ್ಯ ಮಟ್ಟದ ಕುಸ್ತಿಪಟುಗಳಿಗೆ 4,500 ರೂ ಗಳಿಗೆ ಹೆಚ್ಚಿಸಲಾಗುವುದು.

ಜೊತೆಗೆ ಒಲಂಪಿಕ್ಸ್, ಕಾಮನ್ ವೆಲ್ತ್ ಹಾಗೂ ಏಷಿಯನ್ ಗೇಮ್ಸ್ ಗಳಲ್ಲಿ ಪದಕ ವಿಜೇತರಾದ ಕ್ರೀಡಾಪಟುಗಳ ಸೇವೆಯನ್ನು ವಿವಿಧ ಕ್ರೀಡಾ ಸಂಸ್ಥೆಗಳಲ್ಲಿ ಮಾರ್ಗದರ್ಶಕರಾಗಿ ಪಡೆಯಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ತಮ್ಮ ಬಜೆಟ್ ನಲ್ಲಿ ಘೋಷಿಸಿದರು.

## ಅಹಂಕಾರದ ಮಾತು ಬಿಡಿ: ಅಭಿವೃದ್ಧಿಗೆ ಹಣ ಕೊಡಿ: ಸಿಎಂಗೆ ವಿಜಯೇಂದ್ರ ಆಗ್ರಹ




**ಬೆಂಗಳೂರು:** ಮುಖ್ಯಮಂತ್ರಿಗಳೇ, ಗ್ಯಾರಂಟಿಗಳಿಗೆ ಹಣ ಕೊಟ್ಟಿದ್ದೇವೆ ಎಂಬ ಅಹಂಕಾರದ ಮಾತನ್ನು ಬಿಡಿ; ಈ ಬಾರಿಯಾದರೂ ವಿಧಾನಸಭಾ ಕ್ಷೇತ್ರಗಳ ಅಭಿವೃದ್ಧಿಗೆ ಹಣ ಕೊಡಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ಆಗ್ರಹಿಸಿದ್ದಾರೆ.

ಬಿಜೆಪಿ-ಜೆಡಿಎಸ್ ಪಕ್ಷಗಳ ಜನಪ್ರತಿನಿಧಿಗಳ ಪ್ರತಿಭಟನೆಯು ಇಂದು ವಿಧಾನಸೌಧದ ಗಾಂಧಿ ಪ್ರತಿಮೆ ಬಳಿ ನಡೆಯಿತು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ದೆಹಲಿಗೆ ಹೋಗಿ ನಮ್ಮ ತೆರಿಗೆ ನಮ್ಮ ಹಕ್ಕು ಎಂದು ನಾಟಕ ಮಾಡುವುದಲ್ಲ; ಶಾಸಕರನ್ನು ಬೀದಿಗೆ ತಂದಿಟ್ಟಿದ್ದೀರಿ. ಈ ಬಾರಿಯಾದರೂ ಬಜೆಟ್‌ನಲ್ಲಿ ನಮ್ಮ ಕ್ಷೇತ್ರಗಳಿಗೆ ಅನುದಾನ ಕೊಡಿ ಎಂದು ಒತ್ತಾಯಿಸಿದರು. ಅನುದಾನ ಇಲ್ಲದೆ ಶಾಸಕರು ಆತ್ಮಹತ್ಯೆ ಮಾಡಿಕೊಳ್ಳುವ ದುಸ್ಥಿತಿಗೆ ಬಂದಿದ್ದಾರೆ ಎಂಬ ಕಾಂಗ್ರೆಸ್ ಶಾಸಕ ರಾಜು ಕಾಗೆಯವರ ಮಾತು ಸರಿ ಇದೆ. ನಿನ್ನೆ ಬಿಜೆಪಿ- ಜೆಡಿಎಸ್ ಶಾಸಕರು, ವಿಧಾನ ಪರಿಷತ್ ಸದಸ್ಯರು ಈ ಬಜೆಟ್ನಲ್ಲಿ ಆದರೂ ಅಭಿವೃದ್ಧಿಗೆ ಹಣ ಕೊಡಿ ಎಂದರೆ ಗ್ಯಾರಂಟಿಗೆ ಕೊಟ್ಟಿದ್ದೇವೆ ಎಂದು ಅಹಂಕಾರದ ಉತ್ತರ ಕೊಟ್ಟಿದ್ದಾರೆ ಎಂದು ಟೀಕಿಸಿದರು. ಕ್ಷೇತ್ರದಲ್ಲಿ ತಲೆ ಎತ್ತಿಕೊಂಡು ಓಡಾಡಲು ಆಗುತ್ತಿಲ್ಲ ಎಂದು ಆಡಳಿತ ಪಕ್ಷದ ಶಾಸಕರೇ ಹೇಳುತ್ತಿದ್ದಾರೆ ಎಂದು ವಿವರಿಸಿದರು.

ಬಜೆಟ್ ನೋಡಿ ರಾಜ್ಯದ ಜನರು ಕಣ್ಣೀರು ಹಾಕುತ್ತಿದ್ದಾರೆ ಎಂದು ತಿಳಿಸಿದರು. ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಮಾತನಾಡಿ, ರಾಜ್ಯದ ಸಾಧನೆ ಶೂನ್ಯವಾಗಿದೆ. ಇಡೀ ರಾಜ್ಯದಲ್ಲಿ ದಲಿತರು ರಾಜ್ಯ ಸರಕಾರದ ವಿರುದ್ಧ ಹೋರಾಟ ಮಾಡುತ್ತಿದ್ದಾರೆ ಎಂದು ತಿಳಿಸಿದರು. ದಲಿತರ ಹಣ ದುರುಪಯೋಗ ಆಗುತ್ತಿದೆ ಎಂದು ಟೀಕಿಸಿದರು.

ಅಭಿವೃದ್ಧಿಗೆ ಯಾಕೆ ಹಣ ನೀಡಿಲ್ಲ ನಿಮಗೆ ಮಾನ ಮರ್ಯಾದೆ ಇಲ್ಲವೇ ಎಂದು ಕೇಳಿದರು. ಇದು ಅಭಿವೃದ್ಧಿ ಶೂನ್ಯ ಸರಕಾರ ಎಂದು ಆಕ್ಷೇಪ ವ್ಯಕ್ತಪಡಿಸಿದರು. ವಿರೋಧ ಪಕ್ಷದ ನಾಯಕ ಆರ್. ಅಶೋಕ್, ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶ್ ಬಾಬು, ಜೆಡಿಎಸ್ ವಿಧಾನ ಪರಿಷತ್ತಿನ ನಾಯಕ ಬೋಜೆಗೌಡ ಮತ್ತು ಎರಡೂ ಪಕ್ಷಗಳ ಶಾಸಕರು ಹಾಗೂ ವಿಧಾನ ಪರಿಷತ್ತಿನ ಸದಸ್ಯರು ಭಾಗವಹಿಸಿದ್ದರು.

# ವಿಶೇಷ ಚೇತನ ಮಕ್ಕಳಿಗೆ ಹಾಗೂ ಪೋಷಕರಿಗೆ ಕ್ರೀಡೆ

**ಮುಳಬಾಗಿಲು:** ತಾಲೂಕಿನ ಬೈರಕೂರು ಹೋಬಳಿಯ ಸರ್ಕಾರಿ ಹಾಗೂ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಒಂದರಿಂದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ 90 ವಿಶೇಷ ಚೇತನ ಮಕ್ಕಳಿಗೆ ಹಾಗೂ ಪೋಷಕರಿಗೆ ಕ್ರೀಡೆ ಮತ್ತು ಅರಿವು ಕಾರ್ಯಕ್ರಮವನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಾಗೂ ಸಮನ್ವಯ ಅಧಿಕಾರಿಗಳ ವತಿಯಿಂದ ವತಿಯಿಂದ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮಕ್ಕಳಿಗೆ ಪ್ರತ್ಯೇಕವಾಗಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಬೈರಕೂರು ಶಾಲಾ ಆವರಣದಲ್ಲಿ ಹಮ್ಮಿಕೊಳ್ಳಲಾಗಿತ್ತು,



ಬೈರಕೂರು ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಅಶೋಕ್ ರವರು ಜ್ಯೋತಿ ಬೆಳಗಿಸುವುದರ ಮೂಲಕ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ ವಿಶೇಷ ಚೇತನ ಮಕ್ಕಳಿಗೆ ಸಮಾಜವಾಗಲಿ ಪೋಷಕರಾಗಲಿ ಅನುಕಂಪ ತೋರಿಸದೆ ಅವಕಾಶವನ್ನು ಒದಗಿಸಿದಾಗ ಆಕಾಶವನ್ನು ಮುಟ್ಟಬಲ್ಲರು ಎಂದು ಅನೇಕ ಉದಾಹರಣೆಗಳೊಂದಿಗೆ ವಿವರಿಸಿದರು

ಗ್ರಾಮ ಪಂಚಾಯಿತಿ ಸದಸ್ಯರ ಮಹಾ ಒಕ್ಕೂಟದ ಅಧ್ಯಕ್ಷರಾದ ಶಂಕರಪ್ಪ ರವರು ಮಾತನಾಡಿ ಪೋಷಕರು ನಿರ್ಲಕ್ಷ ಮಾಡದೆ ಎಲ್ಲಾ ರಂಗಗಳಲ್ಲೂ ಹಾಗೂ ಎಲ್ಲಾ ಚಟುವಟಿಕೆಗಳಲ್ಲೂ ವಿಶೇಷ ಚೇತನರು ಭಾಗವಹಿಸುವಂತೆ ಪ್ರೋತ್ಸಾಹಿಸಬೇಕು ವಿಶೇಷ ಚೇತನರು ಸಾಮಾನ್ಯರಿಗಿಂತ ಕಡಿಮೆ ಏನು ಇಲ್ಲ ಹೆಚ್ಚು ಸಾಧನೆ ಮಾಡಿರುವಂತಹ ಅನೇಕ ಉದಾಹರಣೆಗಳಿವೆ ಎಂದು ವಿವರಿಸಿದರು.

ಕ್ಷೇತ್ರ ಸಮನ್ವಯಾಧಿಕಾರಿಗಳಾದ ಶ್ರೀಯುತ ಪಿ ಸೋಮೇಶ್ವರ ಅವರು ಮಾತನಾಡಿ ಪ್ರತಿದಿನ ವಿಶೇಷ ಚೇತನ ರನ್ನು ಶಾಲೆಗಳಿಗೆ ಕಳುಹಿಸಿಕೊಡಬೇಕು ಸರ್ಕಾರದಿಂದ ಬರುವಂತಹ ಎಲ್ಲಾ ಸೌಲಭ್ಯಗಳನ್ನು ತಿಳಿಸಿ ಸದ್ಬಳಕೆ ಮಾಡಿಕೊಂಡು ವಿಶೇಷ ಚೇತನರು ಸಹ ಸಾಮಾನ್ಯ ಮಕ್ಕಳಂತೆ ಎಲ್ಲಾ ರಂಗಗಳಲ್ಲೂ ಭಾಗವಹಿಸುವಂತಾಗಬೇಕೆಂದರು.

ಆರೋಗ್ಯ ಇಲಾಖೆಯ ಬೈರಕೂರು ಪ್ರಾಥಮಿಕ ಆರೋಗ್ಯ ಕೇಂದ್ರದ ಬಾಲಾಜಿರವರು ಮಾತನಾಡಿ ವಿಶೇಷ ಚೇತನರ ಆರೈಕೆ ಮಾಡುವ ವಿಧಾನ, ಪೌಷ್ಟಿಕ ಆಹಾರ, ರೋಗಗಳನ್ನು ತಡೆಗಟ್ಟುವ ಹಾಗೂ ತೆಗೆದುಕೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮ, ವಿಶೇಷ ಚೇತನರನ್ನು ಮುಖ್ಯ ವಾಹಿನಿಗೆ ಬರಬೇಕಾದರೆ ತೆಗೆದುಕೊಳ್ಳುವ ಕ್ರಮಗಳನ್ನು, ಅಂಗವಿಕಲತೆಗೆ ಕಾರಣಗಳು ಪರಿಹಾರಗಳನ್ನು ವಿವರಿಸಿದರು.

ಮುಕ್ತಾಯ ಸಮಾರಂಭ ಹಾಗೂ ಬಹುಮಾನ ವಿತರಣಾ ಸಮಾರಂಭದಲ್ಲಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕರಾದ ವಿ ನಾಗರಾಜ ಭಾಗವಹಿಸಿ ವಿಶೇಷ ಚೇತನ ಮಕ್ಕಳನ್ನು ಇತರೆ ಮಕ್ಕಳಂತೆ ಸಮಾನ ದೃಷ್ಟಿಯಿಂದ ನೋಡಬೇಕು ಸ್ವಾವಲಂಬಿಗಳಾಗಿ ಬದುಕಲು ಎಲ್ಲಾ ಕ್ಷೇತ್ರಗಳಲ್ಲಿ ಅವಕಾಶ ನೀಡಿ ಪ್ರೋತ್ಸಾಹಿಸಬೇಕೆಂದರು,

ಕ್ರೀಡೆ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು ಭಾಗವಹಿಸಿದ ಎಲ್ಲಾ ಮಕ್ಕಳಿಗೆ ಬಹುಮಾನ ಹಾಗೂ ಪ್ರಶಸ್ತಿ ಪತ್ರಗಳನ್ನು ವಿತರಿಸಲಾಯಿತು ಎಲ್ಲ ಮಕ್ಕಳಿಗೆ ಉಪಹಾರ ಹಾಗೂ ಸ್ನಾಕ್ಸ್ ವ್ಯವಸ್ಥೆ ಮಾಡಲಾಗಿತ್ತು ಕಾರ್ಯಕ್ರಮದಲ್ಲಿ ಭಾಗವಹಿಸಿದ ಮಕ್ಕಳಿಗೆ ಮತ್ತು ಪೋಷಕರಿಗೆ ನಿಯಮಾನುಸಾರ ಪ್ರಯಾಣ ಭತ್ಯೆಯನ್ನು ವಿತರಿಸಲಾಯಿತು,

ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರಾದ ರಹಿಂ ಶರೀಫ್ ರವರು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಾದ ಚಂದ್ರಶೇಖರ್ ರವರು ಹಾಗೂ ಶಿಕ್ಷಣ ಸಂಯೋಜಕರಾದ ಮುನಿಸ್ವಾಮಿ ರವರು ಮಾತನಾಡಿ ಪೋಷಕರಿಗೆ ಮತ್ತು ಮಕ್ಕಳಿಗೆ ಅನೇಕ ಮಾರ್ಗದರ್ಶನಗಳನ್ನು ನೀಡಿದರು

ಕಾರ್ಯಕ್ರಮವನ್ನು ಬಿಐಇಆರ್‌ಟಿಗಳಾದ ಶಿವಕುಮಾರ್ ಹಾಗೂ ಸುಜಾತಮ್ಮ ರವರು ವ್ಯವಸ್ಥಿತವಾಗಿ ಆಯೋಜಿಸಿದ್ದರು ಕ್ರೀಡಾಕೂಟಗಳ ಉಸ್ತುವಾರಿಯನ್ನು ದೈಹಿಕ ಶಿಕ್ಷಣ ಶಿಕ್ಷಕರಾದ ಸಲೀಂ ಪಾಷಾ ರವರು ನಿರ್ವಹಿಸಿದರು.

ಕಾರ್ಯಕ್ರಮದಲ್ಲಿ ಹೆಬ್ಬಣಿ ರಾಧಾಕೃಷ್ಣ, ಪ್ರೌಢಶಾಲೆಯ ಶಿಕ್ಷಕರಾದ ಅಂಜಲಪ್ಪ, ಗ್ರಾಮೀಣ ಪುನರ್ವಸತಿ ಕಾರ್ಯಕರ್ತ ಶ್ರೀನಾಥ್, ಶಾಲಾ ಸಿದ್ದತಾ ಕೇಂದ್ರದ ಸಿಬ್ಬಂದಿಯವರಾದ ಬಿಐ ಈ ಆರ್ ಟಿ ಸುಜಾತಮ್ಮ ಫಿಜಿಯೋಥೆರಪಿಸ್ಟ್ ಭವಿಷ್ಯ ಸಹಾಯಕಿ ಗೌರಿ ಭಾಗವಹಿಸಿದ್ದರು.

# ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಸಂಗೀತ ನೃತ್ಯ ಪ್ರದರ್ಶನ

**ಹನೂರು:** ತಾಲೂಕಿನ ಬಂಡಳ್ಳಿ ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ 2024-25 ನೇ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮ ಹಾಗೂ ಸಾಧಕರಿಗೆ ಸನ್ಮಾನ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮವು ಬಂಡಳ್ಳಿ ಗ್ರಾಮದಲ್ಲಿ ಆಯೋಜನೆ ಮಾಡಲಾಗಿದ್ದ ಬೃಹತ್ ವೇದಿಕೆಯಲ್ಲಿ ಸಂಭ್ರಮ ಸಡಗರದಿಂದ ಅದ್ದೂರಿಯಾಗಿ ಜರುಗಿತು,



ಶಾಲಾ ವಾರ್ಷಿಕೋತ್ಸವದ ಕಾರ್ಯಕ್ರಮದ ಅಂಗವಾಗಿ ಬಂಡಳ್ಳಿ ದೊಡ್ಡಮಠ ಫಲಹಾರ ಪ್ರಭುದೇವ ಸ್ವಾಮಿಗಳು, ಚಲನಚಿತ್ರ ನಟ ನಿರ್ದೇಶಕ ಎಸ್, ಮಹೇಂದರ್, ಮಾಜಿ ಶಾಸಕಿ ಪರಿಮಳ ನಾಗಪ್ಪ, ಬಿಇಒ ಗುರುಲಿಂಗಯ್ಯ, ಶಿಕ್ಷಕ ಗುರುಸ್ವಾಮಿ ಸೇರಿದಂತೆ ವೇದಿಕೆಯಲ್ಲಿ ಹಾಜರಿದ್ದ ಗಣರೆಲ್ಲರೂ ಕಾರ್ಯಕ್ರಮದ ಉದ್ಘಾಟನೆಯನ್ನು ನೆರವೇರಿಸಿದರು,

ಕಲಾ ಕ್ಷೇತ್ರದಲ್ಲಿ ತಮ್ಮದೇ ಆದ ಸೇವೆಯನ್ನು ಸಲ್ಲಿಸಿದ ಬಂಡಳ್ಳಿ ಗ್ರಾಮದವರೇ ಆದ ಚಲನಚಿತ್ರ ನಟರು ನಿರ್ದೇಶಕರು ಎಸ್ ಮಹೇಂದರ್, ಮಾದರಿ ಕೃಷಿಕ ರೈತರಾದ ಕರಪಯ್ಯ, ಮತ್ತು ಅಂತರಾಷ್ಟ್ರೀಯ ಖೋ ಖೋ ಪಟು ಕುಮಾರಿ ಚೈತ್ರ ಅವರನ್ನು ವಿಶೇಷವಾಗಿ ಕಾರ್ಯಕ್ರಮದಲ್ಲಿ ಸನ್ಮಾನಿಸಿ ಗೌರವಿಸಲಾಯಿತು, ಹಾಗೂ ವೇದಿಕೆಯಲ್ಲಿ ಹಾಜರಿದ್ದ ಗಣ್ಯರೆಲ್ಲರೂ ಸನ್ಮಾನಿಸಲಾಯಿತು,

ಬಂಡಳ್ಳಿ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯ ವಾರ್ಷಿಕೋತ್ಸವ ಕಾರ್ಯಕ್ರಮ ಯಾವ ಖಾಸಗಿ ಶಾಲೆಗಳಿಗೂ ಕಮ್ಮಿ ಏನು ಇಲ್ಲ ಎಂಬ ಸಂದೇಶವನ್ನು ರವಾನಿಸುವ ಮೂಲಕ ಅದ್ದೂರಿಯಾಗಿ ಕಾರ್ಯಕ್ರಮವನ್ನು ಆಯೋಜನೆ ಮಾಡಿ ರಾಜ್ಯದ ಗಮನ ಸೆಳೆಯುವಂತೆ ವೇದಿಕೆಯನ್ನು ಸೃಷ್ಟಿ ಮಾಡಲಾಗಿತ್ತು, ಖಾಸಗಿ ಶಾಲೆಗಳಿಗೂ ಕಡಿಮೆ ಇಲ್ಲ ಎಂಬಂತೆ ಬಣ್ಣ ಬಣ್ಣದ ಚಿತ್ತಾರ ಹುಡುಗೆ ತೊಡುಗೆಗಳನ್ನು ತೊಟ್ಟ ಬಂಡಳ್ಳಿ ಗ್ರಾಮದ ಸರ್ಕಾರಿ ಶಾಲೆಯ ಮಕ್ಕಳು ತಮ್ಮ ಪ್ರತಿಭೆಯನ್ನು ತೋರಿಸಿ ಕಣ್ಮನ ಸೆಳೆದಿದ್ದಾರೆ,

ಕಾರ್ಯಕ್ರಮದ ಆಯೋಜನೆಯ ಬಗ್ಗೆ ವೇದಿಕೆಯಲ್ಲಿ ಹಾಜರಿದ್ದ ಗಣ್ಯರೆಲ್ಲರೂ ಶಾಲೆಯ ವಾರ್ಷಿಕೋತ್ಸವದ ಕಾರ್ಯಕ್ರಮದ ಬಗ್ಗೆ ಹಾಡಿ ಹೊಗಳಿದರು, ಬೃಹತ್ ವೇದಿಕೆ ಬಣ್ಣ ಬಣ್ಣದ ದೀಪಾಲಂಕಾರ, ಶಾಲಾ ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಸಂಗೀತ ನೃತ್ಯ ಪ್ರದರ್ಶನಗಳು ಗಣ್ಯರು ಪೋಷಕರು ಹಾಜರಿದ್ದ ಸಾರ್ವಜನಿಕರೆಲ್ಲರಿಗೂ ಕಣ್ಮನ ಸೆಳೆಯುವಂತೆ ನಿಬ್ಬೆರಗಾಗುವಂತೆ ಒಂದು ವೇದಿಕೆ ಸೃಷ್ಟಿಯಾಗಿ ಎಲ್ಲರ ಗಮನ ಸೆಳೆಯುವಂತಹ ಸುಂದರ ವೇದಿಕೆಯಾಗಿ ಅದ್ದೂರಿ ಕಾರ್ಯಕ್ರಮವಾಗಿ ಜರುಗಿತು,

ಬಂಡಳ್ಳಿ ಸರ್ಕಾರಿ ಶಾಲೆಯ ಮುಖ್ಯ ಶಿಕ್ಷಕ ಗುರುಸ್ವಾಮಿ ಮಾತನಾಡಿ ಈ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಬಹಳ ವಿಜೃಂಭಣೆಯಿಂದ ಆಚರಿಸುತ್ತಿರುವುದು ಹೆಮ್ಮೆಯಾಗುತ್ತದೆ, ಈ ಕಾಲದ ಜನರ ಮನಸ್ಥಿತಿಗಳು ಅಗತ್ಯತೆಗಳಿಗೆ ಅನುಗುಣವಾಗಿ ನಾವು ಕೂಡ ಬದಲಾಗಬೇಕಾಗಿದೆ ಸರ್ಕಾರಿ ಶಾಲೆ ಎಂದ ಕೂಡ ಯಾರು ಕೂಡ ಮೂಗು ಮೂರೆಯುವ ಅವಶ್ಯಕತೆ ಇಲ್ಲ ಸರ್ಕಾರಿ ಶಾಲೆಗಳು ಕೂಡ ಅತ್ಯುತ್ತಮವಾಗಿ ರಾಜ್ಯದ್ಯಂತ ನಿರ್ವಹಣೆ ಮಾಡುತ್ತಿದೆ ನಾವು ಕೂಡ ಸರ್ಕಾರಿ ಶಾಲೆಯ ಒಂದು ಭಾಗ ಎಂದು ಹೇಳುವುದು ಹೆಮ್ಮೆ ಎಂದು ಭಾವಿಸುತ್ತೇನೆ,

ಈಶನಿಟ್ಟಿನಲ್ಲಿ ಉತ್ತಮವಾದ ಕಾರ್ಯಕ್ರಮವನ್ನು ಕೊಡುವ ನಿಟ್ಟಿನಲ್ಲಿ ಹಳೆಯ ವಿದ್ಯಾರ್ಥಿಗಳ ಸಭೆಯನ್ನು ನಡೆಸಿ ಅವರ ಸಲಹೆ ಸೂಚನೆಯ ಮೇರೆಗೆ ಸಹಕಾರದೊಂದಿಗೆ ಇಂತಹ ಒಂದು ಅತ್ಯುತ್ತಮ ಕಾರ್ಯಕ್ರಮವನ್ನು ಆಯೋಜಿಸಿರುವುದು ಎಲ್ಲರ ಸಹಕಾರ ನೀಡಿದ್ದಾರೆ, ಚಲನಚಿತ್ರ ನಟರು ಮಹೇಂದರ್ ಅವರು ಈ ಗ್ರಾಮದ ಅಪ್ಪಟ ಗ್ರಾಮೀಣ ಪ್ರತಿಭೆ, ಅವರು ಈ ಸಮಾಜಕ್ಕೆ ಕೊಟ್ಟಂತಹ ಮೌಲ್ಯಗಳು ಬಹಳ ದೊಡ್ಡದು,

ಸುಮಾರು 9 ದಶಕಗಳ ಇತಿಹಾಸ ಇರುವ ಇಂತಹ ಶಾಲೆಯಲ್ಲಿ ಸಾವಿರಾರು ವಿದ್ಯಾರ್ಥಿಗಳು ಅತ್ಯುತ್ತಮ ಜೀವನವನ್ನು ಕಟ್ಟಿಕೊಂಡಿದ್ದಾರೆ ವಿದ್ಯಾರ್ಥಿಗಳ ಜೀವನವನ್ನು ಕೊಟ್ಟಿರುವಂತಹ ಈ ಸುತ್ತಮುತ್ತಲ ಗ್ರಾಮಗಳ ಶಾಲೆಗಳಿಗೆ ಮಾದರಿಯಾಗಿದೆ, ಹಳೆಯ ವಿದ್ಯಾರ್ಥಿಗಳು ಶಾಲೆಯನ್ನು ಉತ್ತಮ ರೀತಿಯಲ್ಲಿ ಉತ್ತುಂಗಕ್ಕೆ ಕೊಂಡೊಯ್ಯಬೇಕೆಂಬ ಆಶಯ ಹೊಂದಿದ್ದಾರೆ, ನಮ್ಮ ಶಾಲೆಯಲ್ಲಿ ಯಾವುದೇ ಭಾಷೆ ಕನ್ನಡ ಇಂಗ್ಲಿಷ್ ಹಿಂದಿ ಅಥವಾ ಯಾವುದೇ ಇತರ ಭಾಷೆಗಳ ಶಿಕ್ಷಣ ನಮ್ಮ ಶಾಲೆಯಲ್ಲಿ ಸಿಗುತ್ತಿದೆ ನಮ್ಮ ಶಾಲೆಯಲ್ಲಿನ ಅತ್ಯುತ್ತಮ ಶಿಕ್ಷಕ ವರ್ಗದವರೇ ಕಾರಣ,

ಲಕ್ಷಾಂತರ ರೂ, ಸಾವಿರಾರು ಖರ್ಚು ಮಾಡಿ ಖಾಸಗಿ ಶಾಲೆಗಳತ್ತ ಮುಖ ಮಾಡುವಂತಹ ಈಗಿನ ಕಾಲದಲ್ಲಿ ನಮ್ಮ ಸರ್ಕಾರಿ ಶಾಲೆಯು ಯಾವುದೇ ರೀತಿ ಎಲ್ಲಾ ರೀತಿಯ ಪೈಪೋಟಿಗೆ ಸಿದ್ದರಿದ್ದೇವೆ, ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳಲ್ಲೂ ಸಹ ಶಿಕ್ಷಣದ ಗುಣಮಟ್ಟವನ್ನು ಕಾಯ್ದುಕೊಂಡು ಬಂದಿದೆ, ರಾಜ್ಯಮಟ್ಟದ ಅತ್ಯುತ್ತಮ ವೇದಿಕೆಯನ್ನು ನೀಡಬೇಕೆಂಬ ಗುರಿಯನ್ನು ಇಟ್ಟುಕೊಂಡು ಇಂದು ಶಾಲಾ ವಾರ್ಷಿಕೋತ್ಸವವನ್ನು ವಿಜೃಂಭಣೆಯಿಂದ ಆಯೋಜಿಸಲಾಗಿದೆ, ಈ ನಿಟ್ಟಿನಲ್ಲಿ ಶಾಲೆಗಳ ಅಭಿವೃದ್ಧಿಗೆ ಪೋಷಕರ ಸಹಕಾರ ಇರಲಿ ಎಂದು ತಿಳಿಸಿದರು,

ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಗುರುಲಿಂಗಯ್ಯ, ಗ್ರಾಮ ಪಂ, ಅಧ್ಯಕ್ಷ ಯಶೋಧ, ಚಾಮುಲ್ ಅಧ್ಯಕ್ಷ ನಂಜುಂಡಸ್ವಾಮಿ, ನಿರ್ದೇಶಕ ಸಾಹುಲ್ ಅಹಮದ್, ಯೋಗ ಪಟು ಪ್ರಕಾಶ್, ಜುಲ್ಫಿಕರ್ ಅಹಮದ್, ಕರಪಯ್ಯ, ಲಿಂಗರಾಜು, ಮುರುಳಿ, ಸದಸ್ಯ ನಾಗರಾಜು, ನಾಗಯ್ಯ, ಚಿನ್ನಪ್ಪಯ್ಯ, ಅಶೋಕ್, ಶ್ರೀನಿವಾಸ್, ಶಿವಮಲ್ಲು, ಮಾದೇಶ್, ವೆಂಕಟೇಶ್ ಸೇರಿದಂತೆ ಶಿಕ್ಷಕರು ವಿದ್ಯಾರ್ಥಿಗಳು ಪೋಷಕರು ಹಾಜರಿದ್ದರು,

# ಮಕ್ಕಳ ಹಕ್ಕುಗಳ ಉಲ್ಲಂಘನೆ ಶಿಕ್ಷಾರ್ಹ ಅಪರಾಧ

ದೇವನಹಳ್ಳಿ: ಮಕ್ಕಳು ದೇಶದ ಆಸ್ತಿ, ಮಕ್ಕಳ ಹಕ್ಕುಗಳ ಮೇಲಿನ ದೌರ್ಜನ್ಯ ಶಿಕ್ಷಾರ್ಹ ಅಪರಾಧವಾಗಿದ್ದು ಮಕ್ಕಳ ರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿ ಆಗಿದೆ ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಕೆ.ನಾಗಣ್ಣ ಗೌಡ ಅವರು ಹೇಳಿದರು.




ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಕ್ಕಳ ಘಟಕ ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ಸಂಯುಕ್ತಾಶ್ರಯದಲ್ಲಿ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಆರ್.ಟಿ.ಇ 2009, ಪೋಕ್ಸೋ 2012 ಹಾಗೂ ಬಾಲನ್ಯಾಯ ಕಾಯ್ದೆ 2015 ರ ಅನುಷ್ಠಾನದ ಕುರಿತು ವಿವಿಧ ಇಲಾಖೆ ಭಾಗಿದಾರರೊಂದಿಗೆ ಪ್ರಗತಿ ಪರಿಶೀಲನಾ ಸಭೆ ಮತ್ತು ತರಬೇತಿ ಕಾರ್ಯಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿ ಮಗುವಿನ ಸರ್ವತೋಮುಖ ಅಭಿವೃದ್ಧಿಗೆ ಬದುಕುವ ಹಕ್ಕು, ವಿಕಾಸ ಹೊಂದುವ ಹಕ್ಕು, ಭಾಗವಹಿಸುವ ಹಕ್ಕು, ರಕ್ಷಣೆ ಹಕ್ಕು ಪ್ರಮುಖ ಅಂಶಗಳಾಗಿದೆ. ವಿವಿಧ ಕಾರಣಗಳಿಂದ ಮಕ್ಕಳ ಮೇಲೆ ದೌರ್ಜನ್ಯಗಳು, ಹಕ್ಕುಗಳ ಉಲ್ಲಂಘನೆ ನಡೆಯುತ್ತಾ ಬಂದಿರುವುದು ಆಘಾತಕಾರಿ. ಕಾನೂನು ಅಡಿಯಲ್ಲಿ ಮಕ್ಕಳ ರಕ್ಷಣೆ ಆಗಬೇಕು. ಮಕ್ಕಳ ಹಕ್ಕುಗಳನ್ನು ಉಲ್ಲಂಘಿಸುವವರ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಬೇಕು. ಮಕ್ಕಳ ರಕ್ಷಣೆ ಮಾಡುವುದು ಪ್ರತಿಯೊಬ್ಬರ ಜವಾಬ್ದಾರಿ ಎಂದರು.

ಶಾಲೆಗೆ ಹಾಜರಾಗುತ್ತಿರುವ ಮಕ್ಕಳು ಮತ್ತು ಶಾಲೆಗೆ ಬರದೇ ಇರುವ ಮಕ್ಕಳ ಬಗ್ಗೆ ಗಮನ ಹರಿಸಬೇಕು. ಶಾಲೆಗೆ ಬರದೇ ಇರುವ ಮಕ್ಕಳು ಕಂಡು ಬಂದಾಗ ಆ ಮಗುವು ಶಾಲೆಗೆ ಬರದೇ ಇರಲು ಕಾರಣ ತಿಳಿದು ಅದನ್ನು ಪರಿಹರಿಸಬೇಕು. ಶಾಲೆಗಳಲ್ಲಿ ಪೊಲೀಸ್ ಸಹಾಯವಾಣಿ ಸಂಖ್ಯೆ 112 ಅನ್ನು ಕಾಡ್ಡಾಯವಾಗಿ ಪ್ರದರ್ಶಿಸಬೇಕು ಜೊತೆಗೆ ದೂರು ಪೆಟ್ಟಿಗೆಯನ್ನು ಇರಿಸಲು ಹೇಳಿದರು.

ಬಾಲ್ಯ ವಿವಾಹ, ಭಿಕ್ಷಾಟನೆ, ಮಕ್ಕಳ ಮಾರಾಟ, ಲೈಂಗಿಕ ದೌರ್ಜನ್ಯ, ಬಾಲ ಕಾರ್ಮಿಕ ಪದ್ಧತಿ ಕಂಡು ಬಂದಲ್ಲಿ ಸಾರ್ವಜನಿಕರು ಮಕ್ಕಳ ಸಹಾಯವಾಣಿ ಸಂಖ್ಯೆ 1098 ಅಥವಾ ಪೊಲೀಸ್ ಸಹಾಯವಾಣಿ ಸಂಖ್ಯೆ 112 ಗೆ ಉಚಿತ ಕರೆ ಮಾಡಿ ದೂರು ನೀಡಬಹುದಾಗಿದೆ.

ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕಲ್ಪಿಸುವುದರಿಂದ ದೇಶದ ಅಭಿವೃದ್ಧಿಗೆ ಪೂರಕ. ಮಕ್ಕಳ ರಕ್ಷಣೆಗೆ ಸಂಬಂಧಿಸಿದಂತೆ ಹೊಸ ಹೊಸ ಕಾನೂನುಗಳು ಬರುತ್ತದೆ, ಕಾನೂನುಗಳು ತಿದ್ದುಪಡಿ ಆಗುತ್ತದೆ. ಆ ಕಾನೂನುಗಳ ಬಗ್ಗೆ ಅಧಿಕಾರಿಗಳಿಗೆ ಮಾಹಿತಿ ನೀಡಲು ಕಾಲಕಾಲಕ್ಕೆ ಕಾರ್ಯಾಗಾರಗಳನ್ನು ಏರ್ಪಡಿಸಲಾಗುತ್ತದೆ ಎಂದು ಅವರು ಹೇಳಿದರು. ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಎ. ಬಿ ಬಸವರಾಜು, ಜಿಲ್ಲಾ ಪಂಚಾಯತ್ ನ ಉಪ ಕಾರ್ಯದರ್ಶಿಯಾದ ರಮೇಶ್ ಟಿ. ಕೆ, ಮುಖ್ಯ ಯೋಜನಾಧಿಕಾರಿಗಳಾದ ರಾಮ ಕೃಷ್ಣಯ್ಯ, ಯೋಜನಾ ನಿರ್ದೇಶಕರಾದ ವಿಠಲ್ ಕಾವ್ಳೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಮುದ್ದಣ್ಣ, ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿ ಅನಿತಾಲಕ್ಷ್ಮಿ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ರಾಮು ಮಲ್ಲಯ್ಯ, ಡಿವೈಎಸ್ಪಿ ಶಂಕರ್ ಗೌಡ ಪಾಟೀಲ್, ಬಚಪನ್ ಬಚಾವೊ ರಾಜ್ಯ ಸಂಚಾಲಕರು ಬಿನೂ ವರ್ಗಿಸ್ ಸೇರಿದಂತೆ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು,ಸಿಬ್ಬಂದಿ ವರ್ಗ ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಮುಖ್ಯಸ್ಥರು ಉಪಸ್ಥಿತರಿದ್ದರು.

# ರಾಜೇಶ್ ನಿರ್ದೇಶಕರಾಗಿ ಆಯ್ಕೆ

**ನಾಗಮಂಗಲ:** ಕರ್ನಾಟಕ ರಾಜ್ಯ ರೈತ ಉತ್ಪಾದಕರ ಸಹಕಾರ ಸಂಘ ನಿಯಮಿತ ಬೆಂಗಳೂರು ರಾಜ್ಯ ಆಡಳಿತ ಮಂಡಳಿಯ ನಿರ್ದೇಶಕರಾಗಿ ಅವಿರೋಧವಾಗಿ ಎನ್ ಜೆ ರಾಜೇಶ್ ಆಯ್ಕೆಯಾಗಿದ್ದಾರೆ.



ಕರ್ನಾಟಕ ರಾಜ್ಯ ರೈತ ಉತ್ಪಾದಕರ ಸಹಕಾರ ಸಂಘ ನಿಯಮಿತ ಸಾಮಾನ್ಯ ಚುನಾವಣೆಯಲ್ಲಿ ಮೈಸೂರು ವಿಭಾಗ ಮೈಸೂರು.ಮಂಡ್ಯ. ಚಾಮರಾಜನಗರ. ಜಿಲ್ಲೆಗಳ ದೇವಲಾಪುರ ರೈತ ಉತ್ಪಾದಕರ ಸಂಘ ಮಂಡ್ಯ ಜಿಲ್ಲೆಯಿಂದ ಕರ್ನಾಟಕ ರಾಜ್ಯ ರೈತ ಉತ್ಪಾದಕರ ಸಹಕಾರ ಸಂಘಗಳ ನಿಯಮಿತ ಬೆಂಗಳೂರು ಇವರ ಆಡಳಿತ ಮಂಡಳಿಗೆ ನಿರ್ದೇಶಕರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ರಾಜ್ಯ ನಿರ್ದೇಶಕರಿಗೆ ಅಭಿನಂದನೆಗಳು ಕರ್ನಾಟಕ ರಾಜ್ಯ ರೈತ ಉತ್ಪಾದಕರ ಸಹಕಾರ ಸಂಘ ನಿಯಮಿತ ಬೆಂಗಳೂರು ಆಡಳಿತ ಮಂಡಳಿಯ ನೂತನ ನಿರ್ದೇಶಕರಾಗಿ ಮಂಡ್ಯ ಜಿಲ್ಲೆಯಿಂದ ಆಯ್ಕೆಯಾಗಿರುವ ಎನ್. ಜೆ ರಾಜೇಶ್ ರವರಿಗೆ ದೇವಲಾಪುರ ಹೋಬಳಿಯ ರೈತ ಪರವಾಗಿ ದೇವಲಾಪುರ ರೈತ ಉತ್ಪಾದಕರ ಕಂಪನಿ ನಿಯಮಿತ ಹಾಗೂ ನಾಗಮಂಗಲ ಕರ್ನಾಟಕ ರಾಜ್ಯ ರೈತ ಕೃಷಿ ಸಂವರ್ಧನ ಕೇಂದ್ರದ ಅಧ್ಯಕ್ಷರು ಪದಾಧಿಕಾರಿಗಳು ಅಭಿನಂದನೆ ಸಲ್ಲಿಸಿದ್ದಾರೆ.

# ಹೊಸಹೊಳಲು ಗ್ರಾಮದ ಶ್ರೀ ಲಕ್ಷ್ಮೀ ನಾರಾಯಣಸ್ವಾಮಿ ಬ್ರಹ್ಮರಥೋತ್ಸವ



**ಕೆ.ಆರ್.ಪೇಟೆ:** ತಾಲ್ಲೂಕಿನ ಸಾಂಸ್ಕೃತಿಕ ಹಿನ್ನೆಲೆಯುಳ್ಳ ಹೊಯ್ಸಳರ ಶಿಲ್ಪಕಲೆಯನ್ನು ಹೊಂದಿರುವ ಐತಿಹಾಸಿಕ ಗ್ರಾಮ ಹೊಸಹೊಳಲು ಗ್ರಾಮದ ಶ್ರೀ ಲಕ್ಷ್ಮೀ ನಾರಾಯಣಸ್ವಾಮಿ ಬ್ರಹ್ಮ ರಥೋತ್ಸವವು ವಿಜೃಂಭಣೆ ಯಿಂದ ನಡೆಯಿತು,

ತಾಲ್ಲೂಕು ಮುಜರಾಯಿ ಅಧಿಕಾರಿಗಳು ಹಾಗೂ ತಹಸೀಲ್ದಾರ್ ಡಾ.ಎಸ್,ಯು, ಅಶೋಕ್, ಸಮಾಜ ಸೇವಕ ಆರ್‌ಟಿಓ ಅಧಿಕಾರಿ ಮಲ್ಲಿಕಾರ್ಜುನ್, ಪುರಸಭಾ ಅಧ್ಯಕ್ಷೆ ಪಂಕಜಾ ಅವರು ರಥಕ್ಕೆ ಸಾಂಪ್ರದಾಯಿಕ ಪೂಜೆ ಸಲ್ಲಿಸಿ ರಥೋತ್ಸವಕ್ಕೆ ಚಾಲನೆ ನೀಡಿದರು,

ಸರ್ವಾಲಂಕಾ ರಗೊಂಡ ಶ್ರೀ ಲಕ್ಷ್ಮೀ ನಾರಾಯಣಸ್ವಾಮಿ ಯವರ ಭವ್ಯ ರಥದ ಮೇಲೆ ಉತ್ಸವ ಮೂರ್ತಿಯು ಅಲಂಕರಿಸುತ್ತಿದ್ದಂತೆ ಭಕ್ತಸಾಗರದಿಂದ ಶ್ರೀ ಲಕ್ಷ್ಮೀ ನಾರಾಯಣ ಗೋವಿಂದ, ಶ್ರೀನಿವಾಸ ಗೋವಿಂದ, ವೆಂಕಟರಮಣ ಗೋವಿಂದ,,,, ನಾಮಸ್ಮರಣೆಗಳು ಮುಗಿಲು ಮುಟ್ಟಿದವು,

ದೇವಾಲಯದ ಸುತ್ತಲೂ ಪ್ರದಕ್ಷಿಣೆ ಹಾಕಿ ಭಕ್ತಸಾಗರದೊಂದಿಗೆ ರಥೋತ್ಸವನ್ನು ಎಳೆದು ಮಾತನಾಡಿದ ಸಮಾಜ ಸೇವಕ ಆರ್,ಟಿ,ಓ ಮಲ್ಲಿಕಾರ್ಜುನ್ ಮಾತನಾಡಿ ನಮ್ಮ ತಾಲೂಕಿನ ಸಾಂಸ್ಕೃತಿಕ ಹಿನ್ನೆಲೆಯನ್ನು ಹೊಂದಿರುವ ಗ್ರಾಮ, ಮೈಸೂರು ಅರಸರಿಗೆ ಸಾಲ ಕೊಟ್ಟಿದ್ದ ಗ್ರಾಮ ಎಂದೇ ಖ್ಯಾತಿ ಪಡೆದುಕೊಂಡಿರುವ ಹೊಸಹೊಳಲು ಗ್ರಾಮ ಸಾಂಸ್ಕೃತಿಕ ನೆಲೆಯನ್ನು ಹೊಂದಿರುವ ವಿಶೇಷ ಗ್ರಾಮವಾಗಿದೆ, ಪ್ರತಿವರ್ಷವೂ ಅತ್ಯಂತ ವಿಜೃಂಭಣೆಯಿಂದ ಜಾತ್ರಾ ಮಹೋತ್ಸವವನ್ನು ಆಚರಿಸಲಾಗುತ್ತದೆ, ಲಕ್ಷ್ಮೀ ನಾರಾಯಣಸ್ವಾಮಿ ದೇವರ ಆಶೀರ್ವಾದದಿಂದ ತಾಲ್ಲೂಕಿನ ಎಲ್ಲಾ ಜನತೆಗೆ ಒಳ್ಳೆಯದಾಗಲಿ ಎಂದು ದೇವರಲ್ಲಿ ಪ್ರಾರ್ಥಿಸುತ್ತೇನೆ ಎಂದರು,

ಜಾನಪದ ಕಲಾತಂಡಗಳ ನೃತ್ಯವು ರಥೋತ್ಸವ ಮತ್ತು ಜಾತ್ರಾ ಸೌಂದರ್ಯವನ್ನು ಹೆಚ್ಚಿಸಿದವು ಭಕ್ತರು ಶ್ರೀ ರಥದ ಕಳಸಕ್ಕೆ ಬಾಳೆಹಣ್ಣು ಹಾಗೂ ಜವನವನ್ನು ಎಸೆದು ಪುನೀತರಾದರು, ರಥೋತ್ಸವದಲ್ಲಿ ಭಾಗವಹಿಸಿದ್ದ ಭಕ್ತಾದಿಗಳಿಗೆ ಪುಳಿಯೊಗರೆ, ಮೊಸರನ್ನ, ಮಜ್ಜಿಗೆ-ಪಾನಕ ಪ್ರಸಾದವನ್ನು ದೇವಾಲಯ ಸಮಿತಿಯ ವತಿಯಿಂದ ವಿತರಿಸಲಾಯಿತು,

ರಥೋತ್ಸವದಲ್ಲಿ ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಹೆಚ್,ಕೆ,ಅಶೋಕ್, ಶ್ರೀ ಲಕ್ಷ್ಮೀ ನಾರಾಯಣಸ್ವಾಮಿ ದೇವಾಲಯ ಸಮಿತಿಯ ಅಧ್ಯಕ್ಷ ರಾಮಚಂದ್ರು, ಕಾರ್ಯದರ್ಶಿ ಹೆಚ್,ಜಿ,ರವೀಂದ್ರ, ಪುರಸಭಾ ಸ್ಥಾಯಿ ಸಮಿತಿ ಅಧ್ಯಕ್ಷ ಕೆ,ಆರ್,ರವೀಂದ್ರಬಾಬು, ಪುರಸಭಾ ಸದಸ್ಯರಾದ ಹೆಚ್,ಆರ್,ಲೋಕೇಶ್, ಹೆಚ್,ಎನ್,ಪ್ರವೀಣ್, ಹೆಚ್,ಡಿ,ಅಶೋಕ್, ಕೆ,ಬಿ,ಮಹೇಶ್, ಶಾಸಕರ ಸಹೋದರ ಹೆಚ್,ಟಿ,ಲೋಕೇಶ್, ಗ್ರೇಡ್-2 ತಹಸೀಲ್ದಾರ್ ಲೋಕೇಶ್, ರಾಜಸ್ವ ನಿರೀಕ್ಷಕ ಜ್ಞಾನೇಶ್, ಗ್ರಾಮ ಆಡಳಿತ ಅಧಿಕಾರಿ ಜಗದೀಶ್, ಮುಖಂಡರಾದ ಡಾ,ಶ್ರೀನಿವಾಸಶೆಟ್ಟಿ, ರಾಮೇಗೌಡ, ಹೆಚ್,ಎಸ್,ಕೃಷ್ಣೇಗೌಡ, ಪ್ರಕಾಶ್, ಅಭಿಶೇಖರ್ ಸೇರಿದಂತೆ ಸಾವಿರಾರು ಭಕ್ತಾದಿಗಳು ಭಾಗವಹಿಸಿದ್ದರು,

# ಅಧ್ಯಕ್ಷರಾಗಿ ಮಂಗಳ ಗೋವಿಂದಪ್ಪ ಆಯ್ಕೆ




**ಮಾಗಡಿ:** ತಾಲೂಕಿನ ಸಾತನೂರು ಗ್ರಾಮಪಂಚಾಯ್ತಿಗೆ ನೂತನ ಅಧ್ಯಕ್ಷರಾಗಿ ಕಾಂಗ್ರೆಸ್ ಬೆಂಬಲಿತ ಮಂಗಳ ಗೋವಿಂದಪ್ಪ ಅವಿರೋಧವಾಗಿ ಆಯ್ಕೆಯಾಗಿದ್ದಾರೆ,

ಶಿವಲಿಂಗಯ್ಯ ರಾಜೀನಾಮೆಯಿಂದ ತೆರವಾದ ಅಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಮಂಗಳಮ್ಮ ಗೋವಿಂದಯ್ಯ ಒರತು ಪಡಿಸಿ ಯಾರು ನಾಮಪತ್ರ ಸಲ್ಲಿಸದ ಕಾರಣ ಚುನಾವಣಾಧಿಕಾರಿ ಸಂಗಮು ಪೂಜಾರಿ ಅವಿರೋಧ ಆಯ್ಕೆಯನ್ನು ಘೋಷಿಸಿದರು, ಮುಖಂಡರು , ಕಾರ್ಯಕರ್ತರು, ಅಭಿಮಾನಿಗಳು ಪಟಾಕಿ ಸಿಡಿಸಿ ಸಿಹಿ ಹಂಚುವ ಮೂಲಕ ಸಂಭ್ರಮಾಚರಣೆ ನಡೆಸಿದರು,

ನೂತನ ಅಧ್ಯಕ್ಷೆ ಮಂಗಳ ಗೋವಿಂದಪ್ಪ ಮಾತನಾಡಿ, ಗ್ರಾಮೀಣ ಭಾಗದ ಸರ್ವತೋಮುಖ ಅಭಿವೃದ್ಧಿಪಡಿಸಲು ಗ್ರಾ,ಪಂಯ ಪಾತ್ರ ಮಹತ್ವವಾಗಿದೆ, ಪ್ರತಿ ಗ್ರಾಮಗಳಲ್ಲಿನ ಸಮಸ್ಯೆಗಳನ್ನು ಅರಿತು ಸಮಸ್ಯೆ ಬಗೆಹರಿಸಿ, ಮಾದರಿ ಗ್ರಾಮಪಂಚಾಯ್ತಿಗೆ ಎಲ್ಲರ ಸಹಕಾರದಿಂದ ಒತ್ತು ನೀಡುತ್ತೇನೆ, ಬೇಸಿಗೆ ಸಮೀಪಿಸಿದ್ದು ಕುಡಿಯುವ ನೀರಿಗೆ ಸಮಸ್ಯೆ ಬಾರದಂತೆ ನಿಗಾವಹಿಸಲಾಗುವುದು, ಅಗತ್ಯ ಇದ್ದ ಕಡೆ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡಲಾಗುವುದು ಎಂದರು,

ನರೇಗಾ ಯೋಜನೆಯಡಿ ಗ್ರಾಮಗಳ ಅಭಿವೃದ್ಧಿಗೆ ಪೂರಕವಾಗಿ ಕೆಲಸ ಮಾಡಿಸಲು ಉತ್ತೇಜಿಸಿ ನರೇಗ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಲಾಗುವುದು, ಜಾಬ್‌ಕಾರ್ಡ್ ಇಲ್ಲದವರಿಗೆ ಜಾಬ್ ಕಾರ್ಡ್ ಕೊಡಿಸಲಾಗುವುದು, ಗ್ರಾಮಗಳಿಂದ ನಗರ ಪ್ರದೇಶಕ್ಕೆ ಕೆಲಸಕ್ಕೆ ಹೋಗುವವರನ್ನು ತಪ್ಪಿಸಿ ಸ್ಥಳಿಯವಾಗಿ ಕೆಲಸ ಕೊಡುವ ಕೆಲಸ ಪ್ರಾಮಾಣಿಕವಾಗಿ ಮಾಡಲಾಗುವುದು ಎಂದರು,

ತಾ,ಪಂ, ಮಾಜಿ ಸದಸ್ಯೆ ಸುಮಾ ರಮೇಶ್ ಮಾತನಾಡಿ, ಶಾಸಕ ಎಚ್,ಸಿ,ಬಾಲಕೃಷ್ಣ, ಮಾಜಿ ಸಂಸದ ಡಿ,ಕೆ,ಸುರೇಶ್, ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ಎಚ್,ಎನ್,ಆಶೋಕ್ ಅವರು ಎಲ್ಲಾ ಸದಸ್ಯರಿಗೂ ಹಂತ,ಹಂತವಾಗಿ ಅಧಿಕಾರ ನೀಡುತ್ತಿರುವ ಹಿನ್ನಲೆಯಲ್ಲಿ ಇಂದು ಮಂಗಳ ಗೋವಿಂದಪ್ಪ ಅವರನ್ನು ಅಧ್ಯಕ್ಷರನ್ನಾಗಿ ಮಾಡಲಾಗಿದೆ, ಶಾಸಕ ಎಚ್,ಸಿ,ಬಾಲಕೃಷ್ಣ ಅವರಿಗೆ ಈ ಗ್ರಾಮಪಂಚಾಯ್ತಿ ಬಗ್ಗೆ ಹೆಚ್ಚು ಒಲವು ಇರುವುದರಿಂದ ಶಾಶ್ವತ ಕಾಮಗಾರಿಗಳನ್ನು ಮಾಡಿದ್ದಾರೆ ಮುಂದಿನ ದಿನಗಳಲ್ಲಿ ಅವರಿಗೆ ಜನತೆ ಮತಷ್ಟು ಸಹಕಾರ ನೀಡುವಂತೆ ಮನವಿ ಮಾಡಿದರು,

ಉಪಾಧ್ಯಕ್ಷರು ಗಂಗಮ್ಮ ರಾಜಶೇಖರಯ್ಯ, ಸದಸ್ಯರಾದ ಮಲ್ಲಿಕಾರ್ಜುನಯ್ಯ, ಗಂಗಮ್ಮರಾಮಕೃಷ್ಣಯ್ಯ, ನಂದೀಶ್, ಜಯಮ್ಮ,ಭದ್ರಕಾಳಮ್ಮ, ಮಹದೇವಯ್ಯ, ಹೊನ್ನಮ್ಮ, ಸರೋಜಮ್ಮ, ಗಂಗಮ್ಮ, ಮಂಜುನಾಥ್, ಮುಖಂಡರಾದ ರಮೇಶ್, ದೋಣಕುಪ್ಪೆ ರಾಮಣ್ಣ, ಸಂಪತ್ತು, ಬಸಂತಿ, ಗೋವಿಂದಪ್ಪ, ಶ್ರೀನಿವಾಸ್ ಇತರರು ಇದ್ದರು,

# 10 ತಾಸು ವಿದ್ಯುತ್ ನೀಡುವಂತೆ ಒತ್ತಾಯ



**ಮುಳಬಾಗಿಲು:** ಲೋಡ್ ಶೆಡ್ಡಿಂಗ್ ಹೆಸರಿನಲ್ಲಿ ಸಮರ್ಪಕವಾದ ವಿದ್ಯುತ್ ನೀಡದೇ ರೈತರ ಜೀವನದ ಜೊತೆ ಹಾಗೂ ಮಕ್ಕಳ ಭವಿಷ್ಯದ ಚೆಲ್ಲಾಟವಾಡುತ್ತಿರುವ ಬೆಸ್ಕಾಂ ಅಧಿಕಾರಿಗಳ ವಿರುದ್ಧ ಕ್ರಮಕೈಗೊಂಡು ಗುಣಮಟ್ಟದ 10 ತಾಸು ವಿದ್ಯುತ್ ನೀಡಬೇಕೆಂದು ರೈತ ಸಂಘದಿಂದ ಬೆಳೆ ಸಮೇತ ಮಾ.10 ರ ಸೋಮವಾರ ರಾಜ್ಯ ಹೆದ್ದಾರಿ ವಡ್ಡಹಳ್ಳಿ ಸರ್ಕಲ್ ಬಂದ್ ಮಾಡಲು ಪ್ರವಾಸಿ ಮಂದಿರದಲ್ಲಿ ಕರೆದಿದ್ದ ರೈತ ಸಂಘದ ಸಭೆಯಲ್ಲಿ ತೀರ್ಮಾನ ಮಾಡಲಾಯಿತು.

ಪ್ರಕೃತಿ ವಿಕೋಪ, ಸಾಂಕ್ರಾಮಿಕ ರೋಗಗಳ ಹಾವಳಿಯಿಂದ ರೈತರು ಬೆಳೆದಂತಹ ಬೆಳೆಗಳಿಗೆ ಸೂಕ್ತವಾದ ಮಾರುಕಟ್ಟೆ ವ್ಯವಸ್ಥೆಯಿಲ್ಲದೆ ಕಣ್ಣ ಮುಂದೆಯೇ ಬೆಳೆ ನಾಶ ಒಂದು ಕಡೆಯಾದರೆ ಮತ್ತೊಂದು ಕಡೆ ಬೆಳೆ ಸಮೃದ್ಧವಾಗಿ ಮಾರುಕಟ್ಟೆಯಲ್ಲಿ ಉತ್ತಮ ಬೆಳೆಯಿದ್ದರೂ ಬೆಸ್ಕಾಂ ಅಧಿಕಾರಿಗಳ ನಿರ್ಲಕ್ಷ ಮತ್ತು ರೈತ ವಿರೋಧಿ ಧೋರಣೆಯಿಂದ ಕೈಗೆ ಬಂದ ಬೆಳೆ ಕಣ್ಣ ಮುಂದೆಯೇ ಸಮರ್ಪಕವಾದ ನೀರು ಹಾಯಿಸದೆ ಒಣಗಿ ಹೋಗುವ ಜೊತೆಗೆ ಹಾಕಿದ ಬಂಡವಾಳ ಕೈಗೆ ಸಿಗದೆ ಸಾಲದ ಸುಳಿಗೆ ಸಿಲುಕಲು ಬೆಸ್ಕಾಂ ಅಧಿಕಾರಿಗಳೇ ನೇರ ಕಾರಣ ಎಂದು ರೈತಸಂಘದ ತಾಲೂಕು ಅಧ್ಯಕ್ಷ ಯಲುವಳ್ಳಿ ಪ್ರಭಾಕರ್ ವಿದ್ಯುತ್ ಅವ್ಯವಸ್ಥೆ ಬಗ್ಗೆ ಅಸಮಧಾನ ವ್ಯಕ್ತಪಡಿಸಿದರು..ಪರೀಕ್ಷೆಯ. ಸಮಯದಲ್ಲಿ. ರಾತ್ರಿಯ ವೇಳೆ. ವಿದ್ಯುತ್ ಕಡಿತ ಮಾಡಿ. ಮಕ್ಕಳ. ಭವಿಷ್ಯದ ಜೊತೆ ಚೆಲ್ಲಾಟ ಆಳುವ.ಬೆಸ್ಕಾಂ. ಅಧಿಕಾರಿಗಳ. ವಿರುದ್ಧ ಧ್ವನಿ ಇಲ್ಲದ ಜನಪ್ರತಿನಿದಿಗಳ. ವಿರುದ್ದ .ಅಸಮಾಧಾನ ವ್ಯಕ್ತಪಡಿಸಿದರು. ಸಮರ್ಪಕವಾದ ವಿದ್ಯುತ್ ನೀಡದೆ ರೈತರ ಬೆಳೆ ನಾಶವಾದರೆ ಬೆಸ್ಕಾಂ ಅಧಿಕಾರಿಗಳ ಆಸ್ತಿ ಹರಾಜು ಹಾಕಿ ರೈತರ ಬೆಳೆ ಪರಿಹಾರ ನಷ್ಟ ತುಂಬಿಕೊಳ್ಳುವ ಕಾನೂನು ಜಾರಿಯಾಗಬೇಕೆಂದು ಸರ್ಕಾರಕ್ಕೆ ಆಗ್ರಹ ಮಾಡಿದರು.

ಬೇಸಿಗೆ ಆರಂಭಕ್ಕೂ ಮುನ್ನವೇ ಲೋಡ್ ಶೆಡ್ಡಿಂಗ್ ಹಾಗೂ ಕಲ್ಲಿದ್ದಲು ನೆಪದಲ್ಲಿ ಗ್ರಾಮೀಣ ಪ್ರದೇಶದ ರೈತರಿಗೆ ಕೊಡುವ ವಿದ್ಯುತ್ ಅಲ್ಲಿ ಮಾತ್ರ ವ್ಯತ್ಯಯವಾಗುತ್ತದೆ. ಕೈಗಾರಿಕೆಗಳಿಗೆ ಶ್ರೀಮಂತರ ಐಶಾರಾಮಿ ಜೀವನಕ್ಕೆ ವಿದ್ಯುತ್ ಕೊರತೆ ಉಂಟಾಗುವುದಿಲ್ಲ ಎಂದು ಬೆಸ್ಕಾಂ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಪ್ರಗತಿಪರ ರೈತ ಪದ್ಮಘಟ್ಟ ಧರ್ಮನಾಥ ಮಾತನಾಡಿ, ಪ್ರತಿ ವರ್ಷ ಬೇಸಿಗೆಯಲ್ಲಿ ಸಮರ್ಪಕವಾದ ವಿದ್ಯುತ್ ನೀಡದೆ ರೈತರ ವಿದ್ಯುತ್ ಕಡಿತ ಮಾಡುವುದರಿಂದ ಬೆಸ್ಕಾಂ ಅಧಿಕಾರಿಗಳಿಗೆ ಸರ್ಕಾರ ಚಿನ್ನದ ಪದಕ ಕೊಡುತ್ತಾರೆಯೇ? ರೈತರು ಬೆಳೆದ ಅನ್ನ ತಿಂದು ಅನ್ನದ ಋಣ ತೀರಿಸದೆ ರೈತ ವಿರೋಧಿ ಧೋರಣೆ ಬೆಸ್ಕಾಂ ಅಧಿಕಾರಿಗಳು ಅನುಸರಿಸುತ್ತಿದ್ದಾರೆ ಎಂದು ಅಸಮಧಾನ ವ್ಯಕ್ತಪಡಿಸಿದರು.

ಬೆಸ್ಕಾಂ ಅಧಿಕಾರಿಗಳ ಬೇಜವಾಬ್ದಾರಿಯಿಂದ 1 ಎಕರೆ ಬೆಳೆಗೆ ನೀರು ಹಾಯಿಸಬೇಕಾದರೆ ಕನಿಷ್ಠ ಪಕ್ಷ 3 ದಿನ ಕೊಳವೆಬಾವಿಗಳ ಹತ್ತಿರ ಠಿಕಾಣಿ ಹೂಡಿ ರಾತ್ರಿ ಹಗಲು ಶ್ರಮ ಪಡಬೇಕಾದ ಪರಿಸ್ಥಿತಿಯ ಜೊತೆಗೆ ಲಕ್ಷಾಂತರರೂಪಾಯಿ ಬಂಡವಾಳ ಹಾಕಿ ಬೆಳೆದ ಬೆಳೆ ಒಂದೇ ದಿನದಲ್ಲಿ ಬೆಸ್ಕಾಂ ಅಧಿಕಾರಿಗಳ ರೈತ ವಿರೋಧಿ ನೀತಿಗೆ ನಾಶವಾಗುತ್ತಿದೆ.


ಅಷ್ಟರ ಮಟ್ಟಿಗೆ ವಿದ್ಯುತ್ ಸಮಸ್ಯೆ ಹೆಚ್ಚಾಗಿದ್ದರೂ ಸ್ಥಳೀಯ ಜನ ಪ್ರತಿನಿಧಿಗಳು ಚಕಾರವೆತ್ತುತ್ತಿಲ್ಲ ಎಂದು ಅವ್ಯವಸ್ಥೆ ಬಗ್ಗೆ ಆಕ್ರೋಶ ವ್ಯಕ್ತಪಡಿಸಿದರು.

24 ಗಂಟೆಯಲ್ಲಿ ಗುಣಮಟ್ಟದ 10 ತಾಸು ವಿದ್ಯುತ್ ನೀಡುವ ಜೊತೆಗೆ ಟಿಸಿ ಸುಟ್ಟರೆ ಲಂಚವಿಲ್ಲದೆ 12 ತಾಸುಗಳಲ್ಲಿ ಸರಿಪಡಿಸುವಂತೆ.

ಮಾ.10.ರ.ಸೋಮವಾರ ಜಾನುವಾರುಗಳು ಮತ್ತು ಬೆಳೆ ಸಮೇತ ರಾಜ್ಯ ಹೆದ್ದಾರಿ ವಡ್ಡಹಳ್ಳಿ. ಸರ್ಕಲ್ ಬಂದ್ ಮಾಡುವ ತಿಮಾನ. ಕೈ ಗೊಳ್ಳಲಾಯಿತು ಎಂದರು.

ಸಭೆಯಲ್ಲಿ.ರೈತಸಂಘದ ರಾಜ್ಯ ಉಪಾಧ್ಯಕ್ಷ ಕೆ.ನಾರಾಯಣಗೌಡ, ರಾಜೇಶ,ಭಾಸ್ಕರ, ಶ್ರೀನಿವಾಸ, ಜುಬೇರ ಪಾಷ, ಪಾರುಖಾ, ಪಾಷ, ಸುನೀಲ, ಕುಮಾರ, ಬಂಗಾರಿ, ಮಂಜು ಜಿಲ್ಲಾಧ್ಯಕ್ಷ ಮಂಜುನಾಥ, ಕಾರ್ಯಾಧ್ಯಕ್ಷ ಹೆಬ್ಬಣಿ ಆನಂದರೆಡ್ಡಿ, ಅಂಬ್ಲಿಕಲ್ ಮಂಜುನಾಥ್, ಯಾರಂಗಟ್ಟೆ ಗೀರೀಶ್, ನಂಗಲಿ ನಾಗೇಶ್, , ವೇಣು, ಕೇಶವ,. ಮುಂತಾದವರಿದ್ದರು.

# ಶ್ರೀ ರಾಘವೇಂದ್ರತೀರ್ಥ ಗುರುಸಾರ್ವಭೌಮರ 430ನೇ ಜನ್ಮದಿನೋತ್ಸವ "ಲಕ್ಷ ಪುಷ್ಪಾರ್ಚನೆ"



**ಬೆಂಗಳೂರು:** ಜಯನಗರ 5ನೇ ಬಡಾವಣೆಯಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶದಂತೆ ಶ್ರೀಮಠದ ಹಿರಿಯ ವ್ಯವಸ್ಥಾಪಕರಾದ ಶ್ರೀ ಆರ್. ಕೆ. ವಾದೀಂದ್ರಾಚಾರ್ಯರ ನೇತೃತ್ವದಲ್ಲಿ ಶ್ರೀ ರಾಘವೇಂದ್ರ ಸ್ವಾಮಿಗಳವರ ವರ್ಧಂತಿ ಉತ್ಸವದ (ಜನ್ಮದಿನೋತ್ಸವ) ಅಂಗವಾಗಿ ಶ್ರೀ ಗುರುರಾಯರ ಬೃಂದಾವನಕ್ಕೆ ಫಲ ಪಂಚಾಮೃತ ಅಭಿಷೇಕ ಮತ್ತು ವಿಶೇಷವಾಗಿ "ಲಕ್ಷ ಪುಷ್ಪಾರ್ಚನೆ"ಯನ್ನು ಅಷ್ಟೋತ್ತರ ಸಹಿತ ಪಾರಾಯಣದೊಂದಿಗೆ, ಮಠದ ಧರ್ಮಾಧಿಕಾರಿಗಳಾದ ಶ್ರೀ ಕೃಷ್ಣ ಗುಂಡಾಚಾರ್ಯರು ಮತ್ತು ಅರ್ಚಕರಾದ ರಾಮಚಂದ್ರಾಚಾರ್ಯ, ಕೃಷ್ಣಾಚಾರ್ಯ ವೃಂದದಿಂದ "ಪುಷ್ಪಾರ್ಚನೆ" ನೆರವೇರಿತು ಎಂದು ಶ್ರೀಮಠದ ಪುರೋಹಿತರಾದ ಶ್ರೀ ನಂದಕಿಶೋರಾಚಾರ್ಯರು ತಿಳಿಸಿದರು.

ತದನಂತರ ಡಾ॥ವೆಂಕಟನರಸಿಂಹಾಚಾರ್ಯರಿಂದ "ಶ್ರೀ ರಾಘವೇಂದ್ರ ವಿಜಯ" ಪ್ರವಚನದ ಮಂಗಳ ಕಾರ್ಯಕ್ರಮದೊಂದಿಗೆ ಸ್ವರ್ಣ ಸಿಂಹಾಸನದಲ್ಲಿ ಶ್ರೀ ಪ್ರಹ್ಲಾದರಾಜರ ಮೂರ್ತಿಯನ್ನು ಇರಿಸಿ ಶ್ರೀಮಠದಿಂದ ಗುರು ಪಾದಪೂಜೆ, ಕನಕಾಭಿಷೇಕ ಮತ್ತು ಮಹಾಮಂಗಳಾರತಿಯೊಂದಿಗೆ ಕಾರ್ಯಕ್ರಮವು ನೆರವೇರಿತು. ಸೇವಾ ಕರ್ತೃಗಳಿಗೆ ಮತ್ತು ಭಕ್ತರಿಗೆ ಸಂಕಲ್ಪವನ್ನು ಮಾಡಿಸಿ ಶೇಷವಸ್ತ್ರ ಶ್ರೀ ಗುರು ರಾಯರ ಪಾದುಕೆ, ಫಲ ಮಂತ್ರಾಕ್ಷತೆ ಪ್ರಸಾದ ರೂಪವಾಗಿ ಕೊಡಲಾಯಿತು.

ಇದೇ ಸಂದರ್ಭದಲ್ಲಿ ರಾಯರ ಸನ್ನಿಧಿಗೆ ಆಗಮಿಸಿದ ಸುಮಾರು 20,000ಕ್ಕೂ ಮಿಗಿಲಾಗಿ ಭಕ್ತರಿಗೆ ವಿಶೇಷವಾಗಿ ಅನ್ನಸಂತರ್ಪಣೆಯ ಪ್ರಸಾದ ಕಾರ್ಯಕ್ರಮವು ಸ್ವಯಂಸೇವಕರ ಮತ್ತು ಸಿಬ್ಬಂದಿಗಳ ಸಹಕಾರದಿಂದ ಅಚ್ಚುಕಟ್ಟಾದ ವ್ಯವಸ್ಥೆಯೊಂದಿಗೆ ನೆರವೇರಿತು. ಸೇವಾ ಕರ್ತೃಗಳು, ಭಕ್ತರು, ಗಣ್ಯರು, ತೀರ್ಥ ಪ್ರಸಾದ ಫಲ ಮಂತ್ರಾಕ್ಷತೆಯನ್ನು ಸ್ವೀಕರಿಸಿ ಶ್ರೀಗುರು ರಾಘವೇಂದ್ರ ಸ್ವಾಮಿಗಳ ಅನುಗ್ರಹಕ್ಕೆ ಪಾತ್ರರಾದರು.

# ರೈತರ ವಿರುದ್ಧ ಕಠಿಣ ಕ್ರಮ: ತಹಶೀಲ್ದಾರ್



ಶಿಡ್ಲಘಟ್ಟ : ಅಕ್ರಮವಾಗಿ ಹೆಚ್.ಎನ್.ವ್ಯಾಲಿ ನೀರನ್ನು ತೋಟಗಳಿಗೆ ಹರಿಸುತ್ತಿರುವ ರೈತರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು ಎಂದು ತಹಸೀಲ್ದಾರ್ ಬಿ.ಎನ್.ಸ್ವಾಮಿ ಎಚ್ಚರಿಕೆಯನ್ನು ನೀಡಿದರು.

ತಾಲ್ಲೂಕಿನ ಅಬ್ಲೂಡು ಹಾಗೂ ಗುಡಿಹಳ್ಳಿ ಬಳಿಯ ಸರ್ಕಾರಿ ಕೆರೆ ಬಳಿ ಕೆಲವರು ಅನಧಿಕೃತವಾಗಿ ವಿದ್ಯುತ್ ಸಂಪರ್ಕದೊಂದಿಗೆ ಮೋಟರ್ ಅಳವಡಿಸಿ ಕೆರೆ ನೀರನ್ನು ತೋಟಕ್ಕೆ ಹರಿಸಿಕೊಳ್ಳುತ್ತಿದ್ದಾರೆ ಎಂಬ ಮಾಹಿತಿ ಮೇರೆಗೆ ಬೆಸ್ಕಾಂ ಹಾಗೂ ಪೊಲೀಸ್ ಸಿಬ್ಬಂದಿ ಜತೆ ದಾಳಿ ನಡೆಸಿ ಮೋಟಾರ್ ಪಂಪು ಹಾಗು ಕೇಬಲ್ ವೈರ್ ವಶಪಡಿಸಿಕೊಂಡು ಅವರು ಮಾತನಾಡಿದರು.

ಬಯಲು ಸೀಮೆ ಭಾಗದ ಕೆರೆಗಳಿಗೆ ನೀರು ಹರಿಸುವ ಮೂಲಕ ಈ ಭಾಗದಲ್ಲಿ ಅಂತರ್ಜಲ ಹೆಚ್ಚಿಸುವ ಉದ್ದೇಶದಿಂದ ಜಾರಿಗೊಳಿಸಿರುವ ಎಚ್.ಎನ್. ವ್ಯಾಲಿ ನೀರನ್ನು ಅನುಮತಿಯಿಲ್ಲದೆ ಬಳಸುವುದು, ಅನಧಿಕೃತವಾಗಿ ವಿದ್ಯುತ್ ಸಂಪರ್ಕ ಪಡೆದು, ರಾತ್ರಿ ವೇಳೆ ನೀರು ಹರಿಸುವುದು ಅಪರಾಧ ಹಾಗೂ ಅಪಾಯಕ್ಕೆ ಕಾರಣವಾಗುತ್ತದೆ ಇದರಿಂದ ಪ್ರಾಣಹಾನಿ ಸಂಭವಿಸುವ ಸಾಧ್ಯತೆಗಳು ಇವೆ ,ಹಾಗಾಗಿ ಇಂತಹ ದುಸ್ಸಾಹಸಕ್ಕೆ ಕೈಹಾಕಬಾರದುಎಂದರು.

ಕೆರೆಗಳಿಗೆ ನೀರು ಬಂದರೆ ಈ ಭಾಗದ ಎಲ್ಲ ರೈತರಿಗೂ ಅನುಕೂಲವಾಗುತ್ತದೆ ಎಂಬುದನ್ನು ಅರಿಯಬೇಕು ಜಪ್ತಿ ಮಾಡಿದ ಮೋಟಾರ್, ಪಂಪು, ಕೇಬಲ್ ವೈರ್‌ನ್ನು ಗ್ರಾಮಾಂತರ ಪೋಲಿಸ್ ಠಾಣೆಯ ವಶಕ್ಕೆ ನೀಡಿದ್ದು ಮುಂದಿನ ಕ್ರಮಕ್ಕಾಗಿ ಸಣ್ಣ ನೀರಾವರಿ ಇಲಾಖೆಗೆ ನೀಡಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರಾಮಾಂತರ ಠಾಣೆಯ ಅಪರಾದ ವಿಭಾಗದ ಸಬ್ ಇನ್‌ಸ್ಪೆಕ್ಟರ್ ನಾಗರಾಜ್, ಬೆಸ್ಕಾಂ ಸಹಾಯಕ ಇಂಜಿನಿಯರ್ ಕಿರಣ್, ಕಂದಾಯ ಇಲಾಖೆ ರಾಜಸ್ವ ನಿರೀಕ್ಷಕ ವೇಣುಗೋಪಾಲ್,ಗ್ರಾಮ ಲೆಕ್ಕಿಗ ಮುನಿರಾಜು ಸೇರಿ ಬೆಸ್ಕಾಂ ಸಿಬ್ಬಂದಿ ಮುಂತಾದವರು ಹಾಜರಿದ್ದರು.

# ಬಹಿರಂಗ ಹರಾಜು ಮೂಲಕ ಅಕ್ಕಿ ವಿಲೇವಾರಿ

**ಶಿಡ್ಲಘಟ್ಟ:** ತಾಲ್ಲೂಕಿನಲ್ಲಿ ವಿವಿಧ ಪ್ರಕರಣಗಳಲ್ಲಿ ವಶಪಡಿಸಿಕೊಂಡಿರುವ 36.05 ಕ್ವಿಂಟಾಲ್ ಅಕ್ಕಿಯನ್ನು ಜಿಲ್ಲಾಧಿಕಾರಿಗಳ ಆದೇಶದಂತೆ ಚಿಕ್ಕಬಳ್ಳಾಪುರದ ವರದಹಳ್ಳಿ ಕೆಎಫ್‌ಸಿಎಸ್‌ಪಿ ಸಗಟು ಮಳಿಗೆಯಲ್ಲಿ ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲಾಗುವುದೆಂದು ತಹಶೀಲ್ದಾರ್ ಬಿ.ಎನ್.ಸ್ವಾಮಿ ಅವರು ತಿಳಿಸಿದ್ದಾರೆ.



ತಾಲ್ಲೂಕಿನಲ್ಲಿ ಅಕ್ರಮವಾಗಿ ಸಾಗಾಣಿಕೆ ಮಾಡುತ್ತಿದ್ದ ಅಕ್ಕಿಯನ್ನು ನಗರದ ಮಯೂರ ಸರ್ಕಲ್, ನಲ್ಲಿಮರದಹಳ್ಳಿ ಮತ್ತು ನಗರದ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ರಸ್ತೆಯಲ್ಲಿ ಪಕ್ಕದಲ್ಲಿ ಸಾಗಾಣಿಕೆ ಮಾಡುತ್ತಿದ್ದ ವೇಳೆಯಲ್ಲಿ ಸ್ಥಳೀಯರ ಮಾಹಿತಿಯನ್ನು ಆಧರಿಸಿ ಆಹಾರ ಇಲಾಖೆಯ ಅಧಿಕಾರಿಗಳು ಮತ್ತು ನಗರ ಪೊಲೀಸರು ಕಾರ್ಯಚರಣೆ ನಡೆಸಿ ಅಕ್ರಮವಾಗಿ ಸಾಗಾಣಿಕೆ ಮಾಡುತ್ತಿದ್ದ ಅಕ್ಕಿಯನ್ನು ವಶಪಡಿಸಿಕೊಂಡು ಮುಂದಿನ ಕ್ರಮ ಕೈಗೊಂಡಿರುತ್ತಾರೆ.

ವಶಪಡಿಸಿಕೊಂಡಿರುವ ಅಕ್ಕಿಯನ್ನು ಚಿಕ್ಕಬಳ್ಳಾಪುರದ ವರದಹಳ್ಳಿ ಕೆಎಫ್‌ಸಿಎಸ್‌ಪಿ ಸಗಟು ಮಳಿಗೆಯಲ್ಲಿ ದಾಸ್ತಾನು ಮಾಡಲಾಗಿದ್ದು ಅದನ್ನು ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳಲಾಗಿದ್ದು, ಆಸಕ್ತರು ಮಾ.03 ರಿಂದ 10 ವರೆಗೆ ಅರ್ಜಿಗಳನ್ನು ಸ್ವೀಕರಿಸಿ ಅದನ್ನು ಭರ್ತಿ ಮಾಡಿ ಸಂಬಂಧಿಸಿದ ದಾಖಲೆಗಳೊಂದಿಗೆ ತಹಶೀಲ್ದಾರ್ ಕಛೇರಿ ಅಥವಾ ತಾಲ್ಲೂಕಿನ ಆಹಾರ ಶಾಖೆಗೆ ಮಾ.15 ರೊಳಗೆ ಸಲ್ಲಿಸಬಹುದಾಗಿದೆ.

ಮಾ.17ರಂದು ಮಧ್ಯಾಹ್ನ 12 ಗಂಟೆಗೆ ಚಿಕ್ಕ ಬಳ್ಳಾಪುರದ ವರದಹಳ್ಳಿ ಕೆಎಫ್‌ಸಿಎಸ್‌ಪಿ ಸಗಟು ಮಳಿಗೆಯಲ್ಲಿ 36.05 ಕ್ವಿಂಟಾಲ್ ಅಕ್ಕಿಯನ್ನು ಬಹಿರಂಗ ಹರಾಜು ಮಾಡಲಾಗುವುದೆಂದು ತಹಶೀಲ್ದಾರ್ ಬಿ.ಎನ್.ಸ್ವಾಮಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ದ್ರಾಕ್ಷಿತೋಟಕ್ಕೆ ಬೆಂಕಿ ಲಕ್ಷಾಂತರ ರೂ ಬೆಳೆ ನಷ್ಟ



**ದೇವನಹಳ್ಳಿ:** ಕೋರಮಂಗಲ ಗ್ರಾಮದರೈತ ಮುನಿರಾಜಪ್ಪ ಅವರಿಗೆ ಸೇರಿದ್ದ ಶರತ್‌ದ್ರಾಕ್ಷಿ ಬೆಳೆಯ ಪಕ್ಕದಲ್ಲಿನ ಬಯಲಿನಲ್ಲಿ ಬೆಳೆದಿದ್ದ ಗಿಡಗಂಟಿಗಳಿಗೆ ಕಿಡಿಗೇಡಿಗಳು ಬೆಂಕಿ ಹಚ್ಚಿರುವ ಪರಿಣಾಮಕಟಾವಿಗೆ ಬಂದಿದ್ದದ್ರಾಕ್ಷಿ ಗಿಡಗಳು ಹಾಗೂ ದ್ರಾಕ್ಷಿ ಗೊಂಚಲುಗಳು ಸುಟ್ಟು ಹೋಗಿ ಲಕ್ಷಾಂತರರೂಪಾಯಿ ನಷ್ಟವಾಗಿದೆ ಎಂದು ರೈತ ಮುನಿರಾಜಪ್ಪ ಹೇಳಿದ್ದಾರೆ.

ಈ ವೇಳೆ ಮಾತನಾಡಿದರೈತ ಮುನಿರಾಜಪ್ಪಅವರು, ಆವತಿಯ ಕೆನರಾ ಬ್ಯಾಂಕಿನಲ್ಲಿ 5 ಲಕ್ಷ ಸಾಲ ಮಾಡಿಕೊಂಡು ಬಂದುದ್ರಾಕ್ಷಿ ತೋಟಕ್ಕೆ ಬಂಡವಾಳ ಹೂಡಿಕೆ ಮಾಡಿದ್ದು, ಈಗ ಬೆಳೆ ಚೆನ್ನಾಗಿ ಬಂದಿತ್ತು,ಬೆಳೆಯು ಕಲರ್ ಬರುತ್ತಿದ್ದು, 20 ದಿನಗಳಲ್ಲಿ ಕಟಾವು ಮಾಡಬೇಕಾಗಿತ್ತು, ಬುಧವಾರ ಸಂಜೆ ನಮ್ಮತೋಟದ ಪಕ್ಕದಲ್ಲಿರುವ ಬಯಲಿನಲ್ಲಿ ಬೆಳೆದಿದ್ದ ಗಿಡಗಂಟಿಗಳಿಗೆ ಯಾರೋ ಕಿಡಿಗೇಡಿಗಳು ಬೆಂಕಿ ಹಚ್ಚಿರುವ ಪರಿಣಾಮವಾಗಿ ಸುಮಾರು 400 ಗಿಡಗಳಷ್ಟು ಸುಟ್ಟುಹೋಗಿವೆ, ಈ ಗಿಡಗಳಲ್ಲಿ ಬೆಳೆದಿದ್ದ ದ್ರಾಕ್ಷಿ ಗೊಂಚಲುಗಳೂ ಸುಟ್ಟುಹೋಗಿವೆ, ಇದರಿಂದ 5 ಲಕ್ಷಕ್ಕೂ ಹೆಚ್ಚು ನಷ್ಟವಾಗಿದೆಎಂದು ಹೇಳಿದರು, ರೈತರವಿ ಕುಮಾರ್ ಮಾತನಾಡಿ, ನಮಗೆ ಇರುವುದು ಇದೊಂದೇತೋಟ, ಇದರಲ್ಲಿ ಬೆಳೆದುಕೊಂಡು ಜೀವನ ಮಾಡುತ್ತಿದ್ದೇವೆ, ರೇಷ್ಮೆ ಹುಳು ಸಾಕಾಣಿಕೆ ಮಾಡುತ್ತಿದ್ದೇವು,ಆದರೆ, ಬಿಸಿಲಿನ ತಾಪಮಾನ ಜಾಸ್ತಿಯಾಗಿರುವ ಕಾರಣ, ಈಗ ಹುಳು ಸಾಕಾಣಿಕೆ ಮಾಡುವುದ ಕಷ್ಟವಾಗುತ್ತಿದೆ,ದ್ರಾಕ್ಷಿ ಬೆಳೆಯನ್ನೆ ನಂಬಿಕೊಂಡು ಬೇಸಾಯ, ಔಷಧಿಗಳಿಗೆ ಬಂಡವಾಳ ಹೂಡಿಕೆ ಮಾಡಿದ್ದೇವೆ, ಈಗ ಸಾಲಗಳು ತೀರಿಸುವುದು ಹೇಗೆ? ಸುಟ್ಟು ಹೋಗಿರುವ ಗಿಡಗಳನ್ನು ಉಳಿಸಿಕೊಳ್ಳುವುದು ಹೇಗೆ ಎನ್ನುವ ಆತಂಕಕಾಡುತ್ತಿದೆ,ಸರ್ಕಾರದಿಂದ ನಮಗೆ ಏನಾದರೂ ಪರಿಹಾರ ದೊರಕಿಸಿಕೊಟ್ಟರೆ, ಈ ಸಮಯದಲ್ಲಿ ನಮಗೆ ತುಂಬಾ ಅನುಕೂಲವಾಗುತ್ತದೆಎಂದು ಮನವಿ ಮಾಡಿದರು, ರೈತಒಂದು ಗಿಡ ನಾಟಿ ಮಾಡಿಅದರಲ್ಲಿ ಫಲ ಕಾಣುವಷ್ಟರಲ್ಲಿ ಒಂದುಗಿಡಕ್ಕೆ 25–30 ಸಾವಿರಖರ್ಚು ಬರುತ್ತದೆ, 1500 ಅಡಿಗಳ ಆಳದಿಂದ ನೀರು ಹೊರತೆಗೆದು ಬೆಳೆ ಬೆಳೆಯುವುದು ಸುಲಭದ ಕೆಲಸವಲ್ಲ, ಸರ್ಕಾರ, ಪ್ರಾಕೃತಿಕ ವಿಕೋಪಗಳಾದಾಗ ಮಾತ್ರ ಪರಿಹಾರಕೊಡುತ್ತದೆ, ರೈತರಿಗೆತಮ್ಮದಲ್ಲದತಪ್ಪಿನಿಂದಾಗಿ ಈ ರೀತಿಯಾಗಿ ಬೆಳೆ ನಷ್ಟ ಮಾಡಿಕೊಂಡಾಗ ರೈತರ ನೆರವಿಗೆ ಧಾವಿಸಬೇಕು ಎಂದುರೈತ ಬೈರಾಪುರಕೊಂಡಪ್ಪ ಒತ್ತಾಯಿಸಿದರು.

# ಸಂವಿಧಾನದ ಕಾನೂನು ಕಾಯ್ದೆಗಳು ಅನುಷ್ಠಾನ ಸಫಲತೆಯಾಗಬೇಕು

**ಹನೂರು:** ಸಂವಿಧಾನದ ಕಾನೂನು ಕಾಯ್ದೆಗಳು ಅನುಷ್ಠಾನ ಸಫಲತೆಯಾಗಬೇಕು, ಈ ನಿಟ್ಟಿನಲ್ಲಿ ಗ್ರಾಮೀಣ ಮಟ್ಟಕ್ಕೂ ಕಾನೂನು ಕಾಯ್ದೆ, ಜಾಗೃತಿ ಮೂಡಿಸಬೇಕು, ಕಾನೂನು ಕಾಯ್ದೆಗಳ ಬಗ್ಗೆ ಪ್ರತಿಯೊಬ್ಬರು ತಿಳಿದುಕೊಂಡು ಜಾಗೃತರಾಗಬೇಕು ಎಂದು ಕೊಳ್ಳೇಗಾಲ ತಾಲೂಕು ಉಪ ವಿಭಾಗಾಧಿಕಾರಿ ಮಹೇಶ್ ಅವರು ತಿಳಿಸಿದ್ದಾರೆ.



ಹನೂರು ಪಟ್ಟಣದ ಡಾ,ಬಿಅರ್ ಅಂಬೇಡ್ಕರ್ ಸಮುದಾಯ ಭವನದಲ್ಲಿ ಸಂವಿಧಾನ ಅಮೃತ ಮಹೋತ್ಸವ–75 ಅಂಗವಾಗಿ ಕರ್ನಾಟಕ ಸರ್ಕಾರ ಸಂವಿಧಾನ ಅಮೃತ ಮಹೋತ್ಸವ–75 ಅಂಗವಾಗಿ ತಾಲೂಕು ಆಡಳಿತ, ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ವಿಚಾರ ಸಂಕಿರ್ಣ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು,

ಪೂರ್ವ ಹಾಗೂ ಬಳಿಕವು ಶೋಷಿತ ವರ್ಗಗಳ ಜನರ ಮೇಲೆ ದೌರ್ಜನ್ಯ, ನಿಂದನೆ ಪ್ರಕರಣಗಳು ಕಂಡು ಬರುತ್ತಿದ್ದು, ಕಾನೂನು ನಿಯಮ ಉಲ್ಲಂಘನೆಯಾಗಲಿದೆ, ರಾಜ್ಯದಲ್ಲಿ ಪರಿಶಿಷ್ಟ ಜಾತಿ 57ಸಾವಿರ, ಪರಿಶಿಷ್ಟ ಪಂಗಡದವರ ಮೇಲೆ 10 ಸಾವಿರ ದೌರ್ಜನ್ಯ ಪ್ರಕಟಣಗಳು ಕಂಡು ಬಂದಿದ್ದು, ದೌರ್ಜನ್ಯ ಕುರಿ ತು ಪರಿಶೀಲನೆ ನಡೆಸಲಾಗುತ್ತಿದೆ.

ಕಾನೂನು ರಕ್ಷಣೆ, ಪರಿಹಾರ, ವಿಶೇಷ ನ್ಯಾಯಾಲಯ ವ್ಯವಸ್ಥೆ, ಸಮಿತಿಗಳ ನೇಮಕವಾಗಿದೆ, ಸಾಮಾಜಿಕ, ವೈಯಕ್ತಿಕ, ನಿಂದನೆ, ಸಾರ್ವಜನಿಕ ವಲಯಕ್ಕೆ ನಿರ್ಬಂಧ, ನಾಗ–ರೀಕ ಹಕ್ಕು ಕಸಿಯುವುದು, ಲೈಂಗಿಕ ಇನ್ನಿತರ ಪ್ರಕರಣಗಳು ಸಮಾಜಕ್ಕೆ ಮಾರಕವಾಗಿದೆ, ರಾಜ್ಯದಲ್ಲಿ 2014ರಲ್ಲಿ ನಡೆದ ದೀನದಲಿತರ ಮೇಲೆ ದೌರ್ಜನ್ಯ ಘಟನೆ ಪ್ರಕರಣದಲ್ಲಿ ಇದೀಗ ನೂರು ಮಂದಿಗೆ ಶಿಕ್ಷೆಯಾಗಿದೆ ಇದು ದೇಶದಲ್ಲೇ ಸಂವಿಧಾನದ ಅಡಿಯಲ್ಲಿ ಕಾನೂನು ನಿಯಮವನ್ನು ಎತ್ತಿ ಹಿಡಿದಿದೆ ಎಂದು ತಿಳಿಸಿದರು.

ಕೊಳ್ಳೇಗಾಲ ತಾಲೂಕು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಕೇಶವ ಮೂರ್ತಿ ಅವರು ಮಾತನಾಡಿ ಸಂವಿಧಾನ ಹಕ್ಕು, ಅಧಿಕಾರ, ಕಾಯ್ದೆಗಳು, ಕಾನೂನು ಮಾಹಿತಿ ಒದಗಿಸಲಾಗುತ್ತಿದ್ದು ಜನರಿಗೆ ನೆರವು, ಅರಿವು ಉದ್ದೇಶ ಹೊಂದಿದೆ, ಹನೂರು ಭಾಗದಲ್ಲಿ ಎಸ್ಸಿ,ಎಸ್ಟಿ ಕಾಯ್ದೆಯಲ್ಲಿ ಈ ವರ್ಷ 13ಪ್ರಕರಣ ದಾಖಲಾಗಿದೆ, ಇಂತಹ ಪ್ರಕರಣ ಬೆಳಕಿಗೆ ಬಾರದೇ ಗ್ರಾಮ ಮಟ್ಟದಲ್ಲೇ ಮುಚ್ಚಿ ಹೋಗುವ ಕೆಲಸವಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಚೆನ್ನಾಲಿಂಗನಹಳ್ಳಿ ಜೇತವನ ಬೋಧಿ ಮನೋರಕ್ಕಿ ಬಂತೇಜಿ ಮಾತನಾಡಿ ಡಾ, ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಎಲ್ಲ ವರ್ಗದ ಜನರ ಏಳಿಗೆಗಾಗಿ ಅಮೂಲ್ಯವಾದ ಸಂವಿಧಾನವನ್ನು ನೀಡಿದ್ದಾರೆ ಶಿಕ್ಷಣಕ್ಕೆ ಹೆಚ್ಚಿನ ಮಹತ್ವವನ್ನು ನೀಡಿದಂತಹ ಮಹಾಪುರುಷ ಅವರು ಬ್ರಾಹ್ಮಣರಿಂದ ದಲಿತರು ಎಲ್ಲರಿಗೂ ಸಮಾನಕ್ಕೂ ಎಲ್ಲರಿಗೂ ನ್ಯಾಯವನ್ನು ಕೊಟ್ಟಂತವರು ಎಲ್ಲಾ ಸಮುದಾಯದ ಜನರನ್ನ ನಾವು ಪ್ರೀತಿ ವಿಶ್ವಾಸದಿಂದ ನೋಡಬೇಕು ನಮ್ಮಲ್ಲಿ ಮೇಲು ಕೀಳು ಎಂಬ ಭಾವನೆಯನ್ನು ತೆಗೆದು ಹಾಕಬೇಕು ನಾವೆಲ್ಲರೂ ಒಂದೇ ಎನ್ನುವ ಮನೋಭಾವದಿಂದ ಇರಬೇಕು ಎಂದು ಸಲಹೆ ನೀಡಿದರು.

ಸಂವಿಧಾನ ಅಮೃತ ಮಹೋತ್ಸವ–75 ಅಂಗವಾಗಿ ಕರ್ನಾಟಕ ಸರ್ಕಾರ ಹನೂರು ತಾಲೂಕು ಆಡಳಿತ, ತಾಲೂಕು ಪಂ, ಸಮಾಜ ಕಲ್ಯಾಣ ಇಲಾಖೆ ಮತ್ತು ಕರ್ನಾಟಕ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್ ವಾದ) ತಾಲೂಕು ಘಟಕ ಇವರ ಸಂಯುಕ್ತಾಶ್ರಯದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ (ದೌರ್ಜನ್ಯ ಪ್ರತಿಬಂಧ) ಅಧಿನಿಯಮ 1989 ಮತ್ತು ತಿದ್ದುಪಡಿ ಅಧಿನಿಯಮಗಳು ಹಾಗೂ ನಾಗರೀಕ ಹಕ್ಕು ಸಂರಕ್ಷಣಾ ಅಧಿನಿಯಮ ಕುರಿತಾದ ವಿಚಾರ ಸಂಕೀರಣ ಮತ್ತು ಕಾರ್ಯಾಗಾರ ನಡೆಯಿತು.

ಈ ಸಂದರ್ಭದಲ್ಲಿ ತಹಶೀಲ್ದಾರ್ ಗುರುಪ್ರಸಾದ್, ತಾಲೂಕು ಪಂ, ಇಓ ರಾಧಾ, ಪಟ್ಟಣ ಪಂ, ಅಧ್ಯಕ್ಷೆ ಮುಮ್ತಾಜ್ ಬಾನು, ಪಟ್ಟಣ ಪಂ, ಸದಸ್ಯ ಸಂಪತ್ ಕುಮಾರ್, ಶಿಕ್ಷಕ ಮಹಾದೇವ ಕುಮಾರ್, ಮಾರ್ಟಳ್ಳಿ ರಾಮಲಿಂಗಂ, ಡಿಎಸ್–ಎಸ್ ಮೈಸೂರ ವಿಭಾಗೀಯ ಸಂಚಾಲಕ ಸಿದ್ದರಾಜು, ಪದಾಧಿಕಾರಿಗಳಾದ ಮಹೇಶ್, ಮಾದೇಶ, ವೀರ, ನಾಗರಾಜು, ಮಾದೇಶ್ ಸೇರಿದಂತೆ ಇನ್ನಿತರರು ಹಾಜರಿದ್ದರು.

# ವಿಜೃಂಭಣೆಯ 'ಶ್ರೀ ರಾಮ ರಾವಣನ ಯುದ್ಧ'

**ಕೆ,ಆರ್,ಪೇಟೆ:** ಉತ್ತರ ಪ್ರದೇಶದ ರಾಮಜನ್ಮ ಸ್ಥಳ ಅಯೋಧ್ಯೆಯ ರಾಮಕಥಾ ಪಾರ್ಕ್‌ನಲ್ಲಿ ತಾಲ್ಲೂಕಿನ ಆನೆಗೋಳ ಗ್ರಾಮ ದೇವತೆ ಶ್ರೀ ಆನೆಗೋಳದಮ್ಮ ಹಾಗೂ ಶ್ರೀ ಆಂಜನೇಯ ಸ್ವಾಮಿ ಕೃಪಾ ಪೋಷಿತ ನಾಟಕ ಮಂಡಳಿ ವತಿಯಿಂದ ಸಂಪೂರ್ಣ ರಾಮಾಯಣ ಅಥವಾ ಶ್ರೀ ರಾಮ ರಾವಣನ ಯುದ್ಧ ಎಂಬ ಪೌರಾಣಿಕ ನಾಟಕವು ಬೋಳಮಾರನಹಳ್ಳಿ ಗ್ರಾಮದ ನಿವೃತ್ತ ಇಂಜಿನಿಯರ್ ಜಯಲಿಂಗೇಗೌಡ, ಬಿ.ಎಸ್, ಮಂಜುನಾಥ್ ನೇತೃತ್ವದಲ್ಲಿ ವಿಜೃಂಭಣೆಯಿಂದ ನಡೆಯಿತು.



ಅಯೋಧ್ಯೆಯಲ್ಲಿ ಪೌರಾಣಿಕ ನಾಟಕ ನೇತೃತ್ವ ವಹಿಸಿರುವ ರಾಮನ ಪಾತ್ರಧಾರಿ ಕಲಾವಿದ ನಿವೃತ್ತ ಇಂಜಿನಿಯರ್ ಜಯಲಿಂಗೇಗೌಡ ಮಾತನಾಡಿ ಸಾಂಸ್ಕೃತಿಕ, ಆಧ್ಯಾತಿಕತೆಯ ರಾಜಧಾನಿ ಎಂತಿರುವ ಉತ್ತರ ಪ್ರದೇಶದಲ್ಲಿ ಇದೀಗ ಅಯೋಧ್ಯೆಯೇ ದೇಶದ ಗಮನ ಸೆಳೆದು ಹಿಂದೂಗಳ ಆರಾಧ್ಯ ದೈವ, ಮಾರ್ಯದಾ ಪುರುಷೋತ್ತಮ ಶ್ರೀರಾಮನ ಜನಸ್ಥಳವಾದ ಅಯೋಧ್ಯೆಯಲ್ಲಿ ರಾಮಲಲ್ಲಾನ ಭವ್ಯ ಮಂದಿರ ಲೋಕಾರ್ಪಣೆಗೊಂಡು ಒಂದು ವರ್ಷ ಪೂರ್ಣಗೊಂಡಿದೆ ಇಂತಹ ಪವಿತ್ರ ಕ್ಷೇತ್ರಕ್ಕೆ ಹೋಗುವುದೇ ಸೌಭಾಗ್ಯ ಇಂತಹ ಸಂದರ್ಭದಲ್ಲಿ ನಮ್ಮ ಶ್ರೀ ಆನೆಗೋಳದಮ್ಮ ಹಾಗೂ ಶ್ರೀ ಆಂಜನೇಯ ಸ್ವಾಮಿ ಕೃಪಾ ಪೋಷಿತ ನಾಟಕ ಮಂಡಳಿ ವತಿಯಿಂದ ಸಂಪೂರ್ಣ ರಾಮಾಯಣ ಅಥವಾ ಶ್ರೀ ರಾಮ ರಾವಣನ ಯುದ್ಧ ಎಂಬ ಸುಂದರ ಪೌರಾಣಿಕ ನಾಟಕವನ್ನು ರಾಮನ ಜನ್ಮಸ್ಥಳದಲ್ಲೆ ನಾಟಕ ಪ್ರದರ್ಶಿಸಲು ನಮಗೆ ಅವಕಾಶ ಸಿಕ್ಕಿರುವುದು ನಮ್ಮ ಪೂರ್ವ ಜನ್ಮದ ಪುಣ್ಯ ಹಾಗೂ ಪೌರಾಣಿಕ ನಾಟಕ ಕಲಾವಿದರಿಗೆ ಸಂದ ಗೌರವ ಎಂದು ಹರ್ಷ ವ್ಯಕ್ತಪಡಿಸಿದ ಶಿವಲಿಂಗೇಗೌಡ ನಾವು ರಾಜ್ಯದಾದ್ಯಂತ ಹಲವು ಭಾಗಗಳಲ್ಲಿ ನಾಟಕಗಳನ್ನು ಪ್ರದರ್ಶನ ನೀಡಿದ್ದೇವೆ, ಜೊತೆಗೆ ನಮ್ಮ ಬೆನ್ನುಲುಬಾಗಿ ಕಲಾತಂಡದ ಸದಸ್ಯರು ಮತ್ತು ಕುಟುಂಬಸ್ಥರುಗಳು ಜೊತೆ ಆನೆಗೊಳ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಗ್ರಾಮಸ್ಥರು ನಮ್ಮ ಜೊತೆ ಅಯೋದ್ಯೆ ನಗರಕ್ಕೆ ರೈಲು, ವಿಮಾನಗಳಲ್ಲಿ ಸುಮಾರು 170 ಕಲಾಭಿಮಾನಿಗಳು ಬಂದು ನಮ್ಮ ನಾಟಕವನ್ನು ನೋಡುತ್ತಿರುವುದು ನಮ್ಮ ಪೂರ್ವ ಜನ್ಮದ ಪುಣ್ಯ ಎಂದು ತಿಳಿಸಿದರು,

ರಾವಣ ಪಾತ್ರಧಾರಿ ಹೆಚ್,ಎಸ್,ಎಸ್,ಕೆ, ಸಕ್ಕರೆ ಕಾರ್ಖಾನೆ ಮಾಜಿ ನಿರ್ದೇಶಕ ಬೋಳಮಾರನಹಳ್ಳಿ ಬಿ,ಎಸ್, ಮಂಜುನಾಥ್ ಮಾತನಾಡಿ ನಮ್ಮ ಕಲಾ ತಂಡವು ಆನೆಗೊಳ, ಬೋಳಮಾರನಹಳ್ಳಿ, ಮೈಸೂರಿನ ಕಲಾಭವನ, ಸುತ್ತೂರು, ಈಗೆ ರಾಜ್ಯದ ನಾನಾ ಭಾಗಗಳಲ್ಲಿ ಏಳು ಭಾರಿ ನಾಟಕವನ್ನು ಪ್ರದರ್ಶನ ಮಾಡಿದ್ದು, ಇದೇ ನಾಟವನ್ನು ರಾಮಜನ್ಮ ಭೂಮಿ ಅಯೋಧ್ಯೆಯಲ್ಲಿ ಪ್ರದರ್ಶನ ಮಾಡುತ್ತಿರುವುದು ಜೀವನದಲ್ಲಿ ಒಂದು ಸುಂದರ ಗಳಿಗೆ ಎಂದು ತಿಳಿಸಿದ ಮಂಜುನಾಥ್ ನಮ್ಮ ಮೇಲೆ ಅಪಾರ ಅಭಿಮಾನ ಇಟ್ಟು ತಮ್ಮ ಸ್ವಂತ ಖರ್ಚಿನಿಂದ ಅಯೋಧ್ಯೆಯ ವರೆಗೆ ನಾಟಕ ನೋಡಲು ಬಂದಿರುವ ಆನೆಗೊಳ ಗ್ರಾಮ ಪಂಚಾಯ್ತಿ ವ್ಯಾಪ್ತಿಯ ಗ್ರಾಮಸ್ಥರುಗಳಿಗೆ ನಾವು ಅಭಾರಿಯಾಗಿರುತ್ತೇವೆ, ಇದರಿಂದ ಮುಂದೆಯು ಇದೇ ರೀತಿ ಹಲವು ಪುಣ್ಯ ಕ್ಷೇತ್ರಗಳಲ್ಲಿ ನಾಟಕ ಪ್ರದರ್ಶನ ಮಾಡಲು ನಮಗೆ ಪ್ರೇರಣೆ ಸಿಕ್ಕಂತಾಗಿದೆ ಎಂದು ತಿಳಿಸಿದರು,

ಈ ಸಂದರ್ಭದಲ್ಲಿ ಸರ್ವೆಯರ್ ಆನೆಗೋಳ ಮಂಜುನಾಥ್, ಚನ್ನರಾಯಪಟ್ಟಣ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಹಡೇನಹಳ್ಳಿ ಲೋಕೇಶ್ ಡ್ರಾಮಾ ಮಾಸ್ಟರ್ ಪ್ರಜ್ವಲ್ ಜಗದೀಶ್, ದಶರಥ, ಸಂತೋಷ, ನಿಂಗರಾಜು, ಕೃಷ್ಣಮೂರ್ತಿ, ರಮೇಶ್, ಶ್ರೀನಿವಾಸ್, ಮೂರ್ತಿ, ಪುಟ್ಟರಾಜು, ಸೋಮಾಚಾರ, ಹರೀಶ್, ಚೈತ್ರ, ಶೋಭಾ, ಸೇರಿದಂತೆ ಕೆ,ಆರ್,ಪೇಟೆ ತಾಲ್ಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ, ವಕೀಲ ಅಪ್ಪನಹಳ್ಳಿ ಅರುಣ್, ಆನೆಗೊಳ ಸರ್ವೆ ಮಂಜುನಾಥ್, ಅಂಚೇಬೀರನಹಳ್ಳಿ ಮಂಜುನಾಥ್, ಶೀಳನೆರೆ ಮಂಜೇಗೌಡ, ಕಡಹೆಮ್ಮಿಗೆ ಮೀಸೆ ರಾಮೇಗೌಡ, ಶಿವಲಿಂಗೇಗೌಡ, ಲೋಕೇಶ್ ಹಡೇನಹಳ್ಳಿ, ವಿಮಾ ಸಲಹೆಗಾರ ದಯಾನಂದ ಶೆಟ್ಟಿಹಳ್ಳಿ, ಹೇಮಂತ್, ವೈದ್ಯ ನರ್ಸಿಂಗ್ ಅಂಡ್ ಪ್ಯಾರಾಮೆಡಿಕಲ್ ಶಾಲೆಯ ಪ್ರಾಂಶುಪಾಲ, ಅರುಣ್ ಕುಮಾರ್, ಸೇರಿದಂತೆ ಸುಮಾರು 170ಕ್ಕೂ ಹೆಚ್ಚಿನ ಕೆ,ಆರ್,ಪೇಟೆ ತಾಲ್ಲೂಕಿನ ಗ್ರಾಮಸ್ಥರು ಹಾಜರಿದ್ದು, ನಾಟಕವನ್ನು ವೀಕ್ಷಣೆ ಮಾಡಿದ್ದು, ವಿಶೇಷವಾಗಿತ್ತು,

# ಕಲಾವಿದರ ಮಾಸಾಶನ 2000 ರೂ.ಗಳಿಂದ 2500 ರೂ.ಗೆ ಹೆಚ್ಚಳ

**ಬೆಂಗಳೂರು:** ಕಲೆ, ಸಾಹಿತ್ಯ ಮತ್ತು ಸಾಂಸ್ಕೃತಿಕ ಕ್ಷೇತ್ರದಲ್ಲಿನ ಕಲಾವಿದರ ಮಾಸಾಶನವನ್ನು 2000 ರೂ.ಗಳಿಂದ 2500 ರೂ.ಗಳಿಗೆ ಹೆಚ್ಚಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ವಿಧಾನಸಭೆಯಲ್ಲಿ 2025-26ನೇ ಸಾಲಿನ ಆಯುವ್ಯಯ ಮಂಡಿಸಿದ ಅವರು, ಶಿಕ್ಷಣ ತಜ್ಞ, ಪದ್ಮಭೂಷಣ ಡಾ.ಎಚ್.ನರಸಿಂಹಯ್ಯ ಅವರ ಸ್ಮರಣಾರ್ಥವಾಗಿ ಡಾ.ಹೆಚ್.ನರಸಿಂಹಯ್ಯ ಪ್ರಾಧಿಕಾರವನ್ನು ಸ್ಥಾಪಿಸುವುದಾಗಿ ಘೋಷಿಸಿದರು. ನರಸಿಂಹಯ್ಯ ಅವರು ವ್ಯಾಸಂಗ ಮಾಡಿದ ಗೌರಿಬಿದನೂರಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯನ್ನು ಉನ್ನತೀಕರಿಸುವುದಾಗಿ ಹೇಳಿದರು.





ಅಂತಾರಾಷ್ಟ್ರೀಯ ಬಸವ ಆಧ್ಯಾತ್ಮಿಕ ಹಾಗೂ ವಚನ ಅಧ್ಯಯನ ಕೇಂದ್ರವನ್ನು ಬೆಂಗಳೂರಿನಲ್ಲಿ ಸ್ಥಾಪನೆ ಮಾಡಲು ತಾತ್ವಿಕ ಅನುಮೋದನೆ ನೀಡಿದ್ದು, ಈ ಬಗ್ಗೆ ತಜ್ಞರ ಸಮಿತಿಯನ್ನು ರಚಿಸಿ ವಿಸ್ತೃತ ವರದಿ ಪಡೆದು ಕ್ರಮ ಕೈಗೊಳ್ಳಲಾವುದು, ಬಾಗಲಕೋಟೆ ಜಿಲ್ಲೆಯ ಇತಿಹಾಸ ಪ್ರಸಿದ್ಧ ಮತ್ತು ಪಾರಂಪರಿಕ ತಾಣವಾದ ಬಾದಾಮಿಯ ಚಾಲುಕ್ಯ ಉತ್ಸವದಲ್ಲಿ ನೃತ್ಯೋತ್ಸವ ಕಾರ್ಯಕ್ರಮವನ್ನು ಎರಡು ಕೋಟಿ ರೂ. ವೆಚ್ಚದಲ್ಲಿ ಆಯೋಜಿಸಲಾಗುವುದು ಎಂದರು.

ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಬೋಳುವಾರು ಮೊಹಮ್ಮದ್ ಕುಂಞ ಅವರ ಸ್ವಾತಂತ್ರ್ಯದ ಓಟ ಕಾದಂಬರಿಯನ್ನು ಒಂದು ಕೋಟಿ ರೂ. ವೆಚ್ಚದಲ್ಲಿ ನಾಟಕ ರೂಪದಲ್ಲಿ ನಿರ್ಮಾಣ ಮಾಡಿ ರಾಜ್ಯಾದ್ಯಂತ ಪ್ರದರ್ಶಿಸಲಾಗುವುದು ಎಂದ ಅವರು, ಕನ್ನಡ ಭಾರತಿ ಎನ್ನುವ ಪುಸ್ತಕ ಪಾಲಿಕೆಯಡಿ ಬೇರೆ ಬೇರೆ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿದ ಶ್ರೇಷ್ಠ ಸಾಧಕರ ಜೀವನವನ್ನು ಪರಿಚಯಿಸುವ ಪುಸ್ತಕಗಳನ್ನು 50 ಲಕ್ಷ ರೂ. ಗಳಲ್ಲಿ ಪ್ರಕಟಿಸಲಾಗುವುದು ಎಂದು ತಿಳಿಸಿದರು.

ದಾವಣಗೆರೆಯ ಕೊಂಡಜ್ಜಿ ಬೆಟ್ಟದ ಪರಿಸರದಲ್ಲಿ ಸ್ಥಾಪಿಸಲಾಗಿರುವ ವೃತ್ತಿ ರಂಗಾಯಣದಲ್ಲಿ ಮೂರು ಕೋಟಿ ರೂ. ವೆಚ್ಚದಲ್ಲಿ ಮೂಲಭೂತ ಸೌಕರ್ಯ, ವೃತ್ತಿ ರಂಗಾಯಣ ಸಮುಚ್ಚಯ ಹಾಗೂ ಥಿಯೇಟರ್ ಮ್ಯೂಸಿಯಂ ನಿರ್ಮಾಣ ಮಾಡಲಾಗುವುದು ಎಂದು ಅವರು ಹೇಳಿದರು. ರಾಷ್ಟ್ರಕವಿ ಡಾ.ಜಿ.ಎಸ್. ಶಿವರುದ್ರಪ್ಪ ಟ್ರಸ್ಟ್‌ನ ಕಾರ್ಯಚಟುವಟಿಕೆಗಳನ್ನು ಕೈಗೊಳ್ಳಲು ಬೆಂಗಳೂರಿನಲ್ಲಿ ಸುಸಜ್ಜಿತ ಕಟ್ಟಡ ನಿರ್ಮಾಣ ಮಾಡಲು ಒಂದು ಕೋಟಿ ರೂ. ಅನುದಾನ ಒದಗಿಸಲಾಗುವುದು.

ಸೇವಾದಳ ಸಂಸ್ಥಾಪಕ ಹಾಗೂ ಸ್ವಾತಂತ್ರ್ಯ ಸೇನಾನಿ ಪದ್ಮಭೂಷಣ ಡಾ.ಎನ್.ಎಸ್. ಹರ್ಡೀಕರ್‌ರವರ ಸ್ಮಾರಕವನ್ನು ಬೆಳಗಾವಿ ಜಿಲ್ಲೆಯ ಘಟಪ್ರಭಾದ ಆರೋಗ್ಯ ಧಾಮದಲ್ಲಿ ನಿರ್ಮಿಸಲು ಎರಡು ಕೋಟಿ ರೂ.ಒದಗಿಸುವುದಾಗಿ ಮುಖ್ಯಮಂತ್ರಿ ಘೋಷಿಸಿದರು.

ಡಿಜಿಟಲೀಕರಣ: ಮೈಸೂರು ವಿಶ್ವವಿದ್ಯಾಲಯದ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯಲ್ಲಿರುವ 2,500 ಪ್ರಾಚೀನ ತಾಳೆಗರಿಯ ಹಸ್ತಪ್ರತಿಗಳ ಡಿಜಿಟಲೀಕರಣ ಯೋಜನೆಯನ್ನು ಒಂದು ಕೋಟಿ ರೂ. ವೆಚ್ಚದಲ್ಲಿ ಕೈಗೆತ್ತಿಕೊಳ್ಳಲಾಗುವುದು.

ಮತೀಯವಾದದಿಂದ ಪ್ರಭಾವಿತವಾಗುತ್ತಿರುವ ಇಂದಿನ ಯುವಜನತೆಗೆ ಸಾಮರಸ್ಯದಿಂದ ಬದುಕುವಂತೆ ಪ್ರೇರೇಪಿಸುವ ರಾಮ್ ಮನೋಹರ್ ಲೋಹಿಯಾ ಹಾಗೂ ಇತರ ಮಹನೀಯರ ಪುಸ್ತಕಗಳಲ್ಲಿನ ಸೌಹಾರ್ದತೆಯ ಅಂಶಗಳನ್ನು ಕ್ರೋಡೀಕರಿಸಿ ಕನ್ನಡ ಭಾಷೆಯಲ್ಲಿ ಪ್ರಕಟಿಸಲಾಗುವುದು. ಈ ಕುರಿತು ಕಮ್ಮಟ, ಕಾರ್ಯಾಗಾರಗಳನ್ನು ಏರ್ಪಡಿಸಲಾಗುವುದು ಎಂದು ಅವರು ಹೇಳಿದರು.

ಮೈಸೂರಿನ ರಂಗಾಯಣದ ಕಾರ್ಯ ಚಟುವಟಿಕೆಗಳಿಗೆ ಎರಡು ಕೋಟಿ ರೂ. ಅನುದಾನವನ್ನು ಒದಗಿಸಲಾಗುವುದು. ಸಂತ ಕವಿ ಕನಕದಾಸ ಮತ್ತು ತತ್ವಪದಕಾರರ ಅಧ್ಯಯನ ಕೇಂದ್ರಕ್ಕೆ ತತ್ವಪದ ಪಾರಿಭಾಷಿಕ ಪದಕೋಶದ ಸಿದ್ಧತೆ ಮತ್ತು ಪ್ರಕಟಣೆ ಕಾರ್ಯಕ್ಕಾಗಿ ಒಂದು ಕೋಟಿ ರೂ. ಒದಗಿಸುವುದಾಗಿ ಮುಖ್ಯಮಂತ್ರಿ ಪ್ರಕಟಿಸಿದರು.

# ರಾಜ್ಯದ 10 ಜಿಲ್ಲೆಗಳ ಪ್ರವಾಸಿ ತಾಣಗಳ ಅಭಿವೃದ್ಧಿ

**ಬೆಂಗಳೂರು:** ಸಿಎಂ ಸಿದ್ದರಾಮಯ್ಯ ತಮ್ಮ ಬಜೆಟ್ ಮಂಡನೆಯ ವೇಳೆ ಪ್ರವಾಸೋದ್ಯಮ ಇಲಾಖೆಗೆ ಭರ್ಜರಿ ಘೋಷಣೆಯನ್ನೇ ನೀಡಿದ್ದಾರೆ ರಾಜ್ಯದ ಪ್ರಮುಖ ಧಾರ್ಮಿಕ ಸ್ಥಳವಾದ ಸವದತ್ತಿಯ ಶ್ರೀ ರೇಣುಕಾ ಯಲ್ಲಮ್ಮ ಕ್ಷೇತ್ರ ಹಾಗೂ ಬೆಂಗಳೂರಿನಲ್ಲಿರುವ ದೇವಿಕಾರಾಣಿ ರೋರಿಕ್ ಎಸ್ಟೇಟ್ ಅನ್ನು ವಿಶೇಷ ಬಂಡವಾಳ ಯೋಜನೆಯಡಿ ಒಟ್ಟಾರೆ 199 ಕೋಟಿ ರೂ ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುವುದು.

ರಾಜ್ಯದ ಆಯ್ದ 10 ಜಿಲ್ಲೆಗಳಲ್ಲಿನ ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸಲು 2025-26ನೇ ಸಾಲಿನಲ್ಲಿ 50 ಕೋಟಿ ರೂ ಅನುದಾನವನ್ನು ಒದಗಿಸಲಾಗುವುದು ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಕಡಲ ತೀರದ ಅಭಿವೃದ್ಧಿ ಹಾಗೂ ರಸ್ತೆಬದಿ ಸೌಲಭ್ಯಗಳನ್ನು ಉನ್ನತೀಕರಿಸುವ ಮೂಲಕ ಶೈಕ್ಷಣಿಕ, ಆರೋಗ್ಯ ಸಾಹಸ, ಪರಿಸರ, ಜಲಸಾರಿಗೆ ಹಾಗೂ ಕಡಲ ತೀರದ ಪ್ರವಾಸೋದ್ಯಮಗಳಿಗೆ ಲಭ್ಯವಿರುವ ಅವಕಾಶಗಳನ್ನು ಪಾರಂಪರಿಕ ಪ್ರವಾಸಿ ತಾಣಗಳ ಪಟ್ಟಿಗೆ ಸೇರ್ಪಡೆಗೊಂಡಿರುವ ಬೇಲೂರು ಹಳೇಬೀಡು-ಸೋಮನಾಥಪುರ ಪ್ರವಾಸಿ ತಾಣಗಳಲ್ಲಿ ಮೂಲಸೌಲಭ್ಯಗಳನ್ನು ಅಭಿವೃದ್ಧಿಪಡಿಸಲಾಗುವುದು. ಪ್ರವಾಸಿಗರ ಸುರಕ್ಷತೆಗಾಗಿ ಪ್ರವಾಸಿ ತಾಣಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರವಾಸಿ ಮಿತ್ರರಿಗೆ ತರಬೇತಿ ನೀಡಿ ಅವರ ಸಂಖ್ಯೆಯನ್ನು 1000 ಕ್ಕೆ ಹೆಚ್ಚಿಸಲಾಗುವುದು ಹಾಗೂ ಪ್ರವಾಸಿಗರಿಗೆ ಮಾಹಿತಿ ನೀಡಲು 2420 ಪ್ರವಾಸಿ ಸಹಾಯವಾಣಿ ತೆರೆಯಲಾಗುವುದು. ರಾಜ್ಯದ ಸ್ಮಾರಕಗಳ ಸಂರಕ್ಷಣೆಗೆ ಅಗತ್ಯವಾಗಿರುವ ಮೂಲಸೌಕರ್ಯಗಳನ್ನು ಸೃಷ್ಟಿಸಲು 25 ಸ್ಮಾರಕಗಳನ್ನು ದತ್ತು ನೀಡಲಾಗಿದೆ. ಮುಂದಿನ ಹಂತದಲ್ಲಿ ಇನ್ನೂ ಹೆಚ್ಚಿನ ಸ್ಮಾರಕಗಳನ್ನು "ನಮ್ಮ ಸ್ಮಾರಕ ಡಿಜಿಟಲ್ ವೇದಿಕೆಯ ಮುಖಾಂತರ ದತ್ತು ಪಡೆಯಲಾಗುವುದು.

ಪ್ರವಾಸಿಗರ ಸುರಕ್ಷತೆಗಾಗಿ ಪ್ರವಾಸಿ ತಾಣಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪ್ರವಾಸಿ ಮಿತ್ರರಿಗೆ ತರಬೇತಿ ನೀಡಿ ಅವರ ಸಂಖ್ಯೆಯನ್ನು 1000ಕ್ಕೆ ಹೆಚ್ಚಿಸಲಾಗುವುದು ಹಾಗೂ ಪ್ರವಾಸಿಗರಿಗೆ ಮಾಹಿತಿ ನೀಡಲು 2427 ಪ್ರವಾಸಿ ಸಹಾಯವಾಣಿ ತೆರೆಯಲಾಗುವುದು. - ರಾಜ್ಯದ ಸ್ಮಾರಕಗಳ ಸಂರಕ್ಷಣೆಗೆ ಅಗತ್ಯವಾಗಿರುವ ಮೂಲಸೌಕರ್ಯಗಳನ್ನು ಸೃಷ್ಟಿಸಲು 25 ಸ್ಮಾರಕಗಳನ್ನು ದತ್ತು ನೀಡಲಾಗಿದೆ.

# ಮೈಸೂರಿನಲ್ಲಿ ಫಿಲಂ ಸಿಟಿ: 150 ಎಕರೆ ಜಮೀನು, 500 ಕೋಟಿ ಹಣ ಮೀಸಲು

ಕರ್ನಾಟಕದಲ್ಲಿ ಸುಸಜ್ಜಿತ, ಅತ್ಯಾಧುನಿಕ ಸೌಕರ್ಯಗಳುಳ್ಳ ಫಿಲಂ ಸಿಟಿ ನಿರ್ಮಾಣ ಆಗಬೇಕು ಎಂಬುದು ದಶಕಗಳ ಕೂಗಾಗಿದೆ. ಈ ವರೆಗೆ ಬಂದ ಎಲ್ಲ ಸರ್ಕಾರಗಳನ್ನು ಈ ಬಗ್ಗೆ ಚಿತ್ರರಂಗ ಮನವಿ ಮಾಡಿದೆ. ಕೆಲ ಸರ್ಕಾರಗಳು ಭರವಸೆಯನ್ನೂ ನೀಡಿದ್ದವು. ಆದರೆ ಈ ವರೆಗೆ ಫಿಲಂ ಸಿಟಿ ನಿರ್ಮಾಣ ಆಗಿಲ್ಲ. ಈ ಬಾರಿ ಮತ್ತೊಮ್ಮೆ ಸಿದ್ದರಾಮಯ್ಯ ಅವರು ಬಜೆಟ್‌ನಲ್ಲಿ ಮೈಸೂರಿನಲ್ಲಿ ಫಿಲಂ ಸಿಟಿ ನಿರ್ಮಾಣಕ್ಕೆ 500 ಕೋಟಿ ಹಣವನ್ನು ಮೀಸಲಿಟ್ಟಿದ್ದಾರೆ. ಜೊತೆಗೆ 150 ಎಕರೆ ಜಾಗವನ್ನು ಸಹ ಕಾಯ್ದಿರಿಸಿರುವುದಾಗಿ ಘೋಷಣೆ ಮಾಡಿದ್ದಾರೆ.



ಕೆಲ ದಿನಗಳ ಹಿಂದೆ ನಡೆದ ಬೆಂಗಳೂರು ಅಂತರಾಷ್ಟ್ರೀಯ ಚಲನಚಿತ್ರೋತ್ಸದಲ್ಲಿ ಸಹ ಈ ಬಗ್ಗೆ ಮಾತನಾಡಿದ್ದ ಸಿಎಂ ಸಿದ್ದರಾಮಯ್ಯ, ನಮ್ಮ ಸರ್ಕಾರ ಫಿಲಂ ಸಿಟಿ ನಿರ್ಮಾಣಕ್ಕೆ ಬದ್ಧವಾಗಿದೆ ಎಂದು ಹೇಳಿದ್ದರು. ಅದರಂತೆ ಇಂದು ಬಜೆಟ್‌ನಲ್ಲಿ ಈ ಬಗ್ಗೆ ಅಧಿಕೃತ ಘೋಷಣೆ ಮಾಡಿದ್ದಾರೆ. ಅಸಲಿಗೆ ಈ ಹಿಂದೆ ಸಹ ಕೆಲ ಸರ್ಕಾರಗಳು ಫಿಲಂ ಸಿಟಿ ನಿರ್ಮಾಣ ಮಾಡುವುದಾಗಿ ಘೋಷಣೆ ಮಾಡಿದ್ದವು. ಆದರೆ ಕಾರ್ಯರೂಪಕ್ಕೆ ಬಂದಿರಲಿಲ್ಲ. ಈಗಲಾದರೂ ಇದು ಕಾರ್ಯರೂಪಕ್ಕೆ ಬರಲಿದೆಯೇ ಕಾದು ನೋಡಬೇಕಿದೆ.

ಇಲ್ಲಿ ಗಮನಿಸಬೇಕಾದ ಅಂಶವೊಂದಿದೆ. ಭಾರತದ ಪ್ರಸಿದ್ಧ ಫಿಲಂ ಸಿಟಿಗಳಲ್ಲಿ ಪ್ರಮುಖವಾಗಿರುವ ರಾಮೋಜಿ ರಾವ್ ಫಿಲಂ ಸಿಟಿ ನಿರ್ಮಾಣವಾಗಿರುವುದು 1600 ಎಕರೆ ಪ್ರದೇಶದಲ್ಲಿ. ಆದರೆ ಈಗ ಮೈಸೂರಿನಲ್ಲಿ ಫಿಲಂ ಸಿಟಿ ನಿರ್ಮಾಣಕ್ಕೆ ಸರ್ಕಾರ ಮೀಸಲಿಟ್ಟಿರುವುದು 150 ಎಕರೆ. ಫಿಲಂ ಸಿಟಿ ನಿರ್ಮಾಣಕ್ಕೆ ಇಷ್ಟು ಸ್ಥಳ ಸಾಕಾಗುತ್ತದೆಯೇ, ಇಷ್ಟು ಜಾಗದಲ್ಲಿ ಸೂಕ್ತವಾದ ಫಿಲಂ ಸಿಟಿ ನಿರ್ಮಾಣ ಸಾಧ್ಯವೇ ಎಂಬುದು ಸಹ ವಿಶ್ಲೇಷಣೆಗೆ ಒಳಗಾಗಬೇಕಿದೆ.

# ಆರೋಗ್ಯ ಕ್ಷೇತ್ರಕ್ಕೆ ಭರಪೂರ ಕೊಡುಗೆ

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯನವರು ಆರೋಗ್ಯ ವಲಯಕ್ಕೆ ಭರ್ಜರಿ ಕೊಡುಗೆಗಳನ್ನು ನೀಡಿದ್ದು, ಆರೋಗ್ಯ ಕ್ಷೇತ್ರಕ್ಕೆ 17,473 ಕೋಟಿ ರೂಪಾಯಿ ಮೀಸಲಿಟ್ಟಿದ್ದಾರೆ.

ಆಯುಷ್ಮಾನ್ ಯೋಜನೆಯಂತೆ ಆರೋಗ್ಯ ಕರ್ನಾಟಕ ಯೋಜನೆ: ಆಯುಷ್ಮಾನ್ ಭಾರತ್ ರೀತಿಯೇ ಆರೋಗ್ಯ ಕರ್ನಾಟಕ ಯೋಜನೆಯಡಿ ನೋಂದಾಯಿತ ಫಲಾನುಭವಿಗಳ 5 ಲಕ್ಷ ರೂ. ಚಿಕಿತ್ಸೆಯ ಮಿತಿಯನ್ನು ಪೂರ್ಣಗೊಳಿಸಿದ್ದಲ್ಲಿ, ಹೆಚ್ಚುವರಿಯಾಗಿ ಹೃದ್ರೋಗ ಹಾಗೂ ಕ್ಯಾನ್ಸರ್ ಖಾಯಿಲೆಗಳಿಗೆ 5 ಲಕ್ಷ ರೂ.ವರೆಗೆ, ಇತರೆ ಖಾಯಿಲೆಗಳಿಗೆ 2 ಲಕ್ಷ ರೂ. ವರೆಗೆ ವೈದ್ಯಕೀಯ ವೆಚ್ಚ ಮರುಪಾವತಿ ಮಾಡಲಾಗುವುದು.

ಕಾರ್ಮಿಕರಿಗೆ ಉತ್ತಮ ಆರೋಗ್ಯ ಸೇವೆಯನ್ನು ಒದಗಿಸಲು ಪೂರಕವಾಗಿ ರಾಜ್ಯ ವಿಮಾ ಆಸ್ಪತ್ರೆಗಳಿಗೆ ಅಗತ್ಯ ಮೂಲಸೌಲಭ್ಯ ಕಲ್ಪಿಸಲು 51 ಕೋಟಿ ರೂ. ಅನುದಾನ ನಿಗದಿಪಡಿಸಲಾಗುವುದು. ಇದರಡಿ ಆಸ್ಪತ್ರೆಗಳ ಶುಚಿತ್ವ, ಪರಿಕರಗಳ ಖರೀದಿ, ತುರ್ತು ವಿಭಾಗಗಳ ನವೀಕರಣ, ಪ್ರಯೋಗಾಲಯಗಳ ಉನ್ನತೀಕರಣ ಮುಂತಾದ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಸಿಎಂ ಸಿದ್ದರಾಮಯ್ಯ ತಿಳಿಸಿದರು.

ವಿವಿಧ ಜಿಲ್ಲೆಗಳಿಗೆ ಆಸ್ಪತ್ರೆಗಳ ಘೋಷಣೆ: ಮೈಸೂರು, ಕಲಬುರಗಿಯಲ್ಲಿ 100 ಕೋಟಿ ವೆಚ್ಚದಲ್ಲಿ ನಿಮ್ಹಾನ್ಸ್ ಮಾದರಿಯ ಸಂಸ್ಥೆಗಳ ಆರಂಭ, ಕೊಪ್ಪಳದಲ್ಲಿ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆ, ರಾಯಚೂರಿನಲ್ಲಿ ಕಿದ್ವಾಯಿ ಆಸ್ಪತ್ರೆ, ಯಲಬುರ್ಗಾ, ಜೇವರ್ಗಿ, ಯಾದಗಿರಿಯಲ್ಲಿ ನರ್ಸಿಂಗ್ ಕಾಲೇಜು ಹಾಗೂ ಕೋಲಾರದಲ್ಲಿ ವೈದ್ಯಕೀಯ ಕಾಲೇಜು ಆರಂಭಿಸಲಾಗುವುದು ಎಂದು ಸಿದ್ದರಾಮಯ್ಯ ತಿಳಿಸಿದರು.

# ‘ಮಿಥ್ಯ ನಿಮ್ಮನ್ನೂ ಕಾಡಲಿದೆ’



ಕನ್ನಡ ಚಿತ್ರರಂಗದ ಬಹುಬೇಡಿಕೆ ನಟ ರಕ್ಷಿತ್ ಶೆಟ್ಟಿ ನಿರ್ಮಾಣದ ಪರಂವಃ ಸ್ಟುಡಿಯೋಸ್‌ನಿಂದ ನಿರ್ಮಾಣಗೊಂಡಿರುವ ಮಿಥ್ಯ ಸಿನಿಮಾ ನಾಳೆ ತೆರೆಕಾಣಲಿದೆ. ಚಿತ್ರದ ಬಗ್ಗೆ ನಿರ್ಮಾಪಕ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

"ಸಿನಿಮಾ ಪ್ರಿಯರಿಗೆ, ಕೆಲವು ಸಿನಿಮಾಗಳು ನಿಮ್ಮ ಅಂತರಂಗದೊಳಗೆ ಬಚ್ಚಿಟ್ಟು, ನೀವೇ ಮರೆತಿರುವ ಹಳೆಯ ನೆನಪಿನ ಪೆಟ್ಟಿಗೆಯನ್ನು ಥಟ್ಟನೆ ತೆರೆದು ಬಿಡುತ್ತದೆ. ನನಗೆ ಅಂತಹುದೇ ಅನುಭವ ಕೊಟ್ಟ ಸಿನಿಮಾ ಮಿಥ್ಯ. 2021 ರಲ್ಲಿ ಸ್ಕ್ರಿಪ್ಟ್ ಓದಿ ಮುಗಿಸಿದಾಗ ಆದ ಅನುಭವ ನಿಖರವಾಗಿ ಬಣ್ಣಿಸುವುದು ಕಷ್ಟ. ಅಪರೂಪದ ಮುಗ್ಧತೆ, ಪ್ರಾಮಾಣಿಕತೆ.. ತೀರಾ ಸರಳ ಎಂದೆನಿಸಿದರೂ ಘಾಡವಾದ ಪಾತ್ರಗಳು! ಈ ಕಥೆಯನ್ನು ಎಲ್ಲರೊಂದಿಗೆ ಹಂಚಿಕೊಳ್ಳಬೇಕೆಂಬುದರಲ್ಲಿ ನನಗೆ ಸಂಶಯವೇ ಇರಲಿಲ್ಲ ಎಂದು ತಮ್ಮ ಎಕ್ಸ್ ಪೋಸ್ಟ್‌ನಲ್ಲಿ ಹಂಚಿಕೊಂಡಿದ್ದಾರೆ.

"ಸುಮಂತ್ ಹಾಗೂ ನನ್ನ ಗೆಳೆತನ ಹಳೆಯದು. ಶಾರ್ಟ್ ಫಿಲ್ಮ್‌ಗಳನ್ನು ಮಾಡುತ್ತಾ, ಸಿನಿಮಾದ ಸೂಕ್ಷ್ಮತೆಗಳನ್ನು ಒಟ್ಟಿಗೆ ಕಲಿತವರು ನಾವು. ಒಬ್ಬ ಕಥೆಗಾರನಾಗಿ ಅವನ ಬೆಳವಣಿಗೆಯನ್ನು ಹತ್ತಿರದಿಂದ ನೋಡಿದ್ದೇನೆ. ಸಂಬಂಧಗಳನ್ನು ಅನ್ವೇಷಿಸುವ ಕಥೆಗಳಿಗೆ ಇರುವ ಅವನ ಒಲವೇ ಅವನ ಬಲ. ಅವನು ನಿರ್ದೇಶಿಸಿದ ವೆಬ್ ಸೀರಿಸ್ 'ಏಕಂ'ನಲ್ಲೂ ನೀವು ಅದನ್ನು ಕಾಣಬಹುದು. ಅಂತಹದೇ ಮತ್ತೊಂದು ಕಥೆ ಮಿಥ್ಯ. ಒಂದು ಹುಡುಗನ ಕಥೆ. ಅವನ ಹುಡುಕಾಟದ ಕಥೆ. ಆದರೆ, ಅವನ ಈ ಹುಡುಕಾಟದಲ್ಲಿ ನಮಗೇ ಅರಿವಿಲ್ಲದ ಹಾಗೆ, ನಮ್ಮಲ್ಲಿ ನಾವೇ ಏನೋ ಪಡೆದುಕೊಳ್ಳುತ್ತೇವೆ".

"ಈ ಸಿನಿಮಾ ನಿಮ್ಮನ್ನು ನಗಿಸುತ್ತದೆ, ಅಳುವಂತೆ ಮಾಡುತ್ತದೆ ಮತ್ತು ಕೊನೆಯಲ್ಲಿ ನಿಮ್ಮೊಳಗೆ ಬದುಕಿನ ಬಗ್ಗೆ ಒಂದಿಷ್ಟು ಭರವಸೆಯನ್ನು ಮೂಡಿಸುತ್ತದೆ. ಅಷ್ಟು ಸುಲಭದಲ್ಲಿ ನೀವು ಈ ಸಿನಿಮಾವನ್ನಾಗಲಿ ಅಥವಾ ಈ ಸಿನಿಮಾ ನಿಮ್ಮನ್ನಾಗಲಿ ಬಿಡುವುದಿಲ್ಲ! ಸಿನಿಮಾ ಮುಗಿದ ಎಷ್ಟೋ ಹೊತ್ತಿನ ನಂತರವೂ ಮಳೆಯ ಗುಂಗು. ಮಳೆ ಮಿಥುನನ ಪಯಣದ ಮೂಕ ವೀಕ್ಷಕನಂತೆ. ಮತ್ತು ಈ ಸಿನಿಮಾದ ಸಂಗೀತ! ಆ ಹುಡುಗನ ಮನಸ್ಸಿನ ತಳಮಳ, ನೋವು, ಹತಾಶೆ... ಒಟ್ಟಾರೆ ಅವನ ಭಾವನೆಗಳೇ ನಮ್ಮೊಂದಿಗೆ ಮಾತನಾಡಿದಂತೆ. ಇವೆಲ್ಲವನ್ನೂ ಮೀರಿ, ಸಿನಿಮಾ ಮತ್ತು ಬದುಕಿನ ನಡುವೆ ಇರುವ ರೇಖೆಯನ್ನೇ ಅಳಿಸುವಂತಿರುವ ಪ್ರತಿ ಪಾತ್ರದ ನಟನೆ... ಅದೆಷ್ಟು ನೈಜ್ಯ, ಅದೆಷ್ಟು ಸರಳ, ಅದೆಷ್ಟು ಜಟಿಲ!".

ಮಿಥ್ಯ ನಿಮ್ಮೊಳಗೆ, ನಿಮ್ಮ ಮನದೊಳಗೆ ಮನೆ ಮಾಡುತ್ತದೆ. ನನ್ನನ್ನು ಕಾಡಿದಂತೆ ನಿಮ್ಮನ್ನು ಕಾಡುತ್ತದೆ. ಇಂತಿ ನಿಮ್ಮ ಪ್ರೀತಿಯ ರಕ್ಷಿತ್ ಶೆಟ್ಟಿ.

ಸುಮಂತ್ ಭಟ್ ಬರೆದು ನಿರ್ದೇಶಿಸಿರುವ ಚಿತ್ರವನ್ನು ರಕ್ಷಿತ್ ಶೆಟ್ಟಿ ನಿರ್ಮಿಸಿದ್ದಾರೆ. ಅತಿಶ್ ಎಸ್ ಶೆಟ್ಟಿ, ಪ್ರಕಾಶ್ ತುಮಿನಾಡ್, ರೂಪಾ ವರ್ಕಾಡಿ ಚಿತ್ರದಲ್ಲಿ ಕೆಲಸ ಮಾಡಿದ್ದಾರೆ.

# ‘ದೇವರ 2’: ಜಾನ್ವಿ ರಗಡ್ ಲುಕ್



ಕಳೆದ ವರ್ಷ ಯಂಗ್ ಟೈಗರ್ ಎನ್‌ಟಿಆರ್ (ಎಖ ಓಖಖ) ನಟಿಸಿದ ದೇವರ ಚಿತ್ರ ಬ್ಲಾಕ್ ಬಸ್ಟರ್ ಹಿಟ್ ಆಗಿದ್ದು ಗೊತ್ತೇ ಇದೆ. ಮ್ಯಾನ್ ಆಫ್ ಮಾಸಸ್ ನಟಿಸಿದ ಈ ಚಿತ್ರವನ್ನು ನಿರ್ದೇಶಕ ಕೊರಟಾಲ ಶಿವ ನಿರ್ದೇಶಿಸಿದ್ದಾರೆ. ಎರಡು ಭಾಗಗಳಲ್ಲಿ ತಯಾರಾಗುತ್ತಿರುವ ಈ ಚಿತ್ರದ ಮೊದಲ ಭಾಗ ದಸರಾ ಉಡುಗೊರೆಯಾಗಿ ಬಿಡುಗಡೆಯಾಗಿ ಯಶಸ್ಸನ್ನು ಕಂಡಿತು. ಈ ಚಿತ್ರದಲ್ಲಿ ತಾರಕ್‌ಗೆ ಜೋಡಿಯಾಗಿ ಬಾಲಿವುಡ್ ಸುಂದರಿ ಜಾನ್ವಿ ಕಪೂರ್ ನಟಿಸಿದ್ದಾರೆ. ಈಗ ಅವರ ಜನ್ಮದಿನದ ಪ್ರಯುಕ್ತ ಹೊಸ ಪೋಸ್ಟರ್ ರಿಲೀಸ್ ಆಗಿದೆ.

ಈ ಮೂಲಕ ‘ದೇವರ 2’ ಸಿನಿಮಾ ಬರಲ್ಲ ಎನ್ನುವವರ ಬಾಯಿ ಮುಚ್ಚಿಸಿದಂತೆ ಆಗಿದೆ.

‘ದೇವರ’ ಚಿತ್ರದ ಮೂಲಕ ಜಾನ್ವಿ ತೆಲುಗು ಪರದೆಗೆ ಪಾದಾರ್ಪಣೆ ಮಾಡಿದರು. ಈ ಚಿತ್ರದಲ್ಲಿ, ಅವರು ತೆಲುಗು ಹಳ್ಳಿಯ ವಿಶಿಷ್ಟ ಹುಡುಗಿಯಾಗಿ ಕಾಣಿಸಿಕೊಂಡರು ಮತ್ತು ತಮ್ಮ ಸೌಂದರ್ಯ ಮತ್ತು ನಟನೆಯಿಂದ ಜನರನ್ನು ಆಕರ್ಷಿಸಿದರು. ಸದ್ಯ ‘ದೇವರ’ ಚಿತ್ರದ ಎರಡನೇ ಭಾಗದ ಪ್ರೀ-ಪ್ರೊಡಕ್ಷನ್ ಕೆಲಸಗಳು ನಡೆಯುತ್ತಿವೆ. ಮಾರ್ಚ್ 6 ಜಾನ್ವಿ ಕಪೂರ್ ಹುಟ್ಟುಹಬ್ಬ. ಈ ಸಂದರ್ಭದಲ್ಲಿ, ಚಿತ್ರತಂಡವು ‘ದೇವರ’ ಚಿತ್ರದ ಮತ್ತೊಂದು ಪೋಸ್ಟರ್ ಅನ್ನು ಬಿಡುಗಡೆ ಮಾಡಿದೆ. ಮಾರ್ಚ್ 6 ರಂದು ಜಾನ್ವಿ ಕಪೂರ್ ಅವರ 28 ನೇ ಹುಟ್ಟುಹಬ್ಬ. ಈ ಸಂದರ್ಭದಲ್ಲಿ ಅಭಿಮಾನಿಗಳು ಮತ್ತು ಚಿತ್ರರಂಗದ ಗಣ್ಯರು ಅವರ ಹುಟ್ಟುಹಬ್ಬದ ಶುಭಾಶಯಗಳನ್ನು ಕಳುಹಿಸುತ್ತಿದ್ದಾರೆ. ಅಲ್ಲದೆ, ಆರ್‌ಸಿ 16 ಚಿತ್ರದ ಜಾನ್ವಿಯ ಫಸ್ಟ್ ಲುಕ್ ಪೋಸ್ಟರ್ ಬಿಡುಗಡೆಯಾಗಿದೆ. ‘ದೇವರ’ ತಂಡವು ಜಾನ್ವಿ ಪಾತ್ರದ ಹೊಸ ಪೋಸ್ಟರ್ ಅನ್ನು ಹಂಚಿಕೊಂಡಿದ್ದು, ಅವರಿಗೆ ಶುಭ ಹಾರೈಸಿದೆ. ಇದರಲ್ಲಿ ಜಾನ್ವಿ ಕಪೂರ್ ಭುಜದ ಮೇಲೆ ಮೀನನ್ನು ಹೊತ್ತುಕೊಂಡು ಬಾಯಿಯಲ್ಲಿ ಚಾಕುವನ್ನು ಹಿಡಿದುಕೊಂಡಿರುವುದು ಕಂಡು ಬರುತ್ತದೆ.ಮೊದಲ ಭಾಗದಲ್ಲಿ ಜಾನ್ವಿ ಕಪೂರ್‌ಗೆ ಹೆಚ್ಚಿನ ಸ್ಕೋಪ್ ಇರಲಿಲ್ಲ. ಹೀಗಾಗಿ, ಎರಡನೇ ಭಾಗದಲ್ಲಿ ಅವರ ಪಾತ್ರಕ್ಕೆ ಹೆಚ್ಚಿನ ಬೇಡಿಕೆ ಸೃಷ್ಟಿ ಆಗೋ ಸಾಧ್ಯತೆ ಇದೆ. ಸದ್ಯದ ಪೋಸ್ಟರ್ ‘ದೇವರ ಭಾಗ 2’ನಲ್ಲಿ ಜಾನ್ವಿ ಪಾತ್ರದ ಬಗ್ಗೆ ಹೆಚ್ಚಿನ ಕುತೂಹಲವನ್ನು ಸೃಷ್ಟಿಸಿದೆ. ನಿರ್ದೇಶಕ ಕೊರಟಾಲ ಪ್ರಸ್ತುತ ದೇವರ ಭಾಗ 2 ರ ನಿರ್ಮಾಣ ಕಾರ್ಯದಲ್ಲಿ ನಿರತರಾಗಿದ್ದಾರೆ.

Edited, Published and Owned by Laxmiprasanna R.H, #1652/6, 20th Cross, 8th Main, C Block, SahakarNagar, Bangalore-560092. Printed by P N Printers, Narasipalya, Arishinakunte(Post), Kasaba(hobali), Nelamangala, Bengaluru-562123
Email-mussanje2010@gmail.com, Phone: 9448074878